ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 141 ಸಂಚಿಕೆ- 141 | PAGE-8 ಪುಟ-8 | ಭಾನುವಾರ 13.07.2025 | RS.2/- ಬೆಲೆ 2/-

# ರೈತರ ಹಿತ ಕಾಯಲು ಕೃಷಿ ಆವಿಷ್ಕಾರ ಯೋಜನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜು.12: ಕಲ್ಯಾಣ ಕರ್ನಾಟಕ ಭಾಗದ ರೈತರ ಹಿತ ಕಾಪಾಡುವ ನಿಟ್ಟಿನಲ್ಲಿ ಕೃಷಿ ಆವಿಷ್ಕಾರ ಯೋಜನೆ ಜಾರಿಗೆ ತರಲಾಗುತ್ತಿದ್ದು, ಈ ಯೋಜನೆಯಡಿ ವಿಭಾಗದ 40 ತಾಲೂಕು ಕೇಂದ್ರಗಳಲ್ಲಿ ತಲಾ ಒಂದು ಗೋದಾಮು ನಿರ್ಮಾಣಕ್ಕೆ ಯೋಜನೆ ರೂಪಿಸಲಾಗುತ್ತಿದೆ ಎಂದು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅಧ್ಯಕ್ಷ ಡಾ.ಅಜಯಸಿಂಗ್ ತಿಳಿಸಿದರು. ಕೆ.ಕೆ.ಆರ್.ಡಿ.ಬಿ ಸಭಾಂಗಣದಲ್ಲಿ ಸುದ್ದಿಗೋಷ್ಠಿಉದ್ದೇಶಿಸಿ ಮಾತನಾಡಿದ ಅವರು,ಕೃಷಿಆವಿಷ್ಕಾರಯೋಜನೆಗಾಗಿ ರೂ.60ಕೋಟಿಮೀಸಲಿಡಲಾಗುತ್ತಿದ್ದು, ಈ ಹಣ ಬಳಸಿಕೊಂಡು ತಾಲೂಕಿಗೆ ಒಂದರಂತೆ 40 ಗೋದಾಮುಗಳನ್ನು ನಿರ್ಮಿಸಲಾಗುತ್ತಿದೆ ಎಂದರು.

ಇದರ ಜೊತೆಗೆ, ಕೃಷಿ ಆವಿಷ್ಕಾರದ ಭಾಗವಾಗಿ ಸಣ್ಣ ನೀರಾವರಿ ಇಲಾಖೆ ವತಿಯಿಂದ ರೈತರ ಹೊಲಗಳಿಗೆ ನೀರು ಲಭಿಸುವಂತಾಗಲು ಚೆಕ್‌ಡ್ಯಾಂ, ಬದು ನಿರ್ಮಾಣ ಸೇರಿದಂತೆ ಇನ್ನಿತರ ರೈತೋಪಯೋಗಿ ಕಾರ್ಯಗಳಿಗಾಗಿ ರೂ.75 ಕೋಟಿ ಮೀಸಲಿರಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು. ಪ್ರಸಕ್ತ ಸಾಲಿನಲ್ಲಿ ಕೆಕೆಆರ್‌ಡಿಬಿ ವತಿಯಿಂದ ಮೈಕ್ರೋ ಯೋಜನೆಯಡಿ ರೂ. 2100 ಕೋಟಿ ಹಾಗೂ ಮ್ಯಾಕ್ರೊ ಯೋಜನೆಯಡಿ ರೂ.900 ಕೋಟಿ ಮೊತ್ತದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. ಇದರ ಜೊತೆಗೆ ಕಂದಾಯ ಮತ್ತು ಅರಣ್ಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಂದ ರೂ.2000 ಕೋಟಿ ಅನುದಾನ ಸಂಗ್ರಹಿಸಿ ಒಟ್ಟು ರೂ.5000 ಕೋಟಿ ವೆಚ್ಚದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ಎಂದು ಡಾ.ಅಜಯಸಿಂಗ್ ವಿವರಿಸಿದರು.


ಆ.4ರಂದು34ಹಾಸ್ಟೆಲ್‌ಗಳಿಗೆಅಡಿಗಲ್ಲು:ಕೆ.ಕೆ.ಆರ್.ಡಿ.ಬಿ ವತಿಯಿಂದ 2023-24ನೇ ಅನುದಾನದಲ್ಲಿ ಹಿಂದುಳಿದವರ್ಗಗಳ ಅಭಿವೃದ್ಧಿಗಾಗಿ ಪ್ರತ್ಯೇಕವಾಗಿ ಯೋಜನೆ ರೂಪಿಸಿದ್ದು, ಇದರ ಅಂಗವಾಗಿ ಕಲ್ಯಾಣ ಕರ್ನಾಟಕ ಭಾಗದ 34 ವಿಧಾನಸಭಾ ಕ್ಷೇತ್ರಗಳಲ್ಲಿ ಕ್ಷೇತ್ರಕ್ಕೆ ಒಂದರಂತೆ ರೂ.154 ಕೋಟಿ ಅಂ-ದಾಜು ವೆಚ್ಚದಲ್ಲಿ ವಿದ್ಯಾರ್ಥಿಗಳಿಗಾಗಿ ಹಾಸ್ಟೆಲ್‌ಗಳನ್ನು ನಿರ್ಮಿಸುವ ಕಾಮಗಾರಿಗೆ ಕೊಪ್ಪಳದಲ್ಲಿ ಆ.4ರಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅಡಿಗಲ್ಲು ನೆರವೇರಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಸೇರಿದಂತೆ ಕಲ್ಯಾಣ ಕರ್ನಾಟಕ ಭಾಗದ ಎಲ್ಲ ಜಿಲ್ಲೆಗಳ ಉಸ್ತುವಾರಿ ಸಚಿವರುಗಳು, ಶಾಸಕರು ಉಪಸ್ಥಿತರಿರುತ್ತಾರೆ ಎಂದು ಅಜಯಸಿಂಗ್ ತಿಳಿಸಿದರು. ಪ್ರಸಕ್ತ ಸಾಲಿನ ರೂ.5000 ಕೋಟಿ ಅನುದಾನ ಬಳಸಿಕೊಂಡು ಕೈಗೊಳ್ಳಲು ಉದ್ದೇಶಿಸಿರುವ ಕಾಮಗಾರಿಗಳಿಗೆ ಕ್ರಿಯಾ ಯೋಜನೆ ರೂಪಿಸಿ ಅನುಮೋದನೆ ನೀಡುವಂತೆ ಕೋರಿ ಇತ್ತೀಚೆಗೆ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಗಿದೆ. ರಾಜ್ಯ ಯೋಜನಾ ಮತ್ತು ಸಾಂಖ್ಯಿಕ ಇಲಾಖೆಯ ಸಚಿವ ಡಿ.ಸುಧಾಕರ ಸಹ

ಈ ವೇಳೆ ಜೊತೆಗಿದ್ದರು. ಈ ತಿಂಗಳಾಂತ್ಯದೊಳಗೆ ರಾಜ್ಯಪಾಲರಿಂದ ಅನುಮೋದನೆ ಲಭಿಸುವ ಸಾಧ್ಯತೆಯಿದೆ ಎಂದು ಡಾ.ಸಿಂಗ್ ವಿಶ್ವಾಸ ವ್ಯಕ್ತಪಡಿಸಿದರು.

2022-23ನೇ ಸಾಲಿನಲ್ಲಿ ರೂ.2000 ಕೋಟಿ ಹಾಗೂ 2023-24ನೇ ಸಾಲಿನಲ್ಲಿ ರೂ.1900 ಕೋಟಿ ಖರ್ಚು ಮಾಡುವ ಮೂಲಕ ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಪ್ರಸಕ್ತ ಸಾಲಿನಲ್ಲಿ ರೂ.5000 ಕೋಟಿ ಸಂಪೂರ್ಣ ಅನುದಾನ ಖರ್ಚು ಮಾಡುವ ಮೂಲಕ ಹಲವು ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದರು.



## ವಾಯುಸೇನೆಗೆ ಮತ್ತೊಂದು 'ಅಸ್ತ್ರ' ಸೇರ್ಪಡೆ, ಡಿಆರ್‌ಡಿಓ ಪರೀಕ್ಷೆ ಯಶಸ್ವಿ



ಮಲ್ಲಮ್ಮ ನುಡಿ ವಾರ್ತೆ

ಭುವನೇಶ್ವರ್:ಜು.12: ಭಾರತೀಯ ವಾಯುಸೇನೆಗೆ ಮತ್ತೊಂದು ವಿಧ್ವಂಸಕ 'ಅಸ್ತ್ರ' ಸೇರ್ಪಡೆಯಾಗಿದ್ದು, ಡಿಆರ್‌ಡಿಓ ಅಭಿವೃದ್ಧಿಪಡಿಸಿರುವ ಏರ್-ಟು-ಏರ್ ಕ್ಷಿಪಣಿ 'ಅಸ್ತ್ರಾ' ಕ್ಷಿಪಣಿಯ ಪರೀಕ್ಷಾರ್ಥ ಉಡಾವಣೆ ಯಶಸ್ವಿಯಾಗಿದೆ.

ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಮತ್ತು ಭಾರತೀಯ ವಾಯುಪಡೆ ದೇಶೀಯವಾಗಿ ಅಭಿವೃದ್ಧಿಪಡಿಸಿದ ರೇಡಿಯೋ ಫ್ರೀಕ್ವೆನ್ಸಿ ಸೀಕರ್ ಹೊಂದಿರುವ ದೇಶೀಯ ಬಿಯಾಂಡ್ ವಿಷುಯಲ್ ರೇಂಜ್ (ವೀಕ್ಷಣಾ ವ್ಯಾಪ್ತಿಯನ್ನು ಮೀರಿ) ಏರ್-ಟು-ಏರ್ ಕ್ಷಿಪಣಿ 'ಅಸ್ತ್ರಾ' ಕ್ಷಿಪಣಿಯ ಹಾರಾಟ ಪರೀಕ್ಷೆ ಯಶಸ್ವಿಯಾಗಿ ನಡೆಸಿದೆ.

ಒಡಿಶಾ ಕರಾವಳಿಯಲ್ಲಿ ಭಾರತೀಯ ವಾಯುಪಡೆಯ ಸುಖೋಯ್ 30 ಎಂಕೆ1 ಯುದ್ಧ ವಿಮಾನದ ಮೂಲಕ ಈ ಪರೀಕ್ಷೆ ನಡೆಸಲಾಗಿದ್ದು ಪ್ರಾಯೋಗಿಕ ಪರೀಕ್ಷೆ ಯಶಸ್ಸು ಕಂಡಿದೆ, 100 ಕಿ.ಮೀ ವ್ಯಾಪ್ತಿಯಲ್ಲಿ 'ಅಸ್ತ್ರ' ಏರ್-ಟು-ಏರ್ ಕ್ಷಿಪಣಿ ಹಾರಾಟ ಯಶಸ್ವಿಯಾಗಿದೆ.

ವಿವಿಧ ವ್ಯಾಪ್ತಿ, ಗುರಿ ಕೋನಗಳು ಮತ್ತು ಪರಿಸ್ಥಿತಿಗಳಲ್ಲಿ ಹೈಸ್ಪೀಡ್ ಮಾನವರಹಿತ ವೈಮಾನಿಕ ಗುರಿಗಳ ವಿರುದ್ಧ ಪರೀಕ್ಷೆಯ ಸಮಯದಲ್ಲಿ ಎರಡು ಕ್ಷಿಪಣಿ ಉಡಾವಣೆಗಳನ್ನು ನಡೆಸಲಾಯಿತು. ಎರಡೂ ಸಂದರ್ಭಗಳಲ್ಲಿ, ಅಸ್ತ್ರಾ ಕ್ಷಿಪಣಿಗಳು ತಮ್ಮ ಗುರಿಗಳನ್ನು ಹೆಚ್ಚಿನ ನಿಖರತೆಯಿಂದ ನಾಶಪಡಿಸಿವೆ ಎಂದು ಸೇನಾ ಮೂಲಗಳು ತಿಳಿಸಿವೆ.

ರಕ್ಷಣಾ ಕ್ಷೇತ್ರದಲ್ಲಿ ಹೊಸ ಮೈಲಿಗಲ್ಲು

ಈ ಪರೀಕ್ಷೆ ದೇಶೀಯ ರಕ್ಷಣಾ ಸಾಮರ್ಥ್ಯಗಳಿಗೆ ಮಹತ್ವದ ಮೈಲಿಗಲ್ಲಾಗಿದ್ದು, ಶತ್ರುಗುರಿಗಳನ್ನು ಪತ್ತೆಹಚ್ಚಲು ಮತ್ತು ತೊಡಗಿಸಿಕೊಳ್ಳಲು ನಿರ್ಣಾಯಕವಾದ ಆರ್ ಎಫ್ (ಖಚಿಜುಠ ಜಿಡಿಜಡಣಜಟಿಛಿಥಿ) ಸೀಕರ್ ಅನ್ನು ಸಂಪೂರ್ಣವಾಗಿ ಡಿಆರ್‌ಡಿಓ ವಿನ್ಯಾಸಗೊಳಿಸಿದೆ ಮತ್ತು ಅಭಿವೃದ್ಧಿಪಡಿಸಿದೆ. ಚಂಡಿಪುರದ ಇಂಟಿಗ್ರೇಟೆಡ್ ಟೆಸ್ಟ್ ರೇಂಜ್ ನಿಯೋಜಿಸಿದ ರೇಂಜ್ ಟ್ರ್ಯಾಕಿಂ-ಗ್ ಉಪಕರಣಗಳ ಡೇಟಾವನ್ನು ಬಳಸಿಕೊಂಡು ಅಸ್ತ್ರಾ ವ್ಯವಸ್ಥೆಯ ಯಶಸ್ಸನ್ನು ದೃಢಪಡಿಸಲಾಗಿದೆ ಎಂದು ಡಿಆರ್ ಡಿಓ ಮಾಹಿತಿ ನೀಡಿದೆ.

'ಅಸ್ತ್ರ' ವಿಶೇಷತೆ ಏನು?

100 ಕಿ.ಮೀ ವ್ಯಾಪ್ತಿಯನ್ನು ಹೊಂದಿರುವ ಅಸ್ತ್ರಾ ಬಿವಿಆರೆಎಂ ಸುಧಾರಿತ ಮಾರ್ಗದರ್ಶನ ಮತ್ತು ನ್ಯಾವಿಗೇಷನ್ ವ್ಯವಸ್ಥೆಗಳನ್ನು ಹೊಂದಿದೆ. ಶಸ್ತ್ರಾಸ್ತ್ರ ವ್ಯವಸ್ಥೆಯು ವಿವಿಧ ಡಿಆರ್‌ಡಿಓ ಪ್ರಯೋಗಾಲಯಗಳು ಮತ್ತು ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ ಸೇರಿದಂತೆ 50 ಕ್ಕೂ ಹೆಚ್ಚು ಸಾರ್ವಜನಿಕ ಮತ್ತು ಕೈಗಾರಿಕೆಗಳ ನಡುವಿನ ಸಹಯೋಗದ ಫಲಿತಾಂಶವಾಗಿದೆ.

ರಾಜನಾಥ್ ಸಿಂಗ್ ಶ್ಲಾಘನೆ

ರಕ್ಷಣಾ ಸಚಿವ ರಾಜನಾಥ್ ಸಿಂಗ್, ಆರ್‌ಎಫ್ ಸೀಕರ್‌ನ ವಿನ್ಯಾಸ ಮತ್ತು ಅಭಿವೃದ್ಧಿಯಲ್ಲಿ ತೊಡಗಿರುವ ಡಿಆರ್‌ಡಿಓ, ಐಎಎಫ್ ಮತ್ತು ಉದ್ಯಮವನ್ನು ಶ್ಲಾಘಿಸಿದರು ಮತ್ತು ಸ್ಥಳೀಯ ಸೀಕರ್‌ನೊಂದಿಗೆ ಕ್ಷಿಪಣಿಯ ಯಶಸ್ವಿ ಪರೀಕ್ಷೆಯು ನಿರ್ಣಾಯಕ ರಕ್ಷಣಾ ತಂತ್ರಜ್ಞಾನದಲ್ಲಿ ಪ್ರಮುಖ ಮೈಲಿಗಲ್ಲು ಎಂದು ಹೇಳಿದರು.

## ವೃದ್ಧನ ಮೇಲೆ ಕರಡಿ ದಾಳಿ; ಆಸ್ಪತ್ರೆಗೆ ದಾಖಲು




ಮಲ್ಲಮ್ಮ ನುಡಿ ವಾರ್ತೆ

ಕುಕನೂರು:ಜು.12: ತಾಲೂಕಿನ ರಾವಣಕಿ ಮೊರಾರ್ಜಿ ಶಾಲೆಯ ಹತ್ತಿರ ವೃದ್ಧರೊಬ್ಬರ ಮೇಲೆ ಮೂರು ಕರಡಿಗಳು ದಾಳಿ ನಡೆಸಿ ತೀವ್ರವಾಗಿ ಗಾಯ ಗೊಳಿಸಿರುವ ಘಟನೆ ಶುಕ್ರವಾರ ನಡೆದಿದೆ.

ನಾಗಪ್ಪ ಬೆಂಚ್ಚಳ್ಳಿ ರಾವಣಕಿ (60) ಎಂಬ ವ್ಯಕ್ತಿ ಮಧ್ಯಾಹ್ನ ತಮ್ಮ ಜಮೀನಿನಲ್ಲಿ ಕಳೆ ತಗೆಯುವ ಸಮಯದಲ್ಲಿ ಹಿಂದಿನಿಂದ ಬಂದು ಕರಡಿಗಳು ದಾಳಿ ನಡೆಸಿವೆ ಎನ್ನಲಾಗಿವೆ.

ಈ ವೇಳೆ ನಾಗಪ್ಪ ಬೆಂಚ್ಚಳ್ಳಿ ದೊಣ್ಣೆಯಿಂದ ಹೊಡೆಯಲು ಮುಂದಾದರೂ ಕರಡಿಗಳು ಮೇಲರಗಿ ತೀವ್ರವಾಗಿ ಗಾಯಗೊಳಿಸಿವೆ. ತೀವ್ರವಾಗಿ ಗಾಯಗೊಂಡಿರುವ ಅವರನ್ನು ಮಂಗಳೂರಿನ ಸರಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ನಂತರ ಹೆಚ್ಚಿನ ಚಿಕಿತ್ಸೆಗಾಗಿ ಕೊಪ್ಪಳ ಜಿಲ್ಲಾಸ್ಪತ್ರೆಯಲ್ಲಿ ಕರೆದೊಯ್ಯಲಾಯಿತು.

## ಪ್ರತಿ ಮಹಿಳೆಯರಲ್ಲೂ ಹೋರಾಟಗಾರ್ತಿ ಇರುತ್ತಾಳೆ: ಜಿಲ್ಲಾಧಿಕಾರಿ



ಮಲ್ಲಮ್ಮ ನುಡಿ ವಾರ್ತೆ

ಹಾಸನ:ಜು.12:ಅಂತಾರಾಷ್ಟ್ರೀಯ ಬುಕರ್ ಪ್ರಶಸ್ತಿ ಪ್ರಶಸ್ತಿ ಪಡೆದಿರುವ ಬಾನುಮುಷ್ತಾಕ್ ಅವರ ಎದೆಯ ಹಣತೆ ನಾಟಕವನ್ನು ಹಾಸನದ ಕಲಾಕ್ಷೇತ್ರದಲ್ಲಿ ಜನಮನದಾಟ ತಂಡದವರು ಅಚ್ಚುಕಟ್ಟಾಗಿ ಅಭಿನಯಿಸಿದ್ದು, ಜನಮನ ಸೆಳೆಯಿತು. ಇದೇ ಮೊದಲ ಬಾರಿಗೆ ಕತೆಗಾರ್ತಿ ಮತ್ತು ಸಾಹಿತಿ ಬಾನುಮುಷ್ತಾಕ್ ಸಮ್ಮುಖದಲ್ಲಿಯೇ ಈ ನಾಟಕ ಅಭಿನಯಗೊಂಡಿದ್ದು ವಿಶೇಷ. ನಾಟಕವನ್ನು ಪೂರ್ಣ ವೀಕ್ಷಿಸಿದ

(2ನೇ ಪುಟ ನೋಡಿ)

## ಬೆಂಗಳೂರು- ಹುಬ್ಬಳ್ಳಿ- ಸಿಂಧನೂರು ರೈಲಿಗೆ ಕೇಂದ್ರ ಸಚಿವ ವಿ.ಸೋಮಣ್ಣ ಚಾಲನೆ




ಮಲ್ಲಮ್ಮನುಡಿವಾರ್ತೆ ರಾಯಚೂರು ಜು 12 : ಬೆಂಗಳೂರು-ಹುಬ್ಬಳ್ಳಿ ಎಕ್ಸ್‌ಪ್ರೆಸ್ (ಟ್ರೈನ್ ಸಂಖ್ಯೆ17391/92) ರೈಲನ್ನು ಸಿಂಧನೂರವರೆಗೆ ರೈಲು ಸಂಚಾರಕ್ಕೆ ಕೇಂದ್ರ ರೈಲ್ವೇ ಖಾತೆ ಹಾಗೂ ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಅವರು ಶನಿವಾರ ಜಿಲ್ಲೆಯ ಸಿಂಧನೂರಿನ ರೈಲು ನಿಲ್ದಾಣದಲ್ಲಿ ಚಾಲನೆ ನೀಡಿದರು.

ಈ ವೇಳೆ ಸಚಿವರಾದ ವಿ.ಸೋಮಣ್ಣ ಅವರು ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಅವರು 3 ನೇ ಭಾರಿಗೆ ದೇಶದ ಪ್ರಧಾನಿಗಳಾದ ನಂತರ ರೈಲ್ವೆ ಇಲಾಖೆಯಲ್ಲಿ ಹಲವು ಕ್ರಾಂತಿಕಾರಕ ಕೆಲಸ ಮಾಡಿದ್ದಾರೆ. ಅದರ ಭಾಗವಾಗಿ ಹಲವು ವರ್ಷಗಳ ಕನಸಿನ ರೈಲು ಸಂಚಾರಕ್ಕೆ ಇಂದು ಚಾಲನೆ ನೀಡಲಾಗಿದೆ ಎಂದರು.

ಜನತೆಗೆ ಉತ್ತಮ ಸಂಪರ್ಕ ಸೌಲಭ್ಯ ನೀಡುವ ಉದ್ದೇಶದಿಂದ ರೈಲ್ವೆ ಇಲಾಖೆ ಸಿಂಧನೂರಿಗೆ ಹೊಸದಾಗಿ ವಿಶೇಷ ರೈಲು ಸೇವೆ ಪ್ರಾರಂಭಿಸಿದೆ. ಈಗಾಗಲೇ ಸಿಂಧನೂರಿನಿಂದ ಹುಬ್ಬಳ್ಳಿ ಕಡೆಗೆ ಪ್ರತಿದಿನ ಸಂಚರಿಸುತ್ತಿರುವ ಪ್ಯಾಸೆಂಜರ್ ರೈಲು (ಸಂಖ್ಯೆ 56927/56928) ಜನರಿಂದ ಉತ್ತಮ ಪ್ರತಿಕ್ರಿಯೆ ದೊರೆತಿದೆ. ಅತಿ

(2ನೇ ಪುಟ ನೋಡಿ)

## ಸಿಎಂ ಬದಲಾವಣೆ ವಿಚಾರ ಊಹಾಪೋಹ: ಕಾಶಪ್ಪನವರ



ಮಲ್ಲಮ್ಮ ನುಡಿ ವಾರ್ತೆ


ಬಾಗಲಕೋಟೆ,ಜು.12-ಮುಖ್ಯಮಂತ್ರಿ ಬದಲಾವಣೆ ವಿಚಾರ ಊಹಾಪೋಹ. ಇದೆಲ್ಲವೂ ಮಾಧ್ಯಮ ಸೃಷ್ಠಿ ಎಂದು ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ ಹೇಳಿದ್ದಾರೆ.

ಹುನಗುಂದ ಪಟ್ಟಣದಲ್ಲಿ ತಮ್ಮನ್ನು ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದಅವರು,ಮುಖ್ಯಮಂತ್ರಿಗಳು ಕೇಂದ್ರ ಸಚಿವ ರಾಜನಾಥಸಿಂಗ್ ಅವರನ್ನು ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ ಅವರು ಸಚಿವ ಪ್ರಹ್ಲಾದ ಜೋಷಿ ಅವರನ್ನು ಭೇಟಿಯಾಗಲು ತೆರಳಿದ್ದಾರೆ. ಆದರೆ ಮಾಧ್ಯಮದವರು ನಾಯಕರು ದೆಹಲಿಗೆ ತೆರಳಿದಾಗೊಮ್ಮೆ ಹೊಸ ಹೊಸ ಸುದ್ದಿ ಹುಟ್ಟಿಸುತ್ತಾರೆ ಎಂದರು.

ತಾವೂ ಸಚಿವ ಸ್ಥಾನದ ಆಕಾಂಕ್ಷಿ ಎಂದು ಹೇಳಿದ ಕಾಶಪ್ಪನವರ, ಅವಕಾಶ ನೀಡಿದರೆ ಸಚಿವ ಸ್ಥಾನ ಸಮರ್ಥವಾಗಿ ನಿಭಾಯಿಸುವೆ. ನಾನು ದ್ವೇಷದ ರಾಜಕಾರಣ-ಕ್ಕಾಗಿ ಸಚಿವನಾಗೋದಿಲ್ಲ. ಕಳೆದ 50 ವರ್ಷದಿಂದ ನಮ್ಮ ಮನೆತನ ಕಾಂಗ್ರೆಸ್ಸಿನಲ್ಲಿದೆ. ಅವಕಾಶ ಕೊಟ್ಟರೆ ನಿಭಾಯಿಸುವೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಡಿ.ಕೆ.ಶಿವಕುಮಾರಗೆ ಶಾಸಕರ ಬೆಂಬಲವಿಲ್ಲ ಎಂದು ಹೇಳಿದ್ದಾರಲ್ಲ ಎಂದಾಗ, ಸಿಎಂ ಹೇಳಿದ್ದರಲ್ಲಿ ತಪ್ಪೇನಿಲ್ಲ. ಅವರು ಹಿಂದೆ 5 ವರ್ಷ ಮುಖ್ಯಮಂತ್ರಿಯಾಗಿ ಉತ್ತಮವಾಗಿ ಕೆಲಸ ಮಾಡಿದ್ದಾರೆ. ಈ ಬಗ್ಗೆ ಚಿಂತನೆ ಮಾಡೋದಕ್ಕೆ ಹೈಕಮಾಂಡ್ ಇದೆ ಎಂದು ಕಾಶಪ್ಪನವರ ಹೇಳಿದರು.

## ಇಂಧನ ಸ್ಥಗಿತ ವಿಮಾನ ದುರಂತಕ್ಕೆ ಕಾರಣ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಜು.12: ಜೂನ್ 12ರಂದು ಅಹಮದಾಬಾದ್‌ನಲ್ಲಿ ನಡೆದ ಏರ್ ಇಂಡಿಯಾ ವಿಮಾನ ಅಪಘಾತದ ಕುರಿತು ವಿಮಾನ ಅಪಘಾತ ತನಿಖಾ ಬ್ಯೂರೋ ವರದಿಯು ಹಲವು ಪ್ರಮುಖ ವಿಷಯಗಳನ್ನು ಬಹಿರಂಗಪಡಿಸಿದೆ. ಹಾರಾಟದ ಕೆಲವು ಸೆಕೆಂಡುಗಳ ನಂತರ ವಿಮಾನದ ಎರಡೂ ಎಂಜಿನ್‌ಗಳ ಇಂಧನ ಪೂರೈಕೆಯನ್ನು ಕಡಿತಗೊಳಿಸಲಾಗಿದೆ ಎಂಬ

(2ನೇ ಪುಟ ನೋಡಿ)

ಒಂದನೇ ಪುಟದಿಂದ

## ಕೇಂದ್ರ ಸಚಿವ ವಿ.ಸೋಮಣ್ಣ ಚಾಲನೆ

ಹೆಚ್ಚಿನ ಪ್ರಮಾಣದಲ್ಲಿ ಜನರು ರೈಲು ಸೇವೆಯಿಂದ ಸಂತುಷ್ಟರಾಗಿದ್ದಾರೆ ಈಗ ಹೊಸದಾಗಿ ಹುಬ್ಬಳ್ಳಿ – ಬೆಂಗಳೂರು ಎಕ್ಸ್‌ಸ್ ರೈಲು (ಸಂಖ್ಯೆ 17391/17392) ಸೇವೆಯನ್ನು ಸಿಂಧನೂರಿನವರೆಗೆ ವಿಸ್ತರಿಸಿ ಈ ಭಾಗದ ಜನರ ನಿರೀಕ್ಷೆಯನ್ನು ಪೂರೈಸಲಾಗಿದೆ ಎಂದರು.

ಈ ರೈಲು ಪ್ರತಿ ದಿನ ಮಧ್ಯಾಹ್ನ 1.30 ಗಂಟೆಗೆ ಸಿಂಧನೂರಿನಿಂದ ಹೊರಡಲಿದೆ. ನಂತರ ಗದಗ, ಅಣ್ಣಿಗೇರಿ, ಶಿಶ್ವಿನಹಳ್ಳಿ ಮೂಲಕ ಸಂಜೆ 6 ಗಂಟೆಗೆ ಹುಬ್ಬಳ್ಳಿಗೆ ಆಗಮಿಸುತ್ತದೆ. ಅಲ್ಲಿಂದ 6.45 ಗಂಟೆಗೆ ಹೊರಟು, ರಾತ್ರಿ 3.55 ಕ್ಕೆ ಬೆಂಗಳೂರಿಗೆ ತಲುಪಲಿದೆ. ಅಲ್ಲದೆ ಪ್ರತಿ ದಿನ ಬೆಂಗಳೂರಿನಿಂದ ರಾತ್ರಿ 12.15ಕ್ಕೆ ಹೊರಡುವ ರೈಲು (ಸಂಖ್ಯೆ 17391) ಬೆಳಗ್ಗೆ 9ಕ್ಕೆ ಹುಬ್ಬಳ್ಳಿಗೆ ತಲುಪುತ್ತದೆ, ಮಧ್ಯಾಹ್ನ 2.30 ಕ್ಕೆ ಸಿಂಧನೂರಿಗೆ ನಿಲ್ದಾಣವನ್ನು ತಲುಪಲಿದೆ.

ಈ ಹೊಸ ರೈಲು ಸೇವೆಯು ಸಿಂಧನೂರು ಮತ್ತು ಸುತ್ತಮುತ್ತಲ ಪ್ರದೇಶಗಳಿಗೆ ಶ್ರೇಷ್ಠ ಸಂಚಾರ ಸಂಪರ್ಕವನ್ನು ಕಲ್ಪಿಸಿ, ಈ ಭಾಗದ ವಾಣಿಜ್ಯ ಚಟುವಟಿಕೆಗಳಿಗೆ ಬಲ ನೀಡಲಿದೆ ಅಲ್ಲದೆ ಕೈಗಾರಿಕಾ ವಿಸ್ತರಣೆಗೆ ಅನುಕೂಲವಾಗಲಿದೆ. ಶೈಕ್ಷಣಿಕ ಅಭ್ಯುದಯಕ್ಕೆ ಹಾಗೂ ಕೃಷಿಕರ ಉತ್ಪನ್ನಗಳನ್ನು ದೊಡ್ಡ ಮಾರುಕಟ್ಟೆಗೆ ತಲುಪಿಸಲು ಸಹಕಾರಿಯಾಗಲಿದೆ ಎಂದರು.

ಇದೇ ಸಂದರ್ಭದಲ್ಲಿ ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ,, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಶಿವರಾಜ ಎಸ್.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಬಸನಗೌಡ ಬಾದರ್ಲಿ, ಮಾಜಿ ಲೋಕಸಭಾ ಕ್ಷೇತ್ರದ ಸದಸ್ಯರಾದ ವಿರುಪಾಕ್ಷಪ್ಪ, ಮಾಜಿ ಸಚಿವ ನಾಡಗೌಡ ವೆಂಕಟರಾವ್, ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಬೇಲಾ ಮೀನಾ, ಪ್ರಧಾನ ವಾಣಿಜ್ಯ ವ್ಯವಸ್ಥಾಪಕರಾದ ಎಸ್ .ಪಿ .ಶಾಸ್ತ್ರೀ, ಮುಖ್ಯ ವಾಣಿಜ್ಯ ವ್ಯವಸ್ಥಾಪಕರಾದ ಡಾ .ಅನೂಪ ದಯಾನಂದ ಸಾಧು, ವಿಭಾಗೀಯ ರೈಲ್ವೆ ಹೆಚ್ಚುವರಿ ವ್ಯವಸ್ಥಾಪಕರಾದ ಟಿ.ವಿ.ಭೂಷಣ, ವರಿಷ್ಠ ವಿಭಾಗೀಯ ವಾಣಿಜ್ಯ ವ್ಯವಸ್ಥಾಪಕರು ಸಂತೋಷ ಹೆಗಡೆ , ಗತಿ ಶಕ್ತಿ ವಿಭಾಗದ ಯೋಜನಾ ವ್ಯವಸ್ಥಾಪಕ ಸಂಜಯ ಕುಮಾರ , ವಿಭಾಗೀಯ ಪ್ರಧಾನ ಕಾರ್ಯಾಚರಣೆ ವ್ಯವಸ್ಥಾಪಕರಾದ ಅರವಿಂದ ಹರ್ಲೆ, ವಿಭಾಗೀಯ ಸುರಕ್ಷಾ ಆಯುಕ್ತ ಅಲೋಕ ಕುಮಾರ ಸೇರಿದಂತೆ ಇತರರು ಇದ್ದರು.

## ವಿಮಾನ ದುರಂತಕ್ಕೆ ಕಾರಣ

ಅನುಮಾನವನ್ನು ಈ ವರದಿಯು ಹುಟ್ಟುಹಾಕಿದೆ. ಒಬ್ಬ ಪೈಲಟ್ ಇನ್ನೊಬ್ಬನನ್ನು ಇಂಧನ ಸ್ವಿಚ್ ಆಫ್ ಮಾಡಿದ್ದೀರಾ ಎಂದು ಕೇಳಿದರು. ಇನ್ನೊಬ್ಬ ಪೈಲಟ್ 'ನಾನು ಮಾಡಲಿಲ್ಲ' ಎಂದು ಉತ್ತರಿಸಿದರು. ಪೈಲಟ್‌ನ ಸಂಭಾಷಣೆಯು ವಿಷಯವನ್ನು ಮತ್ತಷ್ಟು ಜಟಿಲಗೊಳಿಸಿದೆ. ಪೈಲಟ್ ಗಾಳಿಯಲ್ಲಿ ಇಂಧನ ಸ್ವಿಚ್ ಅನ್ನು ಏಕೆ ಆಫ್ ಮಾಡುತ್ತಾನೆ ಎಂಬ ಪ್ರಶ್ನೆ ಉದ್ಭವಿಸುತ್ತದೆ? ಪೈಲಟ್ ಇದನ್ನು ಮಾಡದಿದ್ದರೆ, ಇಂಧನ ಸ್ವಿಚ್ ಹೇಗೆ ಆಫ್ ಆಯಿತು? ಎಂಬ ಪ್ರಶ್ನೆ ಉದ್ಭವಿಸಿದೆ.

ಅಹಮದಾಬಾದ್‌ನಿಂದ ಲಂಡನ್‌ಗೆ ಹೋಗುವ ಏರ್ ಇಂಡಿಯಾ ವಿಮಾನ ಂಐ171 ನಲ್ಲಿ 242 ಪ್ರಯಾಣಿಕರಲ್ಲಿ, ಒಬ್ಬರು ಮಾತ್ರ ಬದುಕುಳಿದರು. ಪೈಲಟ್‌ನ ಸಂಭಾಷಣೆಯಿಂದ ಯಾವುದೇ ತೀರ್ಮಾನಕ್ಕೂ ಬರಲು ಸಾಧ್ಯವಿಲ್ಲ ಎಂದು ತಜ್ಞರು ಹೇಳುತ್ತಾರೆ. ಇಂಧನ ಸ್ವಿಚ್ ಅನ್ನು ಹೇಗೆ ಆಫ್ ಮಾಡಲಾಗಿದೆ ಎಂಬುದನ್ನು ತನಿಖೆ ಮಾಡಲಾಗುತ್ತದೆ.ವಿಮಾನದಲ್ಲಿನ ಇಂಧನ ಸ್ವಿಚ್ ಹಸ್ತಚಾಲಿತವಾಗಿದೆ. ಪೈಲಟ್ ಅದನ್ನು ತನ್ನ ಕೈಯಿಂದ ಹಿಡಿದುಕೊಂಡು ಆನ್ ಮತ್ತು ಆಫ್ ಮಾಡುತ್ತಾನೆ. ತಜ್ಞರು ಹೇಳುವಂತೆ ಇದು ಗೇರ್‌ನಂತಿದೆ. ಆದರೆ, ಪೈಲಟ್ ವಿಮಾನವನ್ನು ನಿಲ್ಲಿಸಿದ ನಂತರವೇ ಅದನ್ನು ಆಫ್ ಮಾಡುತ್ತಾರೆ. ತುರ್ತು ಪರಿಸ್ಥಿತಿಯಲ್ಲಿ, ಒಂದು ಎಂಜಿನ್‌ನ ಇಂಧನವನ್ನು ಗಾಳಿಯಲ್ಲಿಯೂ ಆಫ್ ಮಾಡಬಹುದು. ಗಾಳಿಯಲ್ಲಿ ಎಂಜಿನ್ ವಿಫಲವಾದರೆ, ಅದರ ಸ್ವಿಚ್ ಆಫ್ ಆಗುತ್ತದೆ. ಆದಾಗ್ಯೂ, ವಿಫಲವಾದ ಎಂಜಿನ್‌ನ ಇಂಧನ ಸ್ವಿಚ್ ಅನ್ನು ಸಹ ಆಫ್ ಮಾಡಬೇಕು ಎಂಬುದನ್ನು ನೆನಪಿನಲ್ಲಿಡಬೇಕು. ಇನ್ನೊಂದು ಎಂಜಿನ್‌ನ ಇಂಧನ ಸ್ವಿಚ್ ತಪ್ಪಾಗಿ ಆಫ್ ಆಗಿದ್ದರೆ, ಅಪಘಾತ ಖಚಿತ.

ಇಂಧನ ಸ್ವಿಚ್ ಅನ್ನು ಎಳೆಯುವ ಮೊದಲು, ಒಬ್ಬ ಪೈಲಟ್ ಇನ್ನೊಬ್ಬರೊಂದಿಗೆ ದೃಢೀಕರಿಸುತ್ತಾರೆ. ಇದರ ನಂತರವೇ ಅವರು ಯಾವುದೇ ಕ್ರಮ ತೆಗೆದುಕೊಳ್ಳುತ್ತಾರೆ. ಅದೇ ಸಮಯದಲ್ಲಿ, ಎರಡೂ ಇಂಧನ ಸ್ವಿಚ್‌ಗಳು ಏಕಕಾಲದಲ್ಲಿ ಆಫ್ ಆಗಿರುವುದು ಬಹಳ ಆಶ್ಚರ್ಯಕರವಾಗಿದೆ ಎಂದು ತಜ್ಞರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

2021ರಲ್ಲಿ ಫೆಡರಲ್ ಏವಿಯೇಷನ್ ಅಡ್ಮಿನಿಸ್ಟೇಷನ್ ಮತ್ತು ವಿಮಾನ ಎಂಜಿನ್ ಉತ್ಪಾದನಾ ಕಂಪನಿಯು ವಿಮಾನದ 'ಒಓ4 ಮೈಕ್ರೊಪ್ರೊಸೆಸರ್ ಅನ್ನು ಸಮಯಕ್ಕೆ ಸರಿಯಾಗಿ ಬದಲಾಯಿಸಬೇಕು' ಎಂದು ಹೇಳಿದೆ. ಇದು ಎಂಜಿನ್‌ನ ಎಲೆಕ್ಟ್ರಾನಿಕ್ ನಿಯಂತ್ರಣ ಘಟಕದಲ್ಲಿದೆ. ಇದನ್ನು ವಿಶೇಷ ಸರ್ಕ್ಯೂಟ್ ಬೋರ್ಡ್‌ಗೆ ಸಂಪರ್ಕಿಸಲಾಗಿದೆ. ಹಾರಾಟದ ಸಮಯದಲ್ಲಿ ಅದರ ತಾಪಮಾನ ಬದಲಾಗುತ್ತದೆ. ಈ ಮೈಕ್ರೊಪ್ರೊಸೆಸರ್ ಅಸಮರ್ಪಕವಾಗಿ ಕಾರ್ಯನಿರ್ವಹಿಸಿದರೆ, ಎಂಜಿನ್ ಸರಿಯಾದ ಮಾಹಿತಿಯನ್ನು ಪಡೆಯುವುದಿಲ್ಲ ಎಂದು ವರದಿ ಹೇಳಿದೆ. ಅಂತಹ ಪರಿಸ್ಥಿತಿಯಲ್ಲಿ, ಅದನ್ನು ಬದಲಾಯಿಸಬೇಕಾಗಿದೆ.

ದುರಂತದ ಪ್ರಾಥಮಿಕ ವರದಿ ಬಗ್ಗೆ ಆತುರದ ನಿರ್ಧಾರಕ್ಕೆ ಬರುವುದು ಬೇಡ: ನಾಗರಿಕ ವಿಮಾನಯಾನ ಸಚಿವ

ಎಂಜಿನ್ ಇಂಧನ ಪೂರೈಕೆಯನ್ನು ಪಡೆಯುತ್ತಿಲ್ಲ ಎಂದು ಪೈಲಟ್‌ಗಳು ಅರಿತುಕೊಂಡಾಗ, ಅವರು ವಿಮಾನವನ್ನು ಉಳಿಸಲು ತಮ್ಮ ಕೈಲಾದಷ್ಟು ಪ್ರಯತ್ನಿಸಿದರು ಎಂದು ಂಂಖಃ ವರದಿ ಹೇಳಿದೆ. ಅವರು ನಿಲ್ಲಿಸಿದ ಎಂಜಿನ್ ಅನ್ನು ಚಲಾಯಿಸಲು ಪ್ರಯತ್ನಿಸಿದರು. ಒಂದು ಎಂಜಿನ್ ಪ್ರಾರಂಭವಾಯಿತು ಆದರೆ ಇನ್ನೊಂದು ಎಂಜಿನ್ ಒತ್ತಡವನ್ನು ಉತ್ಪಾದಿಸಲು ಸಾಧ್ಯವಾಗಲಿಲ್ಲ. ಆದಾಗ್ಯೂ, ಈ ಆರಂಭಿಕ ವರದಿಯ ಆಧಾರದ ಮೇಲೆ ಯಾವುದೇ ತೀರ್ಮಾನವನ್ನು ತೆಗೆದುಕೊಳ್ಳಲು ಸಾಧ್ಯವಿಲ್ಲ. ಅಪಘಾತದ ಸಂಪೂರ್ಣ ವರದಿ ಮುಂದಿನ ವರ್ಷ ಜೂನ್ 12ರ ಮೊದಲು ಬಹಿರಂಗವಾಗಬಹುದು

## ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

ಬೀದರ್:ಜು.12: ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2025–26ನೇ ಸಾಲಿಗೆ ಶಿಷ್ಯವೇತನಕ್ಕೆ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಎಸ್‌ಎಸ್‌ಪಿ ತಂತ್ರಾಂಶದಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

1ರಿಂದ10ನೇ ತರಗತಿಯಲ್ಲಿ ವ್ಯಾಸಂಗಮಾಡುತ್ತಿರುವ ಹೊಸ ವಿದ್ಯಾರ್ಥಿಗಳು https://ssp.postmatric.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಬೀದರ್ ತಾಲ್ಲೂಕು ಸಹಾಯಕ ನಿರ್ದೇಶಕ ಅನಿಲಕುಮಾರ ಮೇಲ್ದೊಡ್ಡಿ ತಿಳಿಸಿದ್ದಾರೆ.

ವಾರ್ಷಿಕ ರೂ. 2.5 ಲಕ್ಷದ ಒಳಗೆ ಆದಾಯ ಹೊಂದಿದ ಪಾಲಕರ ಮಕ್ಕಳು ಆದಾಯ, ಜಾತಿ ಪ್ರಮಾಣ ಪತ್ರ, ಸ್ಯಾಟ್ಸ್ ಸಂಖ್ಯೆ, ಎನ್‌ಪಿಸಿಐ ಲಿಂಕ್ ಹೊಂದಿದ ಬ್ಯಾಂಕ್ ಖಾತೆ, ಆಧಾರ್ ಕಾರ್ಡ್ ಹಾಗೂ ಹಿಂದಿನ ತರಗತಿಯಲ್ಲಿ ತೇರ್ಗಡೆ–ಯಾದ ಅಂಕಪಟ್ಟಿಯೊಂದಿಗೆ ಅರ್ಜಿ ಸಲ್ಲಿಸಬಹುದು ಎಂದು ಹೇಳಿದ್ದಾರೆ.ಬಾಕಿ ಇರುವ ಬೀದರ್ ತಾಲ್ಲೂಕಿನ 53 ಶಾಲೆಗಳ ಮುಖ್ಯಶಿಕ್ಷಕರು ಸಮಾಜ ಕಲ್ಯಾಣ ಇಲಾಖೆ ಕಚೇರಿಗೆ ಆಗಮಿಸಿ ಐಎಸ್‌ಒ ಆಗಿ ನೋಂದಣಿ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

ತಾಲ್ಲೂಕಿನಲ್ಲಿ ನಡೆಯುತ್ತಿರುವ ವೃತ್ತಿಪರ ಕಾಲೇಜು, ಪದವಿಪೂರ್ವ ಹಾಗೂ ಪದವಿ ಕಾಲೇಜುಗಳಲ್ಲಿ ಎಂಪಾವರ್‌ಮೆಂಟ್ ಅಧಿಕಾರಿ ನೋಂದಣಿಯಾಗದಿದ್ದಲ್ಲಿ ಆಯಾ ಕಾಲೇಜುಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಶಿಷ್ಯವೇತನ ಮಂಜೂರಾತಿ ಸಾಧ್ಯವಾಗುವುದಿಲ್ಲ. ಹೀಗಾಗಿ ಎಲ್ಲ ಕಾಲೇಜುಗಳ ಮುಖ್ಯಸ್ಥರು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್‌ನಲ್ಲಿ ಎಂಪಾವರ್‌ಮೆಂಟ್ ಅಧಿಕಾರಿ ಆಗಿ ನೋಂದಣಿ ಮಾಡಿಸಿಕೊಳ್ಳಬೇಕು ಎಂದು ಕೋರಿದ್ದಾರೆ.

ಮಾಹಿತಿಗೆ ದೂರವಾಣಿ ಸಂಖ್ಯೆ 8792103222,9845944285 ಅಥವಾ 8197157805 ಗೆ ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

## ಸರಳ ಸಾಮೂಹಿಕ ವಿವಾಹ

ಬೀದರ:ಜು.12:ಮಹಾಮಾನವ ಯುನಿವರ್ಸಲ್ ವೆಲ್‌ಫೇರ್ ಚಾರಿಟೇಬಲ್ ಟ್ರಸ್ಟ್‌ವತಿಯಿಂದ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಕಡು ಬಡವರಿಗಾಗಿ 2025–26ನೇ ಸಾಲಿನಲ್ಲಿ ಸಾಮೂಹಿಕ ವಿವಾಹ ಅರ್ಜಿಯನ್ನು ಆಹ್ವಾನಿಸಲಾಗಿದೆ. ವಿವಾಹಕ್ಕಾಗಿ ಆಸಕ್ತಿವುಳ್ಳವರು ಜುಲೈ 31 ರೊಳಗೆ ತಾವು ಖುದ್ದಾಗಿ ಸಂಸ್ಥೆಯ ಕಾರ್ಯಾಲಯದಲ್ಲಿ ಅರ್ಜಿ ಸಲ್ಲಿಸಬೇಕು, ಅರ್ಜಿಯ ಜೊತೆಗೆ ವಧು–ವರರ ಆಧಾರ್ ಕಾರ್ಡ್, ಪ್ಯಾನ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ರ‍್ಯಾಶನ್ ಕಾರ್ಡ್, ಓಟರ್ ಐ.ಡಿ., ವಯಸ್ಸಿನ ಪ್ರಮಾಣ ಪತ್ರ (ಟಿಸಿ., ಅಂಕಪಟ್ಟಿ, ಶಾಲಾ ದಾಖಲಾತಿ ಅನಕ್ಷರಸ್ಥರಿಗಾಗಿ ವೈದ್ಯಕೀಯ ಪ್ರಮಾಣ ಪತ್ರ), ಪಾಸಪೋರ್ಟ್ ಅಳತೆ 2ಭಾವಚಿತ್ರಗಳು, ಎಲ್ಲಾ ದಾಖಲಾತಿಗಳೊಂದಿಗೆ ದ್ವಿಪ್ರತಿಯಲ್ಲಿ ಅರ್ಜಿಯೊಂದಿಗೆ ಸಲ್ಲಿಸಬೇಕು. ಸಂಸ್ಥೆ ವತಿಯಿಂದ ಸಮಾಜ ಕಲ್ಯಾಣ ಇಲಾಖೆಯಿಂದ ರೂ. 50,000/– ಮತ್ತು ಕಾರ್ಮಿಕ ಇಲಾಖೆಯಿಂದ ರೂ.50,000/– ಮಂಜೂರು ಮಾಡಿಸಿಕೊಡಲಾಗುವುದು ಎಂದು ಸಮುದಾಯ ಸಂಘಟಕರಾದ ಸಾಂಚಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಅಧ್ಯಕ್ಷರು/ಕಾರ್ಯದರ್ಶಿ 9740240358/9739417617 ಗೆ ಸಂಪರ್ಕಿಸಬಹುದು ಎಂದು ಅರುಣ ಪಟೇಲ್, ಅಶೋಕ ಮಾಳಗೆ ತಿಳಿಸಿದ್ದಾರೆ (ಸೂಚನೆ: ಹುಡಗಿಯ ವಯಸ್ಸು 18 ತುಂಬಿರಬೇಕು, ಗಂಡಿಗೆ 21 ವರ್ಷ ತುಂಬಿರಬೇಕು, ಬಾಲ್ಯ ವಿವಾಹ ನಿಷೇಧಿಸಲಾಗಿದೆ "ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ").

## ಹೋರಾಟಗಾರ್ತಿ ಇರುತ್ತಾಳೆ: ಜಿಲ್ಲಾಧಿಕಾರಿ



ಬಾನುಮುಷ್ತಾಕ್ ಅವರು, ತಮ್ಮ ಮೂಲ ಕಥೆಗೆ ಎಲ್ಲಿಯೂ ಚ್ಯುತಿ ಬಾರದ ರೀತಿಯಲ್ಲಿ ನಾಟಕವನ್ನು ಪರಿಣಾಮಕಾರಿಯಾಗಿ ಅಭಿನಯಿಸಿದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಇದಕ್ಕೂ ಮೊದಲು ರಂಗಸಿರಿ ಆಶ್ರಯದಲ್ಲಿ ಆಯೋಜಿಸಿದ್ದ ಮಾಯಾಮೃಗ, ಎದೆ–ಯ ಹಣತೆ ನಾಟಕಗಳ ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ ಮತ್ತು ಬಾನುಮುಷ್ತಾಕ್ ಅವರನ್ನು ಅಭಿನಂದಿಸಿ ಮಾತನಾಡಿದ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು, ಪ್ರತಿಯೊಬ್ಬ ಮಹಿಳೆಯಲ್ಲೂ ಹೋರಾಟಗಾರ್ತಿ ಇರುತ್ತಾಳೆ ಎಂದರು.

ಬಾನುಮುಷ್ತಾಕ್ ಅವರ ಹೋರಾಟದ ಬದುಕು, ಅವರ ಕಥೆ, ಪಾತ್ರವನ್ನ ನೋಡುತ್ತಾ ಹೋದರೆ ಅವುಗಳ ವೇದನೆ, ಹೋರಾಟಗಳು ತಿಳಿಯುತ್ತ ಹೋಗುತ್ತವೆ ಎಂದು ಹೇಳಿದರು.

ಬಾನು ಅವರ ಬರಹ ನಮಗೆ ಕಥೆ ಅನಿಸುವುದಿಲ್ಲ. ಜೀವಂತ ವ್ಯಕ್ತಿತ್ವ ಅನಿಸಿ ಬಿಡುತ್ತದೆ. ಓದುತ್ತಾ ಹೋದರೆ ಅದರಲ್ಲಿ ನಮ್ಮದೂ ಒಂದು ಪಾತ್ರ ಇದೆ ಅನಿಸುತ್ತದೆ. ಒಬ್ಬ ಬರಹಗಾರ್ತಿಯಾಗಿ, ಪತ್ರಕರ್ತೆಯಾಗಿ ಹಾಗೂ ವಕೀಲರಾಗಿ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಶ್ಲಾಘಿಸಿದರು.

ನಾವು ಮಹಿಳೆಯರಾಗಿ ಚೆನ್ನಾಗಿ ಓದಿದ್ದೇವೆ, ಆರ್ಥಿಕವಾಗಿ ಸಬಲರಾಗಿದ್ದೇವೆ, ಎಲ್ಲಾ ಪಡೆದು ಬಿಟ್ಟಿದ್ದೇವೆ ಎನ್ನುವುದು ಎಂತಹುದೂ ಇಲ್ಲ. ಈಗಲೂ ಹೇಳುತ್ತೇವೆ, ಮಹಿಳೆಗೆ ಸಿಗಬೇಕಾದ ಗೌರವದಲ್ಲಿ ಇನ್ನು ಸಂಪೂರ್ಣವಾಗಿ ಸಿಕ್ಕಿಲ್ಲ, ಸಮಾನತೆ ಎಂಬುದು ದೂರದ ಮಾತಾಗಿದೆ ಅವಕಾಶ ಕೇಳಲೇಬೇಡಿ ಎಂದು ಬೇಸರ ವ್ಯಕ್ತಪಡಿಸಿದರು.

ಈ ಎಲ್ಲಾ ಕೊರತೆಗಳ ನಡುವೆಯೂ ಸಹ ಹೆಣ್ಣನ್ನು, ಹೆಣ್ಣಿನ ವ್ಯಕ್ತಿತ್ವವನ್ನು ಪ್ರತಿಪಾದಿಸುವ ಒಂದು ಉತ್ತಮ ವ್ಯಕ್ತಿತ್ವ ನಮ್ಮ ಜತೆ ಇದ್ದಾರೆ ಎನ್ನುವುದೇ ಒಂದು ಹೆಮ್ಮೆಯ ಸಂಗತಿ ಎಂದು ಶ್ಲಾಘಿಸಿದರು. ಸಮಾಜದಲ್ಲಿ ಈಗಲೂ ಮಹಿಳೆಗೆ ಸಿಗಬೇಕಾದ ಗೌರವ ಇನ್ನು ಸಂಪೂರ್ಣವಾಗಿ ಸಿಕ್ಕಿಲ್ಲ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಶಸ್ತಿ ಪಡೆದವರ ಜತೆ ನಾವು ಕುಳಿತಿದ್ದೇವೆ ಎಂದರೆ ನಮಗೆಲ್ಲರಿಗೂ ಹೆಮ್ಮೆಯ ವಿಚಾರ. ರಂಗಸಿರಿ ಕಲಾ ತಂಡದ ಸದಸ್ಯರು ಇಂತಹ ಒಳ್ಳೆಯ ಕಾರ್ಯಕ್ರಮ ಆಯೋಜನೆ ಮಾಡಿದ್ದು, ಇಂತಹ ಕಾರ್ಯಕ್ರಮವನ್ನು ಹೆಚ್ಚಿನ ರೀತಿ ಮಾಡಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧಕ್ಷ ಟಿ.ವಿ.ಶಿವಾನಂದ ತಗಡೂರು ಮಾತನಾಡಿ, ಹಾಸನ ಹಲವು ವಿಭಿನ್ನ ಬಗೆಯ ಸಂಸ್ಕೃತಿಯನ್ನು ಮತ್ತು ಪ್ರತಿಭೆಯನ್ನು ಹೊಂದಿರುವ ಜಿಲ್ಲೆ. ಈ ಮಣ್ಣಿನಲ್ಲಿ ಅರಳಿದ ಬಾನುಮುಷ್ತಕ್ ಅವರ ಪ್ರತಿಭೆ, ನಾಡಿಗೆ ಅಷ್ಟೇ ಅಲ್ಲ, ಜಗದಲ್ಲಿ ಬಾನೆತ್ತರಕ್ಕೆ ತಮ್ಮ ಪ್ರತಿಭೆಯನ್ನು ಬೆಳಗಿರುವುದು ಕನ್ನಡಿಗರೆಲ್ಲರಿಗೂ ಅಭಿಮಾನದ ಸಂಗತಿ ಎಂದರು ಹೇಳಿದರು.

ಎದೆಯ ಹಣತೆ ನಾಟಕ ನಿರ್ದೇಶನ ಮಾಡಿದ ನೀನಾಸಮ್ ರಂಗಶಿಕ್ಷಣ ಕೇಂದ್ರದ ಪ್ರಾಂಶುಪಾಲ ಡಾ.ಎಂ.ಗಣೇಶ್ ಅವರನ್ನು ಸನ್ಮಾನಿಸಲಾಯಿತು. ಸಾಹಿತಿ ಕೆ.ಪಿ.ಪೂರ್ಣಚಂದ್ರ ತೇಜಸ್ವಿ ಅವರ ಮಾಯಾಮೃಗ ನಾಟಕವನ್ನು ಇದೇ ತಂಡ ಅಭಿನಯಿಸಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮದ್ ಸುಜಿತ, ಮಾಜಿ ಶಾಸಕ ಎಚ್.ಎಂ.ವಿಶ್ವನಾಥ್, ಅಮೋಘ್ ಸಂಸ್ಥೆಯ ಮುಖ್ಯಸ್ಥ ಕೆ.ಪಿ.ಎಸ್.ಪ್ರಮೋದ್, ಜಿಲ್ಲಾ ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷ ರವಿ ನಾಕಲಗೂಡು, ರೆಡ್ ಕ್ರಾಸ್ ಸಂಸ್ಥೆ ಅಧ್ಯಕ್ಷ ಹೆಮ್ಮಿಗೆ ಮೋಹನ್, ವಿಜಯ ಸ್ಕೂಲ್‌ನ ತಾರಾ ಸುಬ್ಬಸ್ವಾಮಿ, ಟೈಮ್ಸ್ ಸಂಸ್ಥೆಯ ಮುಖ್ಯಸ್ಥ ಗಂಗಾಧರ್, ಸಾಕ್ಷರತೆಯ ಎಸ್.ಎಸ್.ಪಾಷ, ರಂಗಸಿರಿ ಅಧ್ಯಕ್ಷ ಕೆ.ರಂಗಸ್ವಾಮಿ, ಪಿ.ಶಾಡ್ರಾಕ್ ಮತ್ತಿತರರು ಹಾಜರಿದ್ದರು.

## 25 ಲಕ್ಷ ರೂ. ವೆಚ್ಚದ ಉದ್ಯಾನವನ ನಿರ್ಮಾಣಕ್ಕೆ ಚಾಲನೆ




ಮಲ್ಲಮ್ಮ ನುಡಿ ವಾರ್ತೆ

ಬೀದರ:ಜು.12:ಉದ್ಯಾನವನಗಳು ವಿಶ್ರಾಂತಿಪಡೆಯಲು,ಆಟವಾಡಲು ಮತ್ತುಪ್ರಕೃತಿಯೊಂದಿಗೆಬೆರೆಯಲು ಒಂದು ಸುಂದರವಾದ ಸ್ಥಳ. ಉದ್ಯಾನವನಗಳು ನಗರಗಳಲ್ಲಿ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ನಿರ್ಮಿಸುವ ಯೋಜನೆ ರೂಪಿಸಲಾಗಿದೆ ಈ ಉದ್ಯಾನವನವನ್ನು ವಾಯು ವಿಹಾರಕ್ಕಾಗಿ ಜನಸಾಮಾನ್ಯರು ಮತ್ತು ವಿಧ್ಯಾರ್ಥಿಗಳು ಸದುಪಯೋಗ ಪಡೆದುಕೊಳ್ಳಬೇಕು ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಹೇಳಿದರು.

ಬೀದರ್ ದಕ್ಷಿಣ ಕ್ಷೇತ್ರದ ಗೋರನಳ್ಳಿಗ್ರಾಮದವ್ಯಾಪ್ತಿಯಲ್ಲಿ ಬರುವ ಶಿವಾಜಿನಗರದಲ್ಲಿ ನಗರಾಭಿವೃಧ್ಧಿ ಪ್ರಾಧಿಕಾರದ ಅನುದಾನದಡಿಯಲ್ಲಿ 25 ಲಕ್ಷ ರೂ. ವೆಚ್ಚದ ಉದ್ಯಾನವನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಇಂದಿನ ಒತ್ತಡದ ದಿನಮಾನಗಳಲ್ಲಿ ಉದ್ಯಾನವನಗಳು ಅತ್ಯಂತ ಅವಶ್ಯಕ, ಉದ್ಯಾನವನ ವಾಯು ವಿಹಾರಕ್ಕೆ. ವಿಶ್ರಾಂತಿ ಮತ್ತು ಯೋಗಾಸನ ಮಾಡಲು ಉತ್ತಮ ಸ್ಥಳವಾಗಿರುತ್ತದೆ. ಮಕ್ಕಳು ಆಟವಾಡಲು ಮತ್ತು ವಯಸ್ಕರು ವ್ಯಾಯಾಮ ಮಾಡಬಹುದು. ಈ ಉದ್ಯಾನವನದಲ್ಲಿ ಪಕ್ಷಿಗಳು ಮತ್ತು ಪ್ರಾಣಿಗಳನ್ನು ನೋಡಲು ನೈಸರ್ಗಿಕ ಸೌಂದರ್ಯವನ್ನು ಆನಂದಿಸಲು ಪ್ರಮುಖ ಸ್ಥಳವಾಗಿರುತ್ತದೆ ಪ್ರತಿಯೊಬ್ಬರು ಇದನ್ನು ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಉದ್ಯಾನವನದ ನಿಯಮಗಳನ್ನು ಪ್ರತಿಯೊಬ್ಬರೂ ಪಾಲಿಸಬೇಕು, ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛವಾಗಿಡಬೇಕು, ಸಸ್ಯಗಳು ಮತ್ತು ಪಕ್ಷಿಗಳಿಗೆ ಹಾನಿ ಮಾಡಬಾರದು, ದೊಡ್ಡ ಶಬ್ದ ಮಾಡಬಾರದು. ಉದ್ಯಾನವನಗಳು ನಮಗೆಲ್ಲರಿಗೂ ಮುಖ್ಯವಾದ ಸ್ಥಳಗಳಾಗಿರುತ್ತದೆ. ಅವುಗಳನ್ನು ಸಂರಕ್ಷಿಸುವುದು ಮತ್ತು ಸ್ವಚ್ಛವಾಗಿಡುವುದು ನಮ್ಮೆಲ್ಲರ ಜವಾಬ್ದಾರಿ. ಆಟವಾಡಲು ಇಷ್ಟಪಡುವ ಮಕ್ಕಳಿಗೆ ಈ ಉದ್ಯಾನವನ ಸೂಕ್ತವಾಗಿದೆ. ಮಕ್ಕಳಿಗಾಗಿ ಉದ್ಯಾನವನದ ಪ್ರಯೋಜನಗಳು ಮಕ್ಕಳು ಹೊರಾಂಗಣದಲ್ಲಿ ಸಮಯ ಕಳೆಯಲು ಇಷ್ಟಪಡುತ್ತಾರೆ ಹೀಗಾಗಿ ಉದ್ಯಾನವನಗಳ ಬಗ್ಗೆ ಒಂದು ಉತ್ತಮ ವಿಷಯವೆಂದರೆ ಅವು ದೈಹಿಕ ಚಟುವಟಿಕೆಗೆ ಅವಕಾಶವನ್ನು ನೀಡುತ್ತವೆ. ಉದ್ಯಾನವನಗಳಲ್ಲಿ ಸಮಯ ಕಳೆಯುವ ಮಕ್ಕಳು, ಸಮಯ ಕಳೆಯದವರಿಗಿಂತ ಹೆಚ್ಚು ದೈಹಿಕವಾಗಿ ಸಕ್ರಿಯರಾಗಿರುತ್ತಾರೆ.

ಇದು ದೀರ್ಘಾವಧಿಯ ಜೀವಿತಾವಧಿ ಮತ್ತು ಒಟ್ಟಾರೆಯಾಗಿ ಉತ್ತಮ ಆರೋಗ್ಯಕ್ಕೆ ಕಾರಣವಾಗುತ್ತದೆ. ಉದ್ಯಾನವನಗಳು ಮಕ್ಕಳಿಗೆ ವಿವಿಧ ವಿಷಯಗಳ ಬಗ್ಗೆ ಕಲಿಯಲು ಅವಕಾಶಗಳನ್ನು ನೀಡುತ್ತವೆ. ಹೊಸ ಸ್ನೇಹಿತರನ್ನು ಭೇಟಿ ಮಾಡಬಹುದು, ಆಟಗಳನ್ನು ಆಡಬಹುದು ಮತ್ತು ಪರಿಸರವನ್ನು ಒಟ್ಟಿಗೆ ಅನ್ವೇಷಿಸಬಹುದು. ಉದ್ಯಾನವನದ ನಿಯಮಗಳನ್ನು ಪಾಲಿಸುವುದು ಯಾವಾಗಲೂ ಅತ್ಯಗತ್ಯ. ಈ ನಿಯಮಗಳು ಎಲ್ಲರನ್ನೂ ಸುರಕ್ಷಿತವಾಗಿ ಮತ್ತು ಸಂತೋಷವಾಗಿಡುತ್ತವೆ. ಮಕ್ಕಳು ಉದ್ಯಾನವನಕ್ಕೆ ಬಂದಾಗ ಮತ್ತು ಹೋಗುವಾಗ ಜಾಗರೂಕರಾಗಿರಬೇಕು ಮತ್ತು ಏನಾದರೂ ಅಪಾಯಕಾರಿ ವಸ್ತುವನು ಕಂಡರೆ ಸರ್ಕಾರದ ಸಹಾಯವಾಣಿ ಸಂಖ್ಯೆಗೆ ಸಂಪರ್ಕಿಸಿ ಎಂದರು.

ಈ ಸಂದರ್ಭದಲ್ಲಿ ಮುಖಂಡರಾದ ಬಾಬುರಾವ ಮಲ್ಕಾಪುರೆ, ಶಿವಕುಮಾರಸ್ವಾಮಿ, ಉದಯಕುಮಾರ ತೋರಣ, ಶಶಿಧರ ಹೊಸಳ್ಳಿ, ರಾಜರಾಮ ಚಿಟ್ಟಾ, ವಿಜಯಕುಮಾರ ಪಾಟೀಲ್, ಜೋಸೇಫ್ ಕೊಡ್ಡೆಕರ್, ಸಂತೋಷ ರೆಡ್ಡಿ, ಚಂದ್ರಕಾಂತ ತೋರಣ, ರಾಜಶೇಖರನೌಬಾದ, ಗಜಾನಂದ ತೋರಣ, ಸಂಜುಕುಮಾರ ಪಾಟೀಲ, ಸಾಯಿನಾಥ ಮೇತ್ರಿ, ಹಣಮಂತ ಕೊಂಡಿ, ರಾಜಕುಮಾರ ಬಾವಗೆ , ದೀಲೀಪ ಗುಮ್ಮಾ, ಶಿವರಾಜ ಗ್ಯಾನಪನೋರ, ಶಿವಕುಮಾರ ಗುಮ್ಮಾ, ವೀರೇಶ ಜಾಂತಿಕರ, ಸಂಗಮೇಶ, ಬಲವಂತ ರೆಡ್ಡಿ, ಮತ್ತಿತರರು ಉಪಸ್ಥಿತರಿದ್ದರು.

## ಕಿಸಾನ್ ಕಾಂಗ್ರೆಸ್ ಮಹಾರಾಷ್ಟ್ರ ಉಸ್ತುವಾರಿಯಾಗಿ ಪ್ರಕಾಶ ಘಾಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಜು.12: ಜಿಲ್ಲೆಯ ಮುಖಂಡ ಪ್ರಕಾಶ ಘಾಳೆ ಅವರನ್ನು ಕಾಂಗ್ರೆಸ್ ಕಿಸಾನ್, ಖೇತ್ ಮಜ್ದೂರ್ ವಿಭಾಗದ ಮಹಾರಾಷ್ಟ್ರ ಉಸ್ತುವಾರಿಯಾಗಿ ನೇಮಕ ಮಾಡಲಾಗಿದೆ.

ವಿಭಾಗದ ರಾಷ್ಟ್ರೀಯ ಅಧ್ಯಕ್ಷ ಸುಖಪಾಲ್ ಸಿಂಗ್ ಖೈರಾ ಅವರ ಆದೇಶದ ಮೇರೆಗೆ ಈ ನೇಮಕ ಮಾಡಲಾಗಿದೆ ಎಂದು ವಿಭಾಗದ ರಾಷ್ಟ್ರೀಯ ಉಪಾಧ್ಯಕ್ಷ ಅಖಿಲೇಶ್ ಶುಕ್ಲಾ ತಿಳಿಸಿದ್ದಾರೆ.

ಔರಾದ್ ತಾಲ್ಲೂಕಿನ ಚಿಮ್ಮೆಗಾಂವ್ ಗ್ರಾಮದವರಾದ ಪ್ರಕಾಶ ಘಾಳೆ ಜಿಲ್ಲೆಯ ಹಿರಿಯ ಕಾಂಗ್ರೆಸ್ ಮುಖಂಡರಲ್ಲಿ ಒಬ್ಬರಾಗಿದ್ದಾರೆ. ಪಕ್ಷದ ರಾಜ್ಯ ಹಾಗೂ ರಾಷ್ಟ್ರೀಯ ನಾಯಕರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಅವರ ಪಕ್ಷ ನಿಷ್ಠೆಗೆ ವಿವಿಧ ಹುದ್ದೆಗಳು ಒಲಿದು ಬಂದಿವೆ.

ಸದ್ಯ ಕಾಂಗ್ರೆಸ್ ಕಿಸಾನ್, ಖೇತ್ ಮಜ್ದೂರ್ ವಿಭಾಗದ ರಾಷ್ಟ್ರೀಯ ಸಂಯೋಜಕರೂ ಆಗಿರುವ ಅವರು, ಹಿಂದೆ ವಿಭಾಗದ ಮಹಾರಾಷ್ಟ್ರ, ತೆಲಂಗಾಣ ಹಾಗೂ ಉತ್ತರಪ್ರದೇಶದ ಆರು ಜಿಲ್ಲೆಗಳ ಉಸ್ತುವಾರಿಯಾಗಿ ಉತ್ತಮವಾಗಿ ಕಾರ್ಯ ನಿರ್ವಹಿಸಿದ್ದಾರೆ.

ಮಹಾರಾಷ್ಟ್ರದಲ್ಲಿ ರೈತರ ಅನೇಕ ಸಮಸ್ಯೆಗಳ ಪರಿಹಾರಕ್ಕೆ ಶ್ರಮಿಸಿದ್ದರು. ಅದರ ಫಲವಾಗಿ ಅವರಿಗೆ ಈಗ ಮತ್ತೆ ಕಾಂಗ್ರೆಸ್ ಕಿಸಾನ್, ಖೇತ್ ಮಜ್ದೂರ್ ವಿಭಾಗದ ಮಹಾರಾಷ್ಟ್ರದ ಉಸ್ತುವಾರಿ ಹೊಣೆ ಕೊಡಲಾಗಿದೆ.

ತಮ್ಮನ್ನು ಮಹಾರಾಷ್ಟ್ರದ ಉಸ್ತುವಾರಿಯಾಗಿ ನೇಮಕ ಮಾಡಿದ್ದಕ್ಕೆ ಘಾಳೆ ಅವರು ಪಕ್ಷದ ವರಿಷ್ಠರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

## 1 ಲಕ್ಷ ಸಸಿ ನೆಡುವ ಅಭಿಯಾನ ಉದ್ಘಾಟನೆ, ಭವನ ಅಡಿಗಲ್ಲು ಇಂದು



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಜು.12:ಗುರುವಂದನೆ, ಮಾತೆ ಕರುಣಾದೇವಿ ಅವರ ಹೆಸರಲ್ಲಿ 1 ಲಕ್ಷ ಸಸಿ ನೆಡುವ ಅಭಿಯಾನದ ಉದ್ಘಾಟನೆ ಹಾಗೂ ಸಾಂಸ್ಕೃತಿಕ ಭವನದ ಅಡಿಗಲ್ಲು ಸಮಾರಂಭ ನಗರದ ನೌಬಾದನ ಜ್ಞಾನ ಶಿವಯೋಗಾಶ್ರಮದಲ್ಲಿ ಭಾನುವಾರ (ಜು. 13) ಬೆಳಿಗ್ಗೆ 11.30ಕ್ಕೆ ನಡೆಯಲಿದೆ.

ವಿಶ್ವಕಲ್ಯಾಣ ಫೌಂಡೇಷನ್, ಜ್ಞಾನ ಶಿವಯೋಗಾಶ್ರಮ, ಶಾಂತೀಶ್ವರಿ ಸ್ವಯಂ ಸೇವಾ ಸಂಸ್ಥೆ, ಶ್ರೀ ಜಗದ್ಗುರು ಪಂಚಾಚಾರ್ಯ ಯುವಕ ಸಂಘ, ಈಶ್ವರಿ ಮಹಿಳಾ ಮಂಡಳ, ಅರಣ್ಯ ಇಲಾಖೆ, ಮೈ ಭಾರತ ಹಾಗೂ ಆರತಿ ವಿಕಾಸ ಮಹಿಳಾ ಸಮಿತಿ ಸಹಯೋಗದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಶ್ರೀಶೈಲದ ಅಕ್ಕಮಹಾದೇವಿ ಚೈತನ್ಯ ಪೀಠದ ಅಧಿಪತಿ ಮಾತೆ ಕರುಣಾದೇವಿ ಸಾನಿಧ್ಯ, ಆಶ್ರಮದ ಅಧಿಪತಿ ಡಾ. ರಾಜಶೇಖರ ಶಿವಾಚಾರ್ಯ ನೇತೃತ್ವ ವಹಿಸುವರು. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಪೌರಾಡಳಿತ ಹಾಗೂ ಹಜ್ ಸಚಿವ ರಹೀಂಖಾನ್, ಬಿಡಿಎ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಪ್ರಾದೇಶಿಕ ಉಪ ಅರಣ್ಯ ಸಂರಕ್ಷಣಾಧಿಕಾರಿ ಆಶೀಶ್ ರೆಡ್ಡಿ ಮುಖ್ಯ ಅತಿಥಿಗಳಾಗಿ, ಸಾಮಾಜಿಕ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಶ್ರೀನಿವಾಸ್ ಎನ್. ಯರಡೋಣೆ, ಕರ್ನಾಟಕ ಪಶು ವೈದ್ಯಕೀಯ ವಿಶ್ವವಿದ್ಯಾಲಯದ ಸಂಶೋಧನಾ ನಿರ್ದೇಶಕ ಬಿ.ವಿ. ಶಿವಪ್ರಕಾಶ, ಉದ್ಯಮಿ ಡಿ.ವೈ. ಬಿರಾದಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಮಹೇಶ ಬಿರಾದಾರ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಎಂ.ಡಿ. ಅಹಮ್ಮದೊದ್ದೀನ್, ಡಾ. ಓಂಕಾರ ಸ್ವಾಮಿ ಅತಿಥಿಗಳಾಗಿ ಪಾಲ್ಗೊಳ್ಳುವರು. ಪಾಪನಾಶ ದೇವಸ್ಥಾನ

ಸಮಿತಿಯ ಶಿವಕುಮಾರ ಶೆಟಕಾರ್ ಹಾಗೂ ಮೈ ಭಾರತ ಜಿಲ್ಲಾ ಯುವ ಅಧಿಕಾರಿ ಮಯೂರಕುಮಾರ ಗೋರಮೆ ಉಪಸ್ಥಿತರಿರುವರು.

ಕೇಂದ್ರ ಸರ್ಕಾರದ ರಾಜ್ಯ ಅಭಿವೃದ್ಧಿ ಸಮನ್ವಯ ಹಾಗೂ ಮೇಲುಸ್ತುವಾರಿ ಸಮಿತಿಯ ಸದಸ್ಯ ಶಿವಯ್ಯಸ್ವಾಮಿ ಪ್ರಾಸ್ತಾವಿಕವಾಗಿ ಮಾತನಾಡುವರು. ಭೂ ದಾನಿ ಶರಣಮ್ಮ ರೇವಪ್ಪ ಮುದ್ದಾ ಹಾಗೂ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಷಣ್ಮುಕಯ್ಯಸ್ವಾಮಿ ಅವರನ್ನು ಸನ್ಮಾನಿಸಲಾಗುವುದು.

ಕಾರ್ಯಕ್ರಮದಲ್ಲಿ ಭಕ್ತರಿಗೆ ಆಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ

ಯೋಜನೆಯಡಿ ಉಚಿತ ಹೆಸರು ನೋಂದಣಿಗೆ ಎರಡು ಕೌಂಟರ್‌ಗಳು ಇರಲಿವೆ.

ಕಾರ್ಯಕ್ರಮದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಗುರುಗಳ ದರ್ಶನಾಶೀರ್ವಾದ ಪಡೆಯಬೇಕು ಎಂದು ಕೇಂದ್ರ ಸರ್ಕಾರದ ರಾಜ್ಯ ಅಭಿವೃದ್ಧಿ ಸಮನ್ವಯ ಹಾಗೂ ಮೇಲುಸ್ತುವಾರಿ ಸಮಿತಿಯ ಸದಸ್ಯ ಶಿವಯ್ಯ ಸ್ವಾಮಿ ಕೋರಿದ್ದಾರೆ.

# ಅಂಚೆ ಜೀವ ವಿಮೆ ಉತ್ಪನ್ನಗಳ ಮಾರಾಟಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 12–ಇಲ್ಲಿನ ರಾಯಚೂರು ವಿಭಾಗದಲ್ಲಿ ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ನೇರ ಪ್ರತಿನಿಧಿಗಳ ನಿಯುಕ್ತಿಗಾಗಿ ಪ್ರಸ್ತಾವಿಸಿದ್ದು, ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು 10ನೇ ತರಗತಿ ಉತ್ತೀರ್ಣರಾಗಿರುವುದು ಕಡ್ಡಾಯ. ವಯೋಮಿತಿ 18 ರಿಂದ 50 ವರ್ಷಗಳು. ನಿರುದ್ಯೋಗಿ ಹಾಗೂ ಸ್ವಯಂಉದ್ಯೋಗನಿರತಯುವಕರು, ವಿಮಾ ಕಂಪನಿಗಳ ಮಾಜಿ ಏಜೆ–ಂಟರು ಹಾಗೂ ಸಲಹೆಗಾರರು, ಮಾಜಿ ಸೈನಿಕರು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮಂಡಳದ ಕಾರ್ಯಕರ್ತೆಯರು, ನಿವೃತ್ತ ಪ್ರಧಾನ ಮತ್ತು ಗ್ರಾಮ ಪಂಚಾಯತಿಯ ಸದಸ್ಯರು ಹಾಗೂ ಅಂಚೆ ವಿಭಾಗದ ಮುಖ್ಯಸ್ಥರಿಗೆ ಸಮಂಜಸವೆಂದು ಕಂಡುಬಂದ ಯಾವುದೇ ಅಭ್ಯರ್ಥಿಗಳು ಆಯ್ಕೆಯಾದ ಪಕ್ಷದಲ್ಲಿ ಅವಕಾಶ ನೀಡಲಾಗುವುದು. ನುರಿತ, ಸಂವಹನ ಕಲೆ ಹಾಗೂ ವಿಮಾ ಮಾರಾಟ ಕ್ಷೇತ್ರದಲ್ಲಿ ಪೂರ್ವಾನುಭವ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು.

ಆಯ್ಕೆಯಾದ ಅಭ್ಯರ್ಥಿಗಳು 5000 ರೂ.ಗಳನ್ನು ರಾಷ್ಟ್ರೀಯ ಉಳಿತಾಯ ಪತ್ರ ಅಥವಾ ಕಿಸಾನ ವಿಕಾಸ ಪತ್ರದ ರೂಪದಲ್ಲಿ ಭದ್ರತಾ ಠೇವಣಿ ಇಡಬೇಕಾಗುತ್ತದೆ. ಆಯ್ಕೆಯಾದ ನೇರ ಪ್ರತಿನಿಧಿಗಳಿಗೆ ಅವರು ಮಾಡಿದ ವ್ಯವಹಾರಕ್ಕೆ ತಕ್ಕಂತೆ ಸೂಕ್ತ ಕಮೀಶನ್ ನೀಡಲಾಗುವುದು. ಆಸಕ್ತರು ತಮ್ಮ ಇತ್ತೀಚಿನ ಭಾವಚಿತ್ರದೊಂದಿಗೆ ಸ್ವವಿವರ, ಶೈಕ್ಷಣಿಕ ಪ್ರಮಾಣ ಪತ್ರದ ನಕಲುಗಳೊಂದಿಗೆ ಜುಲೈ 18ರ ಬೆಳಿಗ್ಗೆ 11 ಗಂಟೆಗೆ ಗಂಜ್ ವೃತ್ತದ ಬಳಿಯಿರುವ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ನಡೆಯಲಿರುವ ನೇರ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಚೆ ಕಚೇರಿಯನ್ನು ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಲಬುರಗಿ ಪ್ರಾದೇಶಿಕ ಆಯುಕ್ತ ಶ್ರೀ ಕೃಷ್ಣ ಬಾಜಪೇಯಿ ಅವರ ಬೀಳ್ಕೊಡಿಗೆ ಸಮಾರಂಭ

# ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಗೆ ಹಲವಾರು ಕಾರ್ಯಗಳಿಗೆ ಅಧಿಕಾರಿಗಳು ಸಹಕಾರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜು.11– ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಗೆ ಹಲವಾರು ಕಾರ್ಯಗಳಿಗೆ ಸಹಕಾರ ನೀಡಿದ ಜಿಲ್ಲಾಧಿಕಾರಿಗಳು ಮತ್ತು ಪ್ರತಿಯೊಂದು ಇಲಾಖೆ ಅಧಿಕಾರಿಗಳು ಪರಸ್ಪರ ಸಹಕಾರ ನೀಡಿದ್ದಾರೆ ಎಂದು ಪ್ರಾದೇಶಿಕ ಆಯುಕ್ತರಾದ ಕೃಷ್ಣಬಾಜಪೇಯಿ ಅವರು ಹೇಳಿದರು.

ಗುರುವಾರದಂದು ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಪ್ರಾದೇಶಿಕ ಆಯುಕ್ತರ ವತಿಯಿಂದ ಹಾಗೂ ಜಿಲ್ಲಾಡಳಿತ ವತಿಯಿಂದ ಪ್ರಾದೇಶಿಕ ಆಯುಕ್ತರಾಗಿ ಕಾರ್ಯನಿರ್ವಹಿಸಿದ್ದ ಅವರಿಗೆ ಬೀಳ್ಕೋಡುಗೆ ಮತ್ತು ಅಭಿನಂದನಾ ಹಾಗೂ ಜಿಲ್ಲೆಗೆ ಪ್ರಾದೇಶಿಕ ಆಯುಕ್ತರಾಗಿ ಆಗಮಿಸಿದ್ದ ಜಹೀರಾ ನಸೀಮ ಅವರಿಗೆ ಆತ್ಮೀಯ ಸ್ವಾಗತ ಸಮಾರಂಭ ಕಾರ್ಯಕ್ರಮದಲ್ಲಿ ಮಾತನಾಡಿದರು.

ಈ ಭಾಗದಲ್ಲಿ ನಾನು ಎರಡು ವರ್ಷ 10 ತಿಂಗಳ ಕಾಲ ಕಾರ್ಯನಿರ್ವಹಿಸಿದ್ದೇನೆ ಎಂದು ಪ್ರತಿಯೊಬ್ಬರು ನೀಡಿದ ಸಹಕಾರ ನನಗೆ ಇನ್ನಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಲು ಪೇರಣೆಯಾಯಿತು. ಕೆಲಸ ನಿರ್ವಹಿಸದ್ದ ಸಮಯದಲ್ಲಿ ಈ ಭಾಗದ ಪ್ರತಿಯೊಂದು ಸಮಸ್ಯೆಗಳಿಗೆ ಸ್ಪಂದಿಸಿ ಅದ–ಕ್ಕೆ ಪರಿಹಾರಗಳನ್ನು ನೀಡಿ ಪ್ರಮಾಣಿಕತೆಯಿಂದ ಸರಕಾರದ ಸೇವೆಯನ್ನು ಸಲ್ಲಿಸಿದ್ದೇನೆ ಕಲಬುರಗಿಯಲ್ಲಿ ನಡೆದ ಸಂಪುಟ ಸಭೆ ಮತ ಏಣಿಕೆ ಕಾರ್ಯ ಸರ್ಕಾರದ ಪ್ರತಿಯೊಂದು ಕಾರ್ಯಕ್ರಮಗಳನ್ನು ತಮ್ಮೆಲ್ಲರ ಸಹಕಾರದಿಂದ ಯಶಸ್ವಿಯಾಗಿ ನಿರ್ವಹಿಸಿದ್ದೇನೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿಯವರು ಜಿಲ್ಲೆಯ ಸಮಗ್ರ ಅಭಿವೃದ್ಧಿ ಅವಿರತವಾಗಿ ಶ್ರಮಿಸುತ್ತಿದ್ದಾರೆ ಎಂತಹಕ್ಲಿಷ್ಟಕರವಾದ ಸಮಯದಲ್ಲಿಯೂ ಬಹಳಷ್ಟು ತಾಳ್ಮೆಯಿಂದ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡುವುದರ ಮುಖಾಂತರ ಪ್ರಮಾಣಿಕತೆಯಿಂದ ಕಾರ್ಯನಿರ್ವಹಿಸಿದ್ದಾರೆ. ಪೊಲೀಸ್ ಇಲಾಖೆಯಿಂದ ಬಹಳಷ್ಟು ಸಹಕಾರ ನೀಡಿದ್ದಾರೆ ಕಂದಾಯ ಇಲಾಖೆಯಲ್ಲಿಯೂ ಹಕ್ಕು ಪತ್ರ ವಿತರಣೆಯನ್ನು ಪ್ರಮಾಣಿಕತೆಯಿಂದ ಮಾಡಿದ್ದೇವೆ ಎಂದರು.

ಪ್ರಾದೇಶಿಕ ಆಯುಕ್ತರಾಗಿ ಆಗಮಿಸಿದ್ದ ಜಹೀರಾ ನಸೀಮ್ ಅವರು ಕಲಬುರಗಿ ಜಿಲ್ಲೆಯವರಾಗಿದ್ದು, ಈ ಭಾಗದ ಕಾರ್ಯನಿರ್ವಹಿಸಿದ್ದ ಕಾರಣ ಅವರಿಗೆ ಬಹಳಷ್ಟು ಅನುಭವ ಇದೆ ಮುಂದೆ ಜಿಲ್ಲಾಡಳಿತ ಸಹಕಾರದಿಂದ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಕಾರ್ಯನಿರ್ವಹಿಸುತ್ತಾರೆ ಎಂದು ಅವರು ಹೇಳಿದರು.

ಕಲಬುರಗಿ ಪ್ರಾದೇಶಿಕ ಅಯುಕ್ತರಾಗಿ ವರ್ಗಾವಣೆಗೊಂಡ ಜಹೀರಾ ನಸೀಮ್ ಅವರು ಮಾತನಾಡಿ, ಕಲಬುರಗಿ ಜಿಲ್ಲೆಯಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳ ಆಗಬೇಕಾದರೆ ತಮ್ಮೆಲ್ಲರ ಸಹಕಾರ ಅಗತ್ಯ ಎಂದು ಹೇಳಿದರು.

ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಎಲ್ಲ ಅಧಿಕಾರಿಗಳು ಜಿಲ್ಲೆಯಲ್ಲಿ ಯಾವುದೇ ಚುನಾವಣೆ, ಸಂಪುಟ ಸಭೆಗಳು ಮತ ಏಣಿಕೆ ಕಾರ್ಯಗಳು ಯಶಸ್ವಿಯಾಗಿ ನಡೆಯಬೇಕಾದರೆ ಜಿಲ್ಲಾಡಳಿತ ಒಂದು ತಂಡವಾಗಿ ಪ್ರತಿಯೊಬ್ಬರ ಸಹಾಯ ಸಹಕಾರದಿಂದ ಕಾರ್ಯನಿರ್ವಹಿಸಿದ್ದಾರೆ. ಜಿಲ್ಲೆಯ ಪ್ರಾದೇಶಿಕ ಆಯುಕ್ತರಾಗಿ ಅಧಿಕಾರ ವಹಿಸಿಕೊಂಡ ನಾನು ಕೂಡ ನೀಲಿ ನಕ್ಷೆಯನ್ನು ತಯಾರಿಸಿಕೊಂಡು ಈ ಭಾಗದ ಸಮಗ್ರ ಅಭಿವೃದ್ಧಿ ಪ್ರಮಾಣಿಕ ಕಾರ್ಯನಿರ್ವಹಿಸುತ್ತೇನೆ ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ನಳಿನ್ ಆತುಲ್ ಅವರು ಮಾತನಾಡಿ, ಸುಮಾರು 2 ವರ್ಷದ ಹೆಚ್ಚು ಕಾಲ ಜಿಲ್ಲೆಯ ಪ್ರಾದೇಶಿಕ ಆಯುಕ್ತರಾಗಿ ಜನರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವ ಮುಖಾಂತರ ಸರಕಾರದ ಕಾರ್ಯಕ್ರಮ ಯಶಸ್ವಿಗೊಳಿಸಲು ಪ್ರಮಾಣಿಕ ಸೇವೆ ಸಲ್ಲಿಸಿದ್ದಾರೆ.

ವಿಶೇಷವಾಗಿ ರೈತರಿಗೆ ಮತ್ತು ಕಲ್ಯಾಣ ಕರ್ನಾಟಕ ಭಾಗದ ಬರುವ ಪ್ರತಿಯೊಂದು ಜಿಲ್ಲೆಗಳ ಸಮಸ್ಯೆಗೆ ತ್ವರಿತವಾಗಿ ಸ್ಪಂದಿಸಿ ಅದಕ್ಕೆ ಪರಿಹಾರ ನೀಡುವ ಮುಖಾಂತರ ಪ್ರತಿಯೊಬ್ಬ ಅಧಿಕಾರಿಗೂ ಸೂಕ್ತ ಮಾರ್ಗದರ್ಶನ ನೀಡಿದರು. ಬಿಹಾರ ರಾಜ್ಯದಿಂದ ಬಂದು ಕನ್ನಡ ಭಾಷೆ ಮೇಲೆ ಅಭಿಮಾನದಿಂದ ಬೀಳ್ಕೊಡಗೆ ಸಮಾರಂಭದಲ್ಲಿ ಕನ್ನಡ ಭಾಷೆಯಲ್ಲಿ ಮಾತನಾಡಿದರು ಇವರು ನಿರ್ವಹಿಸಿದ ಕಾರ್ಯ ಪ್ರತಿಯೊಬ್ಬರಿಗೆ ಸ್ಪೂರ್ತಿಯಾಗಬೇಕು ಎಂದರು.

ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ ಮಾತನಾಡಿ, ಪ್ರಾದೇಶಿಕ ಆಯುಕ್ತ ಕೃಷ್ಣ ಬಾಜಪೇಯಿ ಅವರು ಕಲ್ಯಾಣ ಕರ್ನಾಟಕ ಸಮಗ್ರ ಅಭಿವೃದ್ಧಿಗೆ ಯಾವುದೇ ರೀತಿಯ ಪ್ರಚಾರವಿಲ್ಲದೇ ದಕ್ಷತೆ ಪ್ರಮಾಣಿಕತೆಯಿಂದ ತಮ್ಮ ಕಾರ್ಯನಿರ್ವಹಿಸಿದ್ದಾರೆ. ಎಂದು ಅವರು ಹೇಳಿದರು.

ವಿಶೇಷವಾಗಿ ಶರಣಬಸವೇಶ್ವರ ಹತ್ತಿರ ಅಪ್ಪಾ ಕೆರೆಯ ಪುನ:ಶ್ಚೇತನ ಜಿಲ್ಲೆಯಲ್ಲಿ ಹಲವಾರು ಕೆರೆಗಳ ಪುನ:ಶ್ಚೇತನಗೊಳಿಸಿ ಕೆರೆಯಲ್ಲಿ ನೀರು ಸಂಗ್ರಹಣೆಯಾಗುವಂತೆ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ ಕಂದಾಯ ಇಲಾಖೆಯಲ್ಲಿ ಹಲವಾರು ಕಾರ್ಯಕ್ರಮಗಳು ಮತ್ತು ಕ್ರೀಡೆಯಲ್ಲಿ ಆಸಕ್ತಿ ವಹಿಸಿ ಭಾಗವಹಿಸಿದ್ದಾರೆ ಎಂದರು.

ಲೋಕಸಭೆ ವಿಧಾನ ಸಭೆ ಸಂಪುಟ ಸಭೆಗಳ ಕಾರ್ಯಕ್ರಮ ಯಶಸ್ವಿಗೊಳಿಸಲು ನನ್ನೊಂದಿಗೆ ಚರ್ಚಿಸಿ ಸೂಕ್ತ ನಿರ್ಧಾರ ತೆ–ಗೆದುಕೊಂಡು ಕಾರ್ಯಕ್ರಮ ಯಶಸ್ವಿಗೊಳಿಸಲು ಸಹಕರಿಸಿದ್ದಾರೆ. ಜಿಲ್ಲಾಡಳಿತ ಮತ್ತು ಪ್ರಾದೇಶಿಕ ಕಚೇರಿ ಪ್ರತಿಯೊಬ್ಬ ಅಧಿಕಾರಿಗಳು ಪ್ರತಿಯೊಂದು ಕಾರ್ಯಕ್ಕೆ ಸಹಕಾರ ನೀಡುವ ಮುಖಾಂತರ ಜಿಲ್ಲಾಡಳಿತ ಒಂದು ಕುಟುಂಬದಂತೆ ಪರಸ್ಪರ ಸಹಕಾರದಿಂದ ಪ್ರತಿಯೊಂದು ಕಾರ್ಯಕ್ರಮಗಳು ಜನರಿಗೆ ತಲುಪಿಸಲು ಮತ್ತು ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಪ್ರತಿಯೊಬ್ಬ ಸಹಕಾರದಿಂದ ಕಾರ್ಯನಿರ್ವಹಿಸಿದ್ದಾರೆ ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಸಮಿತಿ ಅಧ್ಯಕ್ಷ ಲಕ್ಷ್ಮಣ ದಸ್ತಿ ಮಾತನಾಡಿ, ಜಿಲ್ಲೆಗೆ ಅಧಿಕಾರಿಗಳು ಬರುತ್ತಾರೆ ಮತ್ತು ವರ್ಗಾಣೆಯಾದ ಜಿಲ್ಲೆಯಿಂದ ಹೋಗುತ್ತಾರೆ ತಮ್ಮ ಅಧಿಕಾರ ಅವಧಿಯಲ್ಲಿ ಜನರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂಧಿಸುವ ಅಧಿಕಾರಿಗಳು ಅವರು ಮಾಡಿದ ಅಭಿವೃದ್ಧಿ ಕಾರ್ಯಗಳನ್ನು ಈ ಭಾಗದ ಜನರು ಶ್ರಮಿಸುತ್ತಾರೆ ಇತಿಹಾಸ ನಿರ್ಮಿಸಬೇಕಾದರೆ ಒಳ್ಳೆಯ ಕೆಲಸಗಳನ್ನು ಮಾಡಬೇಕು ಬಡವರ ಸಮಸ್ಯೆಗಳಿಗೆ ನಯ ವಿನಯದಿಂದ ತ್ವರಿತವಾಗಿ ಸ್ಪಂಧಿಸಿ ಪರಿಹಾರ ನೀಡಿ ತಮ್ಮ ಕಾರ್ಯನಿರ್ವಹಿಸಿದ್ದಾರೆ ಎಂದು ಅವರಯ ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡುರು ಶ್ರೀನಿವಾಸಲು, ಜಿಸ್ಕಾಂನ ವ್ಯವಸ್ಥಾಪಕ ನಿರ್ದೇಶಕರವೀಂದ ಕರಲಿಂಗಣ್ಣವರ್, ಕಲಬುರಗಿ ಸಹಾಯಕ ಆಯುಕ್ತೆ ಸಾಹಿತ್ಯ ಮಾತನಾಡಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಸ್ವಾಗತಿಸಿದರು. ವೇದಿಕೆ ನಗರ ಪೋಲಿಸ್ ಆಯುಕ್ತರ ಡಾ. ಶರಣಪ್ಪ ಎಸ್.ಡಿ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಜಿಲ್ಲೆಯ ಜಿಲ್ಲಾಮಟ್ಟದ ಅಧಿಕಾರಿಗಳು ತಹಶೀಲ್ದಾರರು ಪ್ರಾದೇಶಿಕ ಕಚೇರಿ ಅಧಿಕಾರಿಗಳು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಸಂಚಾರ ನಿಯಮ ಉಲ್ಲಂಘಿಸಿದ 10 ಶಾಲಾ ವಾಹನಗಳ ಜಪ್ತಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಜು.12–ಉತ್ತರ ವಿಭಾಗದ ಸಂಚಾರ ಪೊಲೀಸರು ಆರ್‌ಟಿಓ ಅಧಿಕಾರಿಗಳ ಸಹಯೋಗದೊಂದಿಗೆ ಕಾರ್ಯಾಚರಣೆ ನಡೆಸಿ ಸಂಚಾರ ನಿಯಮಗಳನ್ನು ಉಲ್ಲಂಘನೆ ಮಾಡಿದ 10 ಶಾಲಾ ವಾಹನಗಳನ್ನು ಜಪ್ತಿ ಮಾಡಿದ್ದಾರೆ.

ಇಂದು ಬೆಳಗ್ಗೆ 6 ಗಂಟೆಯಿಂದ 9 ಗಂಟೆಯವರೆಗೆ ಉತ್ತರ ಸಂಚಾರ ವಿಭಾಗದಲ್ಲಿ ಶಾಲಾ ವಾಹನಗಳ ವಿರುದ್ಧ ವಿಶೇಷ ಕಾರ್ಯಚರಣೆ ನಡೆಸಿ, ಅಧಿಕ ಮಕ್ಕಳನ್ನು ಕರೆದೊಯ್ಯುವುದು, ಮದ್ಯಸೇವನೆ ಮಾಡಿ ವಾಹನ ಚಾಲನೆ ಸೇರಿದಂತೆ ವಿವಿಧ ಸಂಚಾರಿ ನಿಯಮ ಉಲ್ಲಂಘನೆ ಬಗ್ಗೆ ಒಟ್ಟು 771 ವಾಹನಗಳನ್ನು ತಪಾಸಣೆ ಮಾಡಿದ್ದಾರೆ.

ಈ ಪೈಕಿ 6 ಡಿಡಿ ಪ್ರಕರಣಗಳನ್ನು ದಾಖಲಿಸಿಕೊಂಡಿರುವ ಪೊಲೀಸರು 10 ವಾಹನಗಳನ್ನು ಜಪ್ತಿ ಮಾಡಿ, ಆರ್‌ಟಿಓ ಅವರಿಂದ 45 ನೋಟೀಸ್ ನೀಡಲಾಗಿದೆ ಎಂದು ಉಪ ಪೊಲೀಸ್ ಆಯುಕ್ತರಾದ ಸಿರಿಗೌರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆಲವರ ವಿರೋಧದ ನಡುವೆಯೂ ಅನಧಿಕೃತ ಅಂಗಡಿಗಳ ತೆರವು ಕಾರ್ಯಚರಣೆ ಯಶಸ್ವಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲೂಕಿನ ಮನ್ನಾಎಖ್ಖೇಳ್ಳಿ ಗ್ರಾಮದ ಸರಕಾರಿ ಸಮೂದಾಯ ಆರೋಗ್ಯ ಕೇಂದ್ರದ ಎದುರುಗಡೆ ಇರುವ ಸರಕಾರಿ ಭೂಮಿಯನ್ನು ಒತ್ತುವರಿ ಮಾಡಿಕೊಂಡ ಅನಧಿಕೃತ ಅಂಗಡಿಗಳನ್ನು ಜೆಸಿಬಿ ಯಂತ್ರ ಬಳಸಿ ಬಿಗಿ ಪೊಲೀಸ ಬಂದೋಬಸ್ತ ನಡುವೆ ತೆರವು ಕಾರ್ಯಚರಣೆ ಜರುಗಿತು. ಆರಂಭದಲ್ಲಿ ಕೆಲ ವ್ಯಾಪಾರಿಗಳ ವಿರೋಧದ ನಡುವೆಯೂ ಅಂಗಡಿ ತೆರವು ಕಾರ್ಯಚರಣೆ ನಡೆಯಿತು. ಕೋಟ್ಯಾಂತರ ರೂಪಾಯಿ ಮೌಲ್ಯದ ಸ್ಥಳದಲ್ಲಿ ಸುಮಾರು 40ಕ್ಕೂ ಹೆಚ್ಚು ವ್ಯಾಪಾರಿಗಳು ಅನಧಿಕೃತವಾಗ ಅಂಗಡಿಗಳನ್ನು ಹಾಕಿ ವ್ಯಾಪಾರವನ್ನು ನಡೆಸುತ್ತಿದ್ದರು. ಸರಕಾರಿ ಸಮೂದಾಯ ಆರೋಗ್ಯ ಕೇಂದ್ರದ ಕೌಂಪೌಂಡನ ಸುತ್ತುವರೆದ ಅಂಗಡಿಗಳ ಮೇಲೆ ಜೆಸಿಬಿ ಯಂತ್ರವು ಒಂದೊಂದಾಗಿ ಅಂಗಡಿಗಳ ತೆರವು ಕಾರ್ಯಚರಣೆ ಆರಂಭವಾದ ಬಳಿಕ ವ್ಯಾಪಾರಿಗಳು ತಮ್ಮ ತಮ್ಮ ಅಂಗಡಿಗಳನ್ನು ಖಾಲಿ ಮಾಡಲು ಆರಂಭಿಸಿದರು.

ಗ್ರಾಮ ಪಂಚಾಯತ ಕಳೆದ ಹಲವು ದಿನಗಳಿಂದ ಅಂಗಡಿಗಳ ತೆರವುಗೊಳಿಸುವ ಕುರಿತು ಅಂಗಡಿ ಮಾಲೀಕರಿಗೆ ನೋಟಿಸ ಮತ್ತು ಧ್ವನಿವರ್ಧಕವನ್ನು ಬಳಸಿ ತೆರವು ಕಾರ್ಯಚರಣೆ ನಡೆಸುವ ಮಾಹಿತಿ ನೀಡಿದರು ಸಹ ಅಂಗಡಿ ಮಾಲೀಕರು ಶನಿವಾರದ ಬೆಳಿಗ್ಗೆ ವರೆಗೂ ಅಂಗಡಿಗಳಲ್ಲಿನ ವಸ್ತುಗಳನ್ನು ತೆಗೆದಿರಲ್ಲಿಲ್ಲ. ಕೆಲ ಅಂಗಡಿ ಮಾಲೀಕರು ಅಂಗಡಿ ತೆರವುಗೊಳಿಸುವುದರಿಂದ ನಮ್ಮ ಜೀವನ ಬೀದಿಗೆ ಬಂದತಾಗಿದೆ. ಈ ಅಂಗಡಿಯನ್ನು ನಂಬಿ ಹೊಟ್ಟೆ ತುಂಬಿಕೊಳ್ಳುತ್ತಿದೇವು ಎಂದು ಇತ್ಯಾದಿತ ಕಷ್ಟ ನಷ್ಟಗಳನ್ನು ಸ್ಥಳದಲ್ಲಿದ್ದ ಕೆಲ ವ್ಯಾಪಾರಿಗಳು ಅಧಿಕಾರಿಗಳ ಮುಂದೆ ತಮ್ಮ ಅಳಲನ್ನು ತೊಡಿಕೊಂಡರು. ಚಿಟಗುಪ್ಪ ತಹಸಿಲ್ದಾರ ಮಂಜುನಾಥ ಪಂಚಾಳ, ಸಿಪಿಐ ಗುರು ಪಾಟೀಲ, ಪಿಎಸ್‌ಐಗಳಾದ ಮಹೇಂದ್ರಕುಮಾರ, ನಿಂಗಪ್ಪ ಮಣ್ಣೂರ, ಬಾಷುಮಿಯಾ ಕೊಂಚೂರ್, ಅಭಿವೃದ್ಧಿ ಅಧಿಕಾರಿ ಭಾಗ್ಯಜ್ಯೋತಿ, ವಿಜಯಕುಮಾರ ಸೇರಿದಂತೆ ಕಂದಾಯ, ಪೊಲೀಸ ಇಲಾಖೆಯ ಸಿಬ್ಬಂದಿ ವರ್ಗದವರು ಇದ್ದರು.




ಬಸವಕಲ್ಯಾಣ :– ರಾಷ್ಟ್ರೀಯ ಹೆದ್ದಾರಿ ಉಪ ವಿಭಾಗ ಚಿಕ್ಕಬಳ್ಳಾಪೂರದಲ್ಲಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾಗಿ (Aee) ಸೇವೆ ಸಲ್ಲಿಸಿ ನಿವೃತ್ತರಾದ ಮಲ್ಲಿಕಾರ್ಜುನ ಮೋಳಕೆರಿ ಅವರಿಗೆ ಶ್ರೀಮಠದಲ್ಲಿ ಪೀಠಾಧಿಪತಿಗಳಾದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸತ್ಕರಿಸಿ, ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಕೆಪಿಸಿಸಿ ಸಹಕಾರ ವಿಭಾಗ ಅಧ್ಯಕ್ಷರಾದ ಧನರಾಜ ತಾಳಂಪಳ್ಳಿ, ನಿವೃತ್ತ ನ್ಯಾಯಾಧೀಶ ಸುಭಾಷ್ ಚಂದ್ರ ನಾಗರಾಳೆ, ಬೀದರ ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿ ಬಿ.ಕೆ. ಹಿರೇಮಠ, ಮುಖಂಡರಾದ ಅರ್ಜುನ ಕನಕ, ಮನೋಹರ ಮೈಸೆ, ರಾಜಕುಮಾರ ಘಾಳೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



ಬಸವಕಲ್ಯಾಣ :– ಚಿಟಗುಪ್ಪ ಸೆಂಟ್ರಲ್ ಚರ್ಚ್ ನಲ್ಲಿ ಬೆಂಗಳೂರು ರೀಜನಲ್ ಕಾನ್ಫರೆನ್ಸ್ ಗೆ ಡೆಲಿಗೇಟ್ ಆಯ್ಕೆ ಪ್ರಕ್ರಿಯೆ ನಡೆಯಿತು. ಈ ಸಂದರ್ಭದಲ್ಲಿ ಬಸವಕಲ್ಯಾಣ ಮೆಥೋಡಿಸ್ಟ್ ಚರ್ಚಿನ ಡೆಲಿಗೇಟ್ ಆಗಿ ಲೋಕೇಶ್ ಕನಕ ರನ್ನು ಆಯ್ಕೆ ಮಾಡಲಾಯಿತು. ಜಿಲ್ಲಾ ಮೇಲ್ವಿಚಾರಕರಾದ ಘನ ಬೋಧಕರಾದ ಪೌಲ್ ಮಧುಕರ್ ಹಾಗೂ ಪಾಸ್ಟರ್ ಇಮಾನ್ ವೇಲ್. ಅಮೃತ್ ವಿ. ಕ.

ಕಾರ್ಯದರ್ಶಿ ಆನಂದ್ ಮೇಟಿಕರ್, ಖಜಾಂಚಿ ರಾಕೇಶ್ ನೀಲನೂರು, ಸುಮಿತ್ ನಿಲ್ಲೋರ್, ಜೆಕೊಬ ಜಯಪ್ರಭು, ಪ್ರಶಾಂತ್ ಲಾಡೆ, ರೂಬಿನ್ ಅತಿವಾಳಕರ, ಸರೋಜಿನಿ ಕುಮಾರ್ ಡ್ಯಾನಿಯಲ, ಸ್ನೇಹಲತಾ ಮಲ್ಲಿಕಾರ್ಜುನ, ಅನಿತಾ ಧೂಳಪ್ಪ, ಇನ್ನಿತರರು ಉಪಸ್ಥಿತರಿದ್ದರು.




ಬಸವಕಲ್ಯಾಣ :– ತಾಲೂಕಿನ ಧನ್ನೂರ (ಕೆ) ಸರ್ಕಾರಿ ಪ್ರೌಢ ಶಾಲೆಯಲ್ಲಿ ಸುಮಾರು ವರ್ಷಗಳಿಂದ ಶಾಲೆಯ ಮುಖ್ಯ ಗುರುಗಳಾಗಿ ಸೇವೆ ಸಲ್ಲಿಸುತ್ತಿದ ದಿನಾಂಕ 30 – 6 – 2025 ರಂದು ಸೇವಾ ನಿವೃತ್ತಿ ಹೊಂದಿದರಿಂದ ಚಂದ್ರಕಾಂತ ಕಿವಡೆ ಯವರಿಗೆ ಇಲ್ಲಿನ ಯಾತ್ರಿ ನಿವಾಸದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕ. ರಾ.ಪ್ರೌ.ಶಾ.ಸ.ಶಿ ಸಂಘದ ಅಧ್ಯಕ್ಷರು ಶ್ರೀ ವಿಜಯಕುಮಾರ್ ಮಾನೆ ಹಾಗೂ ಹುಲಸೂರು ತಾಲ್ಲೂಕಿನ ಅಧ್ಯಕ್ಷರಾದ ಸೂರ್ಯಕಾಂತ ಅಡಕೆ ಮತ್ತು ಪದಾಧಿಕಾರಿಗಳೆಲ್ಲರು ಸನ್ಮಾನಿಸಿ ಶುಭ ಕೋರಿದರು.

# ಜು.14 ರಂದು ಜನಜಾಗೃತಿ ಜಾಥ

ಬೀದರ. ಜುಲೈ.12–2025–26ನೇ ಸಾಲಿನ ವಿಶ್ವ ಜನಸಂಖ್ಯಾ ದಿನಾಚರಣೆ ಅಂಗವಾಗಿ ಜನರಲ್ಲಿ ಜನಸಂಖ್ಯೆ ಹೆಚ್ಚಳದಿಂದ ಉಂಟಾಗುವ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸಲು ಜು.14 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಆರೊಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಆವರಣದಿಂದ ಜನ ಜಾಗೃತಿ ಜಾಥ ಹಮ್ಮಿಕೊಳ್ಳಲಾಗಿದೆ ಎಂದು ಬೀದರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾಡಳಿತದಿಂದ ಶಿವಶರಣ ಹಡಪದ ಅಪ್ಪಣ್ಣ ಜಯಂತಿ ಜುಲೈ 15ಕ್ಕೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 11– ಇಲ್ಲಿಯ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜುಲೈ 15ರ ಬೆಳಿಗ್ಗೆ 11 ಗಂಟೆಗೆ ಶಿವಶರಣ ಹಡಪದ ಅಪ್ಪಣ್ಣ ಅವರ ಜಯಂತಿ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪಪಾಟೀಲ್ ಅವರು ಉದ್ಘಾಟಿಸುವರು.

ಸಣ್ಣನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್. ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜಿ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ. ನಾಯಕ, ವಿಧಾನ ಪರಿಷತ್ ಶಾಸಕರಾದ ಶರ–ಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶ್ ಕುಮಾರ ಸಿಂಗ್, ಕಲಬುರಗಿ ವಿಭಾಗದ ಆಯುಕ್ತರಾದ ಕೃಷ್ಣ ಭಾಜಪೇಯಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

ಹಡಪದ ಅಪ್ಪಣ್ಣ ಸಮಾಜದ ಜಿಲ್ಲಾಧ್ಯಕ್ಷರಾದ ಗದ್ದೆಪ್ಪ ಎಮ್ ಜಕ್ಕರಮಡು ಅವರು ಶಿವಶರಣ ಹಡಪದ ಅಪ್ಪಣ್ಣ ಜಯಂತಿ ಕುರಿತು ಉಪನ್ಯಾಸ ನೀಡುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## IN THE COURT OF SENOIR CIVIL JUDGE AND JMFC COURT AT HUMNABAD

**CRL. MISC. NO. 59/2025**

1. Chandrakanth S/o late Ningappa Age; 48 years, occu: Agril
2. Jagannath S/o late Ningappa Age; 45 years, occu: Agril
3. Ganapathi S/o late Ningappa Age; 31 years, occu: Agril
4. Tukaram S/o late Ningappa Age; 23 years, occu: Agril

All R/o Vithalpur Tq: Chitguppa Dist: Bidar.

5. Tukkamma D/o late Ningappa Age; 40 years, occu: Household

R/o Mangalgi Tq: Chitguppa, Dist: Bidar.

6. Mallamma D/o late Ningappa, W/o Manik Age; 35 years,

occu: Household R/o Markunda Tq & Dist: Bidar.

7. Laxmi D/o late Ninagappa Age 25 years occu: Household

R/o Vithalpur Tq: Chitguppa Dist: Bidar.

…Petitioner.

**-- V/S --**

The Thasildar Chitguppa.

… Respondents.

Petition Under section 13(3) Birth & Death Registration Act-1969

**PAPER PUBLICATION**

Whereas the above named petitioner has filed petition under section 13(3) Birth & Death registration Act-1969, for issue the direction to respondent to give Death certificate of father of the petitioner's by name Ningappa S/o Hana-manthappa who was died on 17-04-2023, in his house, at Village Vithalpur Tq: Chitguppa, Dist: Bidar.

Hence this paper publication is issued to all concerned persons to file necessary objection if any on 17/07/2025 at 11.00 AM

Given under my hand seal of the Court on this 25/06/2025

//By order of the court//
Chief Ministerial Officer
Senior Civil Judge and JMFC
Humnabad.

# ಆರೋಗ್ಯಕರ ಸಮಾಜ ನಿರ್ಮಿಸಲು ಯುವಕರು ಮುಂದಾಗಿರಿ- ಪ್ರೊ.ಬಿ.ಎಸ್.ಬಿರಾದಾರ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.12: ಆಧುನಿಕ ಯುಗವು ತಾಂತ್ರಿಕ,ವೈಜ್ಞಾನಿಕ ಕೌಶಲ್ಯದ ನಾಗಾಲೋಟದ ವೇಗದಲ್ಲಿ ಸಾಗುತ್ತಿದೆ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಮಹತ್ವದ ಪಾತ್ರವಹಿಸುತ್ತಿದೆ. ಇದರೊಂದಿಗೆ ಆರೋಗ್ಯಕರ,ಸ್ವಸ್ಥ,ಸಾಮರಸ್ಯದ ಸುಂದರ ಸಮಾಜ ಕಟ್ಟುವ ಜವಾಬ್ದಾರಿ ಯುವ ಜನಾಂಗದ ಮೇಲಿದೆ ಎಂದು ಬೀದರ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಬಿ.ಎಸ್.ಬಿರಾದಾರ ಹೇಳಿದರು.ಅವರು ಶನಿವಾರ ಬೀದರ ವಿಶ್ವವಿದ್ಯಾಲಯದ ವತಿಯಿಂದ ಮಳಚಾಪೂರ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.ಹಳ್ಳಿಗಳಲ್ಲಿ ಆರೋಗ್ಯಕರ ಹವಾಗುಣವಿರುತ್ತದೆ. ಕೆಲವೊಮ್ಮೆ ಜನರು ದುಶ್ಚಟಕ್ಕೆ ಬಲಿಯಾಗುತ್ತಾರೆ. ಜನರಲ್ಲಿ ಕುಡಿತ, ಜೂಜು ಮುಂತಾದ ದುಶ್ಚಟಗಳನ್ನು ಬಿಡಿಸುವ ಅವಶ್ಯಕತೆಯಿದೆ. ಆ ನಿಟ್ಟಿನಲ್ಲಿ ಯುವಕರು ಜನರಲ್ಲಿ ಜಾಗೃತಿ ಮೂಡಿಸಲು ಪ್ರಯತ್ನಿಸಬೇಕಾಗಿದೆ. ಜನರಿಗೆ ಸಾಮರಸ್ಯದ ಬದುಕು ಇಂದು ಅನಿವಾರ್ಯವಾಗಿದೆ, ದ್ವೇಷವಿಲ್ಲದ ಸಹೋದರತ್ವದ ಸಮಾಜ ನಿರ್ಮಿಸುವಲ್ಲಿ ಯುವ ಜನಾಂಗ ಶ್ರಮಿಸಲಿ ಎಂದರು.



ಬೀದರ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ನಾಗಭೂಷಣ ಕಮಠಾಣೆ ಮಾತನಾಡಿ, ಭಾರತ ಸರ್ಕಾರ ಆರಂಭಿಸಿರುವ ರಾಷ್ಟ್ರೀಯ ಸೇವಾ ಯೋಜನೆಯ ಮುಖಾಂತರ ಯುವಕರು ತಮ್ಮ ಪ್ರತಿಭೆ, ಪಾಂಡಿತ್ಯ, ಸಾಮರ್ಥ್ಯ ಅಭಿವ್ಯಕ್ತಿಸಲು ಅವಕಾಶವಿದೆ. ಎಷ್ಟೋ ಸಾಧಕರು ಹಳ್ಳಿಯಿಂದಲೇ ಬಂದವರಾಗಿದ್ದಾರೆ. ಹೀಗಾಗಿ ನಾವು ಹಳ್ಳಿಯವರು,ಗ್ರಾಮೀಣ ಪರಿಸರದಿಂದ ಬಂದವರು ಎಂಬ ಕೀಳರಿಮೆಯನ್ನು ಮರೆತು ಯುವಕರು ಸದೃಢ ಸಮಾಜ ಕಟ್ಟುವಲ್ಲಿ ಮುಂದಾಗಬೇಕೆಂದರು.

ಬೀದರ ವಿಶ್ವವಿದ್ಯಾಲಯದ ಆಡಳಿತ ಕುಲಸಚಿವರಾದ ಸು-ರೇಖಾ ಕೆ.ಎ.ಎಸ್.ಮಾತನಾಡಿ, ಯುವಶಕ್ತಿ ದೇಶದ ಶಕ್ತಿಯಾಗಿದೆ ಹೀಗಾಗಿ ಅವರ ಮೇಲೆ ತುಂಬಾ ಜವಾಬ್ದಾರಿಯಿದೆ. ಇಂದಿನ ನಾಗಾಲೋಟದ ಯುಗದಲ್ಲಿ ಯುವ ಜನಾಂಗ ಸಂಕ್ರಮಣದ, ಒತ್ತಡದ,ಸ್ಪರ್ಧೆಯ ಯುಗದಲ್ಲಿ ಸರಿಯಾದ ಮಾರ್ಗವನ್ನು ಆಯ್ಕೆ ಮಾಡಿಕೊಳ್ಳಬೇಕಾದ ಅನಿವಾರ್ಯತೆಯಲ್ಲಿದೆ. ರಾಷ್ಟ್ರೀಯ ಸೇವಾ ಯೋಜನೆ ಶ್ರಮದಾನದೊಂದಿಗೆ ಪರಸ್ಪರ ಸಮಾಜದ ವ್ಯವಹಾರಗಳನ್ನು, ಗ್ರಾಮೀಣರ ಬದುಕನ್ನು ಅರಿತುಕೊಳ್ಳಲು ಸಹಕಾರಿಯಾಗುತ್ತದೆ.ಯುವಕರು ಶ್ರಮಜೀವಿಗಳಾಗಿ ಸಮಾಜದ ಸದೃಢ ಆಸ್ತಿಯಾಗಬೇಕಾಗಿದೆ.ಆ ನಿಟ್ಟಿನಲ್ಲಿ ಯುವಕರು ಹೆಜ್ಜೆಯಿಡಬೇಕಾದ ಅನಿವಾರ್ಯತೆಯಿದೆ ಎಂದರು.

ಈ ಕಾರ್ಯಕ್ರಮದಲ್ಲಿ ಬೀದರ ವಿಶ್ವವಿದ್ಯಾಲಯದ ಸಿಂಡಿ-ಕೇಟ್ ಸದಸ್ಯರಾದ ಅಬ್ದುಲ್ ಸತ್ತಾರಸಾಬರ,ಸಚಿನ್ ಶಿವರಾಜ, ಬೀದರ ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಾದ ಪ್ರೊ.ಪರಮೇಶ್ವರ ನಾಯ್ಕ.ಟಿ, ಮಳಚಾಪೂರ ಶ್ರೀ ಸಿದ್ಧಾರೂಢ ಮಠದ ಪೀಠಾಧಿಪತಿಗಳಾದ ಶ್ರೀ ಡಾ.ಸದ್ರೂಪಾನಂದ ಭಾರತಿ ಶ್ರೀಗಳು,ಬೀದರ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಕು. ವೈಷ್ಣವಿ ಪಾಟೀಲ್,ಹಿರಿಯರಾದ ಶೋಭಾ ಪಾಟೀಲ,ಮಳಚಾಪೂರ ಗ್ರಾಮ ಪಂಚಾಯತ ಅಧ್ಯಕ್ಷರಾದ ಲಕ್ಷ್ಮಿ ??ಬಾಯಿ ಪಾಟೀಲ, ಉಪಾಧ್ಯಕ್ಷರಾದ ಜಗದೇವಿ ಅಮೃತ ರಾಜನಾಳೆ, ಗ್ರಾಮ ಪಂಚಾಯತ ಸದಸ್ಯರಾದ ಶರಣಪ್ಪ ಲಗಶೆಟ್ಟಿ, ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಶಿವಕುಮಾರ ಸೀತಾ, ಸರಕಾರಿ ಪ್ರಾಥಮಿಕ ಶಾಲೆಯ ಮುಖ್ಯಗುರುಗಳಾದ ಲಕ್ಷ್ಮಿ ??, ಸರಕಾರಿ ಪ್ರೌಢಶಾಲೆಯ ಮುಖ್ಯ ಗುರುಗಳಾದ ಚಿತ್ರಲೇಖಾ, ಮಳಚಾಪೂರ ಗ್ರಾಮದ ಮುಖಂಡರಾದ ಅಶೋಕ ಗುಮ್ಮೆ, ಮಲ್ಲಿಕಾರ್ಜುನ ಜ್ಯಾಂತೆ, ವಿಶ್ವನಾಥ ಗುಮ್ಮೆ, ಪ್ರಭು ಪಾಟೀಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪಿಕೆಪಿಎಸ್ ಚುನಾವಣೆ : ಖಿಜರ್ ಸಾಹೇಬ್ ಪೆನಾಲ್‌ಗೆ ಭರ್ಜರಿ ಗೆಲುವು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 12 : ಬೀದರ ತಾಲೂಕಿನ ರೇಕುಳಗಿ ಪಿಕೆಪಿಎಸ್ ನಿರ್ದೇಶಕರ ಚುನಾವಣೆ ಶುಕ್ರವಾರ ದಿನಾಂಕ 11-7-2025 ರಂದು ನಡೆಯಿತು. ಇದರಲ್ಲಿ ಖಿಜರ್ ಸಾಹೇಬ್ ಪೆನಾಲ್‌ಗೆ ಭರ್ಜರಿ ಗೆಲುವು ಪಡೆದುಕೊಂಡಿದ್ದಾರೆ.



10 ನಿರ್ದೇಶಕರು ಅವಿರೋಧ ಆಯ್ಕೆಗೊಂಡಿರುತ್ತಾರೆ. ಮಲ್ಲಿಕಾರ್ಜುನ ಹಚ್ಚಿ ರೇಕುಳಗಿ, ದೇವೇಂದ್ರ ಬಂಬೋಳಗಿ ಮತ್ತು ಈಶ್ವರ ರೇಕುಳಗಿ, ಶಿವಕುಮಾರ ಬೊಂಬಳಗಿ ಅವರ ಮಧ್ಯೆ ಪೈಪೋಟಿ ನಡೆದಿತ್ತು. ಇವರಲ್ಲಿ ಶಿವಕುಮಾರ ಬೊಂಬಳಗಿ 266 ಮತ ಪಡೆದು ಗೆಲುವು ಸಾಧಿಸಿದ್ದಾರೆ. ಮಲ್ಲಿಕಾರ್ಜು ಹಚ್ಚಿ ಅವರು 95 ಮತ ಪಡೆದು ಸೋಲನ್ನು ಅನುಭವಿಸಿದ್ದಾರೆ. ಅದೇ ರೀತಿ ಈಶ್ವರ ರೇಕುಳಗಿ 306 ಮತ ಪಡೆದು ಗೆಲುವನ್ನು ಪಡೆದುಕೊಂಡಿರುತ್ತಾರೆ. ದೇವೇಂದ್ರ ಬಂಬಳಗಿ ಕೇವಲ 32 ಮತಗಳನ್ನು ಪಡೆದು ಸೋಲು ಕಂಡಿರುತ್ತಾರೆ.

ಆಯ್ಕೆಯಾದ ನಾಮ ನಿರ್ದೇಶಕರುಗಳು :

ಸೈಯದ್ ಖಜರ ಹುಸೇನಿ, ಶಿವಕುಮಾರ ಬಸಪ್ಪಾ, ಈಶ್ವರ ಶರಣಪ್ಪಾ, ಅರ್ಜುನ್ ನಾಗಣಿ, ಶಂಕರ ಕುಂಬಾರ್, ನೇಮತ ಅಲಿ, ನಾಗಪ್ಪಾ, ಭೀಮಣ್ಣ ಮುಸ್ತರಿ ಮಖಬುಲ್ ಪಟೇಲ್, ನೀಲಮ್ಮ ಭೀಮಣ್ಣ,ಗೋದಾವರಿ ಕಾಶಿನಾಥ, ಉಮೇಶ್ ಬಸಪ್ಪ ಪಿಕೆಪಿಎಸ್ ನಿರ್ದೇಶಕರುಗಳಾಗಿ ಆಯ್ಕೆಯಾಗಿರುತ್ತಾರೆ.

# ತಾಯಿಯೇ ಪ್ರಥಮ ಗುರು: ಚಂದ್ರಕಾಂತ ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.12: ಎದೆ ಹಾಲು ಕುಡಿಸಿ,ಮೊದಲು ಮಾತು ಕಲಿಸಿದ ಹೆತ್ತ ತಾಯಿಯೇ ಪ್ರಥಮ ಗುರು ಎಂದು ಪುರಸಭೆ ಮಾಜಿ ಅಧ್ಯಕ್ಷ ಚಂದ್ರಕಾಂತ ಪಾಟೀಲ ಅಭಿಪ್ರಾಯಪಟ್ಟರು.

ಪಟ್ಟಣದ ಶಾರದಾ ಪಬ್ಲಿಕ್ ಶಾಲೆಯಲ್ಲಿ ಆಯೋಜಿಸಿದ ಗುರು ಪೂರ್ಣಿಮಾ ಅಂಗವಾಗಿ 'ಗುರು ವಂದನಾ'ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಮಕ್ಕಳು ವಿದ್ಯೆ ಕಲಿಸಿದ ಗುರುವಿಗೆ ಎಂದು ಮರೆಯಬಾರದು. ಗುರುವಿನಿಂದಲೇ ಜೀವನದ ಮಾರ್ಗ ದೊರೆಯುವುದು,ಶಾರದಾ ಪಬ್ಲಿಕ್ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಸಂಸ್ಕಾರಭರಿತ ಗುಣಮಟ್ಟದ ಶಿಕ್ಷಣ ನೀಡಿ,ಭವ್ಯ ಭಾರತದ ಆದರ್ಶ ಪ್ರಜೆಗಳನ್ನಾಗಿ ನಿರ್ಮಾಣ ಮಾಡುತ್ತಿರುವ ಕಾರ್ಯ ಶ್ಲಾಘನೀಯ ಎಂದು ಹೇಳಿದರು. ನಿವೃತ್ತ ಪ್ರಾಚಾರ್ಯ ಅಶೋಕ ರಾಜೋಳೆ ಮಾತನಾಡಿ,ಮಹರ್ಷಿ ವೇದವ್ಯಾಸ್‌ರ ಜನ್ಮ ದಿನವನ್ನಮು ಗುರು ಪೂರ್ಣಿಮೆ ಎಂದು ಹೇಳಲಾಗುತ್ತದೆ. ಗುರು ಪೂರ್ಣಿಮಾವನ್ನು ಗುರು-ಶಿಷ್ಯರ ನಡುವಿನ ಬಾಂಧವ್ಯವನ್ನು ಗೌರವಿಸುವುದಕ್ಕಾಗಿ ಆಚರಿಸಲಾಗುತ್ತಿದೆ.ಅಜ್ಞಾನದಿಂದ ಜ್ಞಾನದೆಡೆಗೆ,ಕತ್ತಲೆಯಿಂದ ಬೆಳಕಿನೆಡೆಗೆ ತೆಗೆದುಕೊಂಡು ಹೋಗಿ ,ಕೆಳಬಿದ್ದವರನ್ನು ಮೇಲೆತ್ತುವವನೇ ನಿಜವಾದ ಗುರು ಎಂದು ಹೇಳಿದರು. ಸಂಸ್ಥೆ ಅಧ್ಯಕ್ಷ ವಸಂತರಾವ ಪಾಟೀಲ್ ಅಧ್ಯಕ್ಷತೆ ವಹಿಸಿದ್ದರು. ರಾಜೇಶ ಮುಗಟೆ,ಪ್ರಜ್ವಲ ಮುಗಟೆ,ಯೋಗೇಶ ಉಮಾಜಿ,ಅಂಬ್ರೀಶ ಖಂಡ್ರೆ,ಮುಖ್ಯಗುರುಗಳಾದ ಶಹನಾಜ ಬೇಗಂ,ಅಶ್ವಿನಿ ರಾಜೋಳೆ ಮತ್ತು ಮೀನಾಕ್ಷಿ ಪಾಟೀಲ್,ಸುಮಿತ್ರಾಪಾಟೀಲ್,ದೀಪಾ ವಿಕ್ಟೋರಿಯಾ,ಉಮಾಶ್ರೀ,ವಿಜಯಲಕ್ಷ್ಮಿ ??ೀ,ರೂಪಾ,ಪ್ರತಿಭಾ,ನಿಕೀತಾ,ಕೋಮಲ್,ಜೈಶ್ರೀ,ಪ್ರಜ್ಞಾ,ಶೃತಿ,ಮೀನಾಕ್ಷಿ,ಸೀವನಾ,ವಿದ್ಯಾ,ವಂದನಾ,ಅಂಜಲಿ, ರುಹಿನಾ,ನಾಗರಾಜ,ಹೇಮಂತ,ಬಿಬಿನ,ದಿನೇಶ,ಪ್ರವೀಣ,ಮಲ್ಲಿಕಾರ್ಜುನ,ಸಂತೋಷ,ಅಶೋಕ ಭಂಡಾರಿ ಸೇರಿದಂತೆ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಆಡಳಿತಾಧಿಕಾರಿ ಮಹಾದೇವ ಪಟ್ನೆ ಪ್ರಾಸ್ತಾವಿಕ ಮಾತನಾಡಿದರು.ನಾಗರಾಜ ನಿರೂಪಿಸಿದರು.ಹೇಮಂತ ಕುಲಕರ್ಣಿ ವಂದಿಸಿದರು.

## ಗುರು ವಂದನೆ ಗುರುಪೂರ್ಣಿಮೆಯ ಸಂಭ್ರಮ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜು.12:ತಾಲೂಕಿನ ಹೊಳಸಮುದ್ರ ಗ್ರಾಮದ ಆರಾಧ್ಯ ದೇವರಾದ ಶ್ರೀ ಸದ್ಗುರು ಹರಿನಾಥ ಮಹಾರಾಜರ ಜಾತ್ರೆ ನಿಮತ್ಯ ಗುರು ವಂದನೆ ಗುರುಪೂರ್ಣಿಮೆಯ ಸಂಭ್ರಮದಿಂದ ಆಚರಿಸಲಾಯಿತು. ಆಷಾಢ ಗುರುಪೂರ್ಣಿಮೆ ಜಾತ್ರೆಯು ಪ್ರತಿ ವರ್ಷದಂತೆ ಈ ವರ್ಷವೂ ಅರ್ಥಪೂರ್ಣವಾಗಿ ನೆರವೇರಿತು. ರಾಜ್ಯದ ನಾನಾ ಜಿಲ್ಲೆಗಳಿಂದ ಮಹಾರಾಷ್ಟ್ರ ಆಂಧ್ರಪ್ರದೇಶ್ ತೆಲಂಗಾಣ ಭಕ್ತರು ಅಪಾರ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಗುರುವಾರ ಗುರು ಪೂಜಾ ಉತ್ಸವ ಕಾರ್ಯಕ್ರಮ ನಡೆಯಿತು.

ಮಠದ ಅಧ್ಯಕ್ಷ ಜ್ಞಾನೇಶ್ವರ ಪಾಟೀಲರು ಗುರು ಮತ್ತು ಶಿಷ್ಯರ ಅನ್ಯೋನ್ಯ ಪ್ರೀತಿ ಪ್ರೇಮಕ್ಕೆ ಪ್ರತೀಕವಾಗಿರುವ ಜೀವಂತ ಸಂಜೀವಿನಿ ಸಮಾಧಿಯಾಗಿರುವ ಶ್ರೀ ಸದ್ಗುರು ಹರಿನಾಥ ಮಹಾರಾಜರ ಸಮಾಧಿಗೆ ಪೂಜೆ ಸಲ್ಲಿಸಿ ಚಾಲನೆ ನೀಡಿದರು. ಮಹಾ ತಪಸ್ವಿ ಸಂತ ಹರಿನಾಥ ಮಹಾರಾಜರ ಸಮಾಧಿಯು ಹೂಗಳಿಂದ ಅಲಂಕರಿಸಲಾಯಿತು. ಹಿಂದೂ ಮುಸ್ಲಿಂ ಕ್ರೈಸ್ತ ಸಿಖ್ ಇಸಾಯಿ ಹೀಗೆ ಎಲ್ಲಾ ಧರ್ಮದವರು ಪಾಲ್ಗೊಂಡಿರುತ್ತಾರೆ. ಇಲ್ಲಿ ಯಾವುದೇ ಜಾತಿ ಮತ ಪಂಥಗಳಿಲ್ಲ ಇದಕ್ಕೆಲ್ಲ ಹರಿನಾಥ ಮಹಾರಾಜರು ಕೈಗೊಂಡ ಪ್ರಚಾರವೇ ಸಾಕ್ಷಿ.ಸುಭಾಂಗಿ ಮೋಹಿತ್ ಹರಿನಾಥ ಮಹಾರಾಜರ ಸಮಾಧಿಗೆ ಅಭಿಷೇಕ ಸಲ್ಲಿಸಿದರು ಸಚಿನ್ ಮೊರೆ ಹೂಗಳಿಂದ ಅಲಂಕರಿಸಿದರು.ಗುರುವಾರ ಮಂದಿರದಲ್ಲಿ ಸಾಯಂಕಾಲ ಆರು ಘಂಟೆಗೆ ಮಹಾಆರುತಿ ನೆರೆದ ಭಕ್ತರು ಸಲ್ಲಿಸಿದರು.ನ್ಯಾನೇಶ್ವರ ಪಾಟೀಲ್ ಅನಿಲ್ ಬಿರ್ಗೆ ನಾನಾಸಾಹೇಬ ಪಾಟೀಲ್,ಗೋಪಾಳರಾವ ಪಾಟೀಲ್ಸ ಸಂಗಮೇಶ್ವರ ಎಸ್ ಮುರ್ಕೆ,ಭರತ ಕದಂ ಸಂಜು ಬೆಣ್ಣೆ ಪ್ರಭು ಬೆಣ್ಣೆ ಪ್ರದೀಪ ಪಾಟೀಲ್ ಅರ್ಚಕ ಪ್ರವೀಣ್ ಮಹಾರಾಜ್ ಇದ್ದರು.

ಗುರುಪೂರ್ಣಿಮೆಯ ಮರುದಿನ ಪಲ್ಲಕ್ಕಿ ಉತ್ಸವ ಕಾರ್ಯಕ್ರಮ ನಡೆಯಿತು. ಮಠದಿಂದ ಸಕಲ ವಾದ್ಯಗಳೊಂದಿಗೆ ಮೆರವಣಿಗೆ ಮೇಳದೊಂದಿಗೆ ಕಾರ್ಯಕ್ರಮ ಪ್ರಮುಖ ಬೀದಿಗಳ ಮೂಲಕ ಸಡಗರ ಸಂಭ್ರಮದಿಂದ ರಾಮಮಂದಿರಕ್ಕೆ ಬಂದು ತಲುಪುತ್ತದೆ. ಅಲ್ಲಿ ಇಂದಿನ ವಿದ್ಯಮಾನಗಳ ಕುರಿತು ಬಹಳ ವಿಶಿಷ್ಟ ರೀತಿಯಲ್ಲಿ ಭಾರುಂಡ ಕಾರ್ಯಕ್ರಮಗಳು ಜರುಗಿದವು. ಈ ಕಾರ್ಯಕ್ರಮದಲ್ಲಿ ಶಂಕರ ಪೂಜಾರಿ ತಾಜೋದಿನ್ ಪಠಾಣ ಅಲ್ಲದೆ ನಾನಾ ರಾಜ್ಯಗಳಿಂದ ಆಗಮಿಸಿರುವ ಸೋಮನಾಥ್ ಮಾನೆಲಾದಾ, ಸವಿತಾ ಮಸ್ಕೆ ಬೊರಾಮನಿ , ತುಕಾರಾಮ ಮಾನೆ ಲಾದಾ, ಬಳಿರಾಮ್ ಡವಸೆ ಕಿಶನ್ ರಾವ್ ಬಿರಾದರ ದೊಹಾಳ,ಹನುಮಂತ ಬೀರಾದಾರ ದೊಹಾಳ,ವಾಮನರಾವ ಪೂಜಾರಿ ಉಮರಗಾ ಹೀಗೆ ತಮ್ಮ ಕಲೆಯ ಪ್ರದರ್ಶನವನ್ನು ನೀಡಿದರು. ಸುಮಾರು ಜನರು ಕಾರ್ಯಕ್ರಮದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಸಿ ಕೊಟ್ಟರು ಈ ಮೂರು ದಿನ ಜಾತ್ರೆಗೆ ಬಂದ ಭಕ್ತರಿಗೆ ಲಹುಜಿ ಹುಸನಾಳ ಸುಭಾಷ್ ದನ್ನ ಭೀಮ್ ನೀಲಕಂಠರಾವ ಹಂಗರಗೆ ಇವರಿಂದ ಪ್ರಸಾದ ವ್ಯವಸ್ಥೆ ಮಾಡಲಾಗಿತು. ಸುಮಾರು ಜನರು ಬಾರುಂಡ ಕಾರ್ಯಕ್ರಮದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಾನಾ ರಾಜ್ಯಗಳಿಂದ ಆಗಮಿಸಿ ತಮ್ಮ ಕಲೆಯ ಪ್ರದರ್ಶನ ನೀಡಿದರು.ಹರಕೆ ಹೊತ್ತವರು ಸಕ್ಕರೆ ಹಂಚಿ ದರ್ಶನ್ ಪಡೆದು ಭಕ್ತರು ಪುನೀತರಾದರು.

# ಬೀದಿ ನಾಟಕಕ್ಕೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಔರಾದ್:ಜು.12:ತಾಲ್ಲೂಕಿನ ನಾಗುರ್ (ಎಂ) ಹನುಮಾನ ಮಂದಿರ ಆವರಣದಲ್ಲಿ ಎಸ್ ಕೆ ಡಿ ಆರ್ ಡಿ ಪಿ ಯೋಜನೆ ವತಿಯಿಂದ ಶನಿವಾರ ಏರ್ಪಡಿಸಿದ ಬೀದಿ ನಾಟಕ ಕಾರ್ಯಕ್ರಮಕ್ಕೆ ಯೋಜನೆಯ ತಾಲ್ಲೂಕು ಯೋಜನಾಧಿಕಾರಿ ರಾಘವೇಂದ್ರ ಗೌಡ ತಮಟೆ ಬಾರಿಸುವ ಮೂಲಕ ಚಾಲನೆ ನೀಡಿದರು. ಜಿಲ್ಲಾ ಜನ ಗಣಪತಿ ಎಕಂಬೆ, ಜಾಗ್ರತಿ ಸದಸ್ಯ ಮಲ್ಲಪ್ಪಗೌಡ, ಮುಖ್ಯ ಗುರು ಶಿವಾನಂದ ಸ್ವಾಮಿ, ಬಸವರಾಜ್, ಸಂಗೀತಾ, ಭೀಮರಾವ್ ಪಾಟೀಲ್, ಭುದೇವಿ ಇದ್ದರು.

ಬಾಲ್ಯ ವಿವಾಹ ಮಾಡುವುದು ಕಾನೂನಿನ ರೀತಿಯಲ್ಲಿ ಅಪರಾಧವಾಗಿದೆ. ಬಾಲ್ಯ ವಿವಾಹ ಪ್ರಕರಣಗಳು ಕಂಡು ಬಂದರೆ ಕೂಡಲೇ ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ತಿಳಿಸಬೇಕು ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲೂಕು ಯೋಜನಾಧಿಕಾರಿ ರಾಘವೇಂದ್ರಗೌಡ ನುಡಿದರು.

ಬುಧವಾರ ತಾಲೂಕಿನ ನಾಗೂರ (ಎಂ) ಗ್ರಾಮದ ಹನುಮಾನ ಮಂದಿರ ಆವರಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಮಹಿಳಾ ಜ್ಞಾನ ವಿಕಾಸ ಕಾರ್ಯಕ್ರಮದ ಅಡಿಯಲ್ಲಿ ಏರ್ಪಡಿಸಿದ ಬೀದಿ ನಾಟಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು,ಬಾಲ್ಯವಿವಾಹ ಸಮಾಜದಲ್ಲಿ ಬಹಳ ದೊಡ್ಡದಾದ ಅನಿಷ್ಟ ಪದ್ಧತಿಯಾಗಿದೆ. ಅದನ್ನು ನಿರ್ಮೂಲನೆ ಮಾಡಲು ಎಲ್ಲರೂ ಕೈ ಜೋಡಿಸುವ ಅಗತ್ಯವಿದೆ. ಮಧ್ಯಪಾನದಿಂದ ಅನೇಕ ಕುಟುಂಬಗಳು ಬೀದಿಗೆ ಬೀಳುತ್ತವೆ. ಇದನ್ನು ತಡೆಗಟ್ಟುವುದು ಎಲ್ಲರ ಕರ್ತವ್ಯವಾಗಿದೆ. ಮಿತವಾಗಿ ನೀರು ಬಳಸಬೇಕು. ನೀರು ಮತ್ತು ನೈರ್ಮಲ್ಯದ ಬಗ್ಗೆ ಎಲ್ಲರಲ್ಲಿ ಜಾಗ್ರತಿ ಇರಬೇಕು. ಪ್ರತಿಯೊಬ್ಬರೂ ಮನೆಯಲ್ಲಿ ಶೌಚಾಲಯವನ್ನು ಕಡ್ಡಾಯವಾಗಿ ಬಳಸಿ, ಸ್ವಾಸ್ಥ ಸಮಾಜಕ್ಕೆ ಕೈಜೋಡಿಸಬೇಕು ಎಂದರು.

ಮುಖ್ಯ ಗುರು ಶಿವಾನಂದ ಸ್ವಾಮಿ ಮಾತನಾಡಿ,

ಯುವಜನತೆ ಒಳ್ಳೆಯ ಹವ್ಯಾಸಗಳನ್ನು ತಮ್ಮ ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಉತ್ತಮ ನಾಗರಿಕರಾಗಿ ಹೊರಹೊಮ್ಮಬೇಕು ಎಲ್ಲರೂ ಜಾಗ್ರತರಾಗುವ ಮೂಲಕ ಸಮಾಜವನ್ನು ದುಶ್ಚಟಗಳಿಂದ ಮುಕ್ತಿ ಗೊಳಿಸೋಣ ಮತ್ತು ಹನಿ ಹನಿ ನೀರನ್ನು ಉಳಿಸಿ ಅಮೂಲ್ಯ ಸಂಪತ್ತಾದ ನೀರನ್ನು ಸಂರಕ್ಷಿಸದಿದ್ದಲ್ಲಿ ಭವಿಷ್ಯದಲ್ಲಿ ನೀರಿನ ತೀವ್ರ ಸಮಸ್ಯೆಯನ್ನು ಎದುರಿಸಬೇಕಾಗುತ್ತದೆ. ಯೋಜನೆಯ ಹತ್ತು ಹಲವು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿ ಸಾಮಾಜಿಕ ಅರಿವು ಮೂಡಿಸಲು ಬೀದಿ ನಾಟಕವು ಒಂದು ಪ್ರಮುಖ ವಾಗಿದೆ ಎಂದರು .

ಇದೆ ವೇಳೆ ದಾವಣಗೆರೆ ಕಲಾವಿದ ವೆಂಕಟೇಶ್ ನೇತೃತ್ವದ ಶ್ರುತಿ ನಾಟಕ ಕಲಾವಿದರಿಂದ ಒಂದು ಗಂಟೆಗೂ ಹೆಚ್ಚಿನ ಕಾಲ, ಕುಡಿತದ ಚಟದಿಂದ ಆಗುವ ಪರಿಣಾಮಗಳು,ಬಾಲ್ಯ ವಿವಾಹ ಅನಿಷ್ಠ ಪದ್ಧತಿ, ಮನೆಯಲ್ಲಿ ಶೌಚಾಲಯ ಬಳಸದಿದ್ದರೆ ಆಗುವುದು ದುಷ್ಪರಿಣಾಮಗಳು,ನೀರಿನ ಹಿತ ಮಿತ ಬಳಕೆ ಹಾಗೂ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಹಲವಾರು ಸದುಪಯೋಗಗಳ ಮೇಲೆ ಬೆಳಕು ಚೆಲ್ಲುವ ಬೀದಿ ನಾಟಕ ಎಲ್ಲರ ಗಮನ ಸೆಳೆಯಿತು. ವಡಗಾಂವ್ ವಲಯ ಮೇಲ್ವಿಚಾರಕ ಮಲ್ಲಿಕಾರ್ಜುನ, ರಾಜಕುಮಾರ್ ಸೊರಳೆ, ಶಿವಶರಣಪ್ಪ ಬಿರಾದರ್, ಶೋಭಾವತಿ, ಲಲಿತಮ್ಮ, ಸುಶೀಲಮ್ಮ,ಸಂಪಾವತಿ,ಈಶ್ವರ ಬಾಯಿ, ಪಾರಮ್ಮ. ತೇಜಮ್ಮ ಸೇರಿದಂತೆ ಇತರರಿದ್ದರು.

# ಅಪ್ಪಣ್ಣ-ಲಿಂಗಮ್ಮ ಶ್ರೇಷ್ಠ ವಚನಕಾರರು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.12:ಹಡಪದ ಅಪ್ಪಣ್ಣ ಮತ್ತು ಲಿಂಗಮ್ಮ ಅವರು ಶ್ರೇಷ್ಠ ವಚನಕಾರರು ಆಗಿದ್ದರು. ಅವರ ವಿಚಾರಧಾರೆಗಳು ಸಮಾಜಕ್ಕೆ ಮಾದರಿಯಾಗಿವೆ ಎಂದು ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಆಯೋಜಿಸಿದ್ದ 489ನೆಯ ಶಿವಾನುಭವ ಗೋಷ್ಠಿ ಮತ್ತು ಹಡಪದ ಅಪ್ಪಣ್ಣ-ಲಿಂಗಮ್ಮನವರ ಜಯಂತಿ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ಅವರು ಮಾತನಾಡಿದರು.

ಈ ಶರಣರ ವಚನಗಳು ಮಾನವೀಯತೆ, ಕಾಯಕ ನಿಷ್ಠೆ, ದಾಸೋಹ ಮತ್ತು ಮೂಢನಂಬಿಕೆಗಳ ಬಗ್ಗೆ ಬೆಳಕು ಚೆಲ್ಲುತ್ತವೆ ಎಂದು ತಿಳಿಸಿದರು.ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಶಂಭುಲಿಂಗ ಕಾಮಣ್ಣ ಅನುಭಾವ ನೀಡಿದರು. ನೀಲಾಂಬಿಕಾ ಪ್ರಕಾಶ ಹಡಪದ ಬಸವ ಗುರುವಿನ ಪೂಜೆ ನೆರವೇರಿಸಿದರು. ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ನೇತೃತ್ವ ವಹಿಸಿದ್ದರು. ಈ ಸಂದರ್ಭದಲ್ಲಿ ತಾಲೂಕು ವಚನ ಸಾಹಿತ್ಯ ಪರಿಷತ್ತು ಅಧ್ಯಕ್ಷ ಗುಂಡಪ್ಪ ಸಂಗಮಕರ್, ನ್ಯಾಯವಾದಿ ರಮೇಶ ಕುರುಬಖೇಳಗಿ, ನಿವೃತ್ತ ಶಿಕ್ಷಕ ಬಸವರಾಜ ಹಡಪದ ಸೇರಿದಂತೆ ಹಲವರು ಇದ್ದರು. ಸಂತೋಷ ಹಡಪದ ಸ್ವಾಗತಿಸಿದರು. ದೀಪಕ ಠಮಕೆ ನಿರೂಪಿಸಿ, ವಂದಿಸಿದರು.

**ಸನ್ಮಾನ :**

ತಾಲೂಕಿನ ಬಾಜೋಳ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲ ಸಹ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಶರಣಪ್ಪ ಬಿರಾದಾರ್ ದಂಪತಿಗಳನ್ನು ಶ್ರೀಮಠದ ಪರವಾಗಿ **ಉಭಯ ಪೂಜ್ಯರು ಸನ್ಮಾನಿಸಿ, ಆಶೀರ್ವದಿಸಿದರು.**

ಹಡಪದ ಅಪ್ಪಣ್ಣನವರು ಶಿವಶರಣರಾಗಿದ್ದು, ಅವರು ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿದ್ದರು ಮತ್ತು ಅವರ ಧರ್ಮಪತ್ನಿ ಲಿಂಗಮ್ಮನವರು ಕೂಡ ಶ್ರೇಷ್ಠ ವಚನಗಾರ್ತಿಯಾಗಿದ್ದರು.

**– ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ**

## ಮೀನು ಕೃಷಿಕರ ದಿನಾಚರಣೆ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಮೀನುಗಾರಿಕೆ ಇಲಾಖೆಯ ವತಿಯಿಂದ ಗುರುವಾರದಂದು ಜಿಲ್ಲಾ ಕೃಷಿ ವಿಸ್ತರಣಾ ಕೇಂದ್ರದ ಸಭಾಂಗಣದಲ್ಲಿ ಮೀನು ಕೃಷಿಕರ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಮೀನು ಕೃಷಿಕರಿಗೆ ಈ ದಿನಾಚರಣೆಯ ಮಹತ್ವ ಮತ್ತು ಮೀನುಗಾರಿಕೆ ಬಗ್ಗೆ ಮಾಹಿತಿ ನೀಡಿ, 2024-25 ನೇ ಸಾಲಿನ ಅಂಜಿಜಿಜಜ ಖಿಚಿಭಟಜ ಃಂಂಞ ಎಂಬ ಇಲಾಖೆಯ ಕಿರು ಹೊತ್ತಿಗೆಯನ್ನು ಬಿಡುಗಡೆಗೊಳಿಸಲಾಯಿತು.

ಈ ಸಂದರ್ಭ ಜಂಟಿ ಕೃಷಿ ನಿರ್ದೇಶಕರಾದ ರುದ್ರೇಶಪ್ಪ, ಪಶು ಸಂಗೋಪನೆ ಇಲಾಖೆ ಉಪನಿರ್ದೇಶಕರಾದಡಾ.ಮಲ್ಲಯ್ಯ, ಕೊಪ್ಪಳ ಕೃಷಿ ವಿಸ್ತರಣಾ ಕೇಂದ್ರದ ಮುಂದಾಳು ಡಾ. ರವಿ, ಜಿಲ್ಲಾ ಪಂಚಾಯತ್ ಓಂಬುಡ್ಸ್‌ಮನ್ ವೀರಣ್ಣ ಕಮತರ್, ಜಿಲ್ಲಾ ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕ ಶ್ರೀನಿವಾಸ ಕುಲಕರ್ಣಿ, ಕೊಪ್ಪಳ ತಾಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕ ಬಸವರಾಜ್ ಪಾಟೀಲ್, ಗಂಗಾವತಿ ತಾಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕ ಆನಂದ್ ಪಾಟೀಲ್ ಹಾಗೂ ಮೀನುಗಾರಿಕೆ ಇಲಾಖೆಯ ಸಿಬ್ಬಂದಿ ವರ್ಗದವರು ಸೇರಿದಂತೆ ಜಿಲ್ಲೆಯ ವಿವಿಧ ಮೀನುಗಾರರ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು, ಮೀನುಗಾರರ ಸಹಕಾರ ಸಂಘದ ಸದಸ್ಯರು ಹಾಗೂ ಮೀನು ಕೃಷಿಕರು ಉಪಸ್ಥಿತರಿದ್ದರು.

ಕಾಂಗ್ರೆಸ್ ಯುವ ಮುಖಂಡ ಶಶಿಕಾಂತಗೆ ಜನ್ಮದಿನ ಸಂಭ್ರಮ,

## ಎಂಎಲ್ಸಿ ಭೀಮರಾವ ಪಾಟೀಲರಿಂದ ಅದ್ದೂರಿ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ ಪಟ್ಟಣದ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರ ಗೃಹ ಕಚೇರಿಯಲ್ಲಿ ಹಂದಿಕೇರಾ ಕಾಂಗ್ರೆಸ್ ಯುವ ಮುಖಂಡ ಶಿಶಿಕಾಂತ ಮೇತ್ರ ಜನ್ಮದಿನ ಕಾರ್ಯಕ್ರಮ ಆಚರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಎಂಎಲ್ಸಿ ಭೀಮರಾವ ಪಾಟೀಲ್ ಸನ್ಮಾನಿ ಶುಭಕೋರಿದರು. ಬಳಿಕ ಹಂದಿಕೇರಾ ಗ್ರಾಮದ ಕಾಂಗ್ರೆಸ್ ಯುವ ಕಾರ್ಯಕರ್ತರು ಶುಭ ಕೋರಿ ಪರಸ್ಪರ ಸಿಹಿ ವಿನಿಮಯ ಮಾಡಿಕೊಂಡಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಹಂದಿಕೇರಾ ಕಾಂಗ್ರೆಸ್ ಯುವ ಕಾರ್ಯಕರ್ತರು ಉಪಸ್ಥಿತರಿದ್ದರು.

## ಮರ ಗಿಡ ಬೆಳೆಸಿ ಪರಿಸರ ಸಂರಕ್ಷೀಸಿ : ಎಸ್.ಎಸ್. ಹಿರೇಮಠ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಪರಿಸರ ಸಮತೋಲನ ಕಾಪಾಡಲು ಪ್ರತಿಯೊಬ್ಬರು ಮರ ಗಿಡ ಬೆಳೆಸಿ ಸಂರಕ್ಷಿಸಬೇಕೆಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಿಣಾಭಿವೃದ್ಧಿ ಸಂಸ್ಥೆಯ ಹೈನುಗಾರಿಕೆ ಜಿಲ್ಲಾ ನಿರ್ದೇಶಕರಾದ ಎಸ್.ಎಸ್. ಹಿರೇಮಠತಾಲೂಕಿನಹುಣಸಗೇರಾ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿಹಮ್ಮಿಕೊಂಡಿದ್ದಪರಿಸರ ಸಂರಕ್ಷಣೆಜನಜಾಗೃತಿಹಾಗೂಸಸಿ ನೇಡುವಕಾರ್ಯಕ್ರಮಉದ್ಘಾಟಿಸಿ ಮಾತನಾಡುತ್ತವಿದ್ಯಾರ್ಥಿಗಳು ಮರಗಿಡ ಬೇಳೆಸುವ ಹವ್ಯಾಸ ಬೆಳೆಸಿಕೊಳ್ಳಲು ತಿಳಿಸಿದರು ಶ್ರೀ ಕ್ಷೇತ್ರಧರ್ಮಸ್ಥಳಗ್ರಾಮಿಣಾಭಿವೃದ್ಧಿ ಸಂಸ್ಥೆಯ ಬೀದರ್ ಜಿಲ್ಲೆಯಲ್ಲಿ ಹೈನುಗಾರಿಕೆ ಅಭಿವೃದ್ಧಿಗೆ ಹೆಚ್ಚಿನ ಉತ್ತೇಜನ ನೀಡಿದೆ.

ಸಂಸ್ಥೆ ಕೃಷಿ ಅಭಿವೃದ್ಧೀಗೆ ಹಾಗೂ ಪರಿಸರ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದರು. ಶಾಲಾಮುಖ್ಯ ಗುರುಗಳಾದ ಉಮಾಶ್ರೀ ಅಧ್ಯಕ್ಷತೆ ವಹಿಸಿದರು, ಶಾಲಾ ಮಕ್ಕಳಿಗೆ ಪೆನ್ನು ನೋಟಬುಕ್ ವಿತರಿಸಲಾಯಿತು.

ಶಾಲಾ ಆವರಣದಲ್ಲಿ ಗೀಡ ನೆಡೆಸಲಾಯಿತು.ಕೃಷಿಮೇಲ್ವಚಾರಕ ಶಿವಾನಂದ ಪ್ರಾಸ್ಥಾವಿಕ ಮಾತನಾಡಿದರು, ಸಹಾಯಕ ಪ್ರಭಂದಕರಾದ ಶಿವಕಾಂತ ಸ್ವಾಗತಿಸಿ ವಂದಿಸಿದರು.



ಚಿಟಗುಪ್ಪ:ತಾಲ್ಲೂಕಿನ ಕರಪಕಪಳ್ಳಿ ಗ್ರಾಮದ ಪರಿಸರವಾದಿ ಶೈಲೇಂದ್ರ ಕಾವಡಿ ವಿದ್ಯಾರ್ಥಿಗಳಿಗೆ ಪರಿಸರ ಜಾಗೃತಿ ಮಾಡಿ ಸಸಿ ವಿತರಿಸಿದರು. ಹಾಗೂ ಶಾಲಾ ಆವರಣದಲ್ಲಿ ಸಸಿ ನೆಡಸಲಾಯಿತ್ತು. ಶಾಲೆಯ ಮುಖ್ಯಗುರುಗಳು ಗ್ರಾ.ಪಂ. ಅಧ್ಯಕ್ಷ ನಿಲಾವತಿ ಪಾಟೀಲ ಉಪಸ್ಥಿತರಿದ್ದರು.

## ಮಾಜಿ ಶಾಸಕ ತೆಲ್ಕೂರ್ ಆರೋಪದಲ್ಲಿ ಹುರುಳಿಲ್ಲ ಶಾಸಕ ಚನ್ನಾರಡ್ಡಿ ಪಾಟೀಲ್ ಸ್ಪಷ್ಟನೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ನಗರದ ಡಿವೈಎಸ್ ಪಿ ಅಧಿಕಾರ ಸ್ವೀಕಾರ ವಿಚಾರಕ್ಕೆ ಸಂಬಂಧಪಟ್ಟಂತೆಯೇ ಬಿಜೆಪಿ ಮಾಜಿ ಶಾಸಕ ರಾಜಕುಮಾರ ಪಾಟೀಲ್ ತೆಲ್ಕೂರ್ ಮಾಡಿರುವ ಆರೋಪದಲ್ಲಿ ಯಾವುದೇ ಸತ್ಯಾಂಶವಿಲ್ಲ ಎಂದು ಕಾಂಗ್ರೆಸ್ ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಸ್ಪಷ್ಟಪಡಿಸಿದ್ದಾರೆ.

ಇಲ್ಲಿನ ತಮ್ಮ ಕಚೇರಿಯಲ್ಲಿ ಶನಿವಾರ ವಡಗೇರಾ ತಾಲೂಕಿನ 12 ಗ್ರಾಮಾಧಿಕಾರಿಗಳಿಗೆ ಲ್ಯಾಪ್ ಟಾಪ್ ವಿತರಿಸಿದ ನಂತರ ಮಾಧ್ಯಮವರೊಂದಿಗೆ ಮಾತನಾಡಿದ ಅವರು, ಖಾಲಿ ಇರುವ ಹುದ್ದೆಗೆ ರಾಜ್ಯ ಸರ್ಕಾರ, ಗೃಹ ಇಲಾಖೆ ಅಧಿಕಾರಿಗಳನ್ನು ವರ್ಗ ಮಾಡುವುದು ಸಹಜ ಕ್ರೀಯೆ. ಇಲ್ಲಿಗೆ ಪೋಸ್ಟಿಂಗ್ ಪಡೆದವರು ಯಾಕೆ ಇನ್ನೂ ಅಧಿಕಾರ ಸ್ವೀಕರಿಸಿಲ್ಲ ಎಂಬ ಬಗ್ಗೆ ಇಲಾಖೆ ಮೇಲಾಧಿಕಾರಿಗಳು ಇಲ್ಲವೇ ಡಿವೈಎಸ್ ಪಿಯಾಗಿ ಬರಲಿರುವವರು ಹೇಳಬೇಕೆಂದರು. ಆದರೇ ಇದರಲ್ಲಿ ತಮ್ಮದು ಯಾವುದೇ ಪಾತ್ರವಿಲ್ಲ ಎಂದ ಶಾಸಕರು, ಈ ಹಿಂದೇ ತೆಲ್ಕೂರ್ ಅವರು ಶಾಸಕರಾಗಿ ಕೆಲಸ ಮಾಡಿದ್ದಾರೆ. ಶಾಸಕಾಂಗ, ಕಾರ್ಯಾಂಗ ವ್ಯವಸ್ಥೆ ಅವರಿಗೂ ಗೊತ್ತಿದೆ ಅಂತ ಭಾವಿಸುತ್ತೇನೆ. ಒಬ್ಬ ಶಾಸಕ ತನ್ನ ಮತಕ್ಷೇತ್ರದಲ್ಲಿ ಬೇಕು - ಬೇಡಗಳ ಬಗ್ಗೆ ನಿರ್ಧಾರ ತೆಗೆದುಕೊಳ್ಳಲು ಒಂದು ದಿನ ಇಂತಹ ಯಾವುದೇ ವಿಷಯವನ್ನು ತಡೆಯಬಹುದು. ಅವರೇ ಹೇಳುವ ಹಾಗೇ 10-12 ದಿನಗಳಾದವು ಎಂದರೇ, ಇಷ್ಟು ಒತ್ತಡ ಸರ್ಕಾರದ ಮೇಲೆ ಹಾಕಿ ತಡೆಯುವ ಯಾವುದೇ ಬಯಕೆ ಮತ್ತು ಇಚ್ಚೆ ನನಗಿಲ್ಲ. ನಾವು ಆಡಳಿತದಲ್ಲಿವೆ, ಆರೋಪಿಸುವವರು ಪ್ರತಿಪಕ್ಷದಲ್ಲಿ ಇದ್ದಾರೆ. ಸಹಜವಾಗಿ ಇಂತಹ ಸುಳ್ಳು ಆರೋಪ ಮಾಡುತ್ತಾರೆ. ಇದೆಲ್ಲ ಸರ್ಕಾರದ ಮಟ್ಟದಲ್ಲಿ ನಡೆಯುವ ಕೆಲಸವೆಂದು ಶಾಸಕರು ಹೇಳಿದರು. ಜಿಲ್ಲಾ ಕಾಂಗ್ರೆಸ್ ಪರಿಶಿಷ್ಠ ಜಾತಿ ವಿಭಾಗದ ಅಧ್ಯಕ್ಷ ನೀಲಕಂಠ ಬಡಿಗೇರ್ ಇದ್ದರು.

### 12 ಗ್ರಾಮಾಧಿಕಾರಿಗಳಿಗೆ ಲ್ಯಾಪ್ ಟಾಪ್ ವಿತರಣೆ : ಶಾಸಕ ತುನ್ನೂರು

ಯಾದಗಿರಿ: ಇಂದು ವಡಗೇರಾ ತಾಲೂಕಿನ ಸುಮಾರು 12 ಗ್ರಾಮ ಅಧಿಕಾರಿಗಳಿಗೆ ಲ್ಯಾಪ್ ಟಾಪ್ ವಿತರಿಸಲಾಗಿದೆ. ಈ ಮೂಲಕ ಸಾರ್ವಜನಿಕರ ಕೆಲಸಗಳಿಗೆ ವೇಗ ಸಿಗಲಿದೆ ಎಂದು ಶಾಸಕ ಚನ್ನಾರಡ್ಡಿ ಪಾಟೀಲ್ ಹೇಳಿದರು. ತಮ್ಮ ಮತಕ್ಷೇತ್ರದಲ್ಲಿ ಈ ಮುಂಚೆ 17 ಲ್ಯಾಪ್ ಟಾಪ್ ವಿತರಿಸಲಾಗಿದೆ.

ಇ - ಖಾತೆ ಕೆಲಸ ಸೇರಿದಂತೆಯೇ ವಿವಿಧ ಸಾರ್ವಜನಿಕರ ಕೆಲಸಗಳಿಗೆ ಅಧಿಕಾರಿಗಳು ಸ್ಪಂಧಿಸಬೇಕೆಂದರು.

ವಡಗೇರಾ ತಹಸಿಲ್ದಾರ್ ಸೇರಿದಂತೆಯೇ ಇತರರಿದ್ದರು.

## ರಾಜಾ ವೇಣುಗೋಪಾಲ್ ನಾಯಕರಿಗೆ ನಿಗಮ ಮಂಡಳಿ ಸ್ಥಾನ ನೀಡಿ: ರಂಗನಗೌಡ ಪಾಟೀಲ್ ಮನವಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಸುರಪುರ ವಿಧಾನಸಭಾ ಮತಕ್ಷೇತ್ರದ ಜನಪ್ರಿಯ ಶಾಸಕರಾಗಿದ್ದ ದಿ: ರಾಜಾ ವೆಂಕಟಪ್ಪನಾಯಕರ ಪುತ್ರರಾದ ಜನಪ್ರಿಯ ಶಾಸಕರಾದ ರಾಜಾ ವೇಣುಗೋಪಾಲ್ ನಾಯಕರಿಗೆ ನಿಗಮ ಮಂಡಳಿ ಅಧ್ಯಕ್ಷರನ್ನಾಗಿ ನೇಮಕ ಮಾಡುವಂತೆ ಕೆಪಿಸಿಸಿ ಹಿಂದುಳಿದ ವಿಭಾಗದ ರಾಜ್ಯ ಕಾರ್ಯದರ್ಶಿ ರಂಗನಗೌಡಪಾಟೀಲ್ ದೇವಕೇರಿ ಒತ್ತಾಯಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ಕಲ್ಯಾಣ ಕರ್ನಾಟಕ ಇತಿಹಾಸದಲ್ಲಿ ಪಕ್ಷ ನಿಷ್ಠೆಗೆ ಹೆಸರು ವಾಸಿಯಾದ ಕುಟುಂಬ ಅಂದರೆ ಅದು ರಾಜಾ ವೆಂಕಟಪ್ಪ ನಾಯಕರ ಕುಟುಂಬ ವೆಂಕಟಪ್ಪ ನಾಯಕರು 4 ಸಲ ಶಾಸಕರಾಗಿ ಸುರಪುರ ಮತ ಕ್ಷೇತ್ರದ ಅಭಿವೃದ್ಧಿ ಮಾಡಿದ ಕೀರ್ತಿ ಅವರಿಗೆ ಸಲ್ಲುತ್ತೆ ಕಳೆದ 2023ರ ಚುನಾವಣೆಯಲ್ಲಿ ಆಯ್ಕೆಯಾದ ಮೇಲೆ ಉಗ್ರಾಣ ನಿಗಮದ ಅಧ್ಯಕ್ಷರನ್ನಾಗಿ ಆಯ್ಕೆಯಾದರು ಆದರೆ ಅಧಿಕಾರ ವಹಿಸಿಕೊಂಡ ಸ್ವಲ್ಪ ದಿನದಲ್ಲೇ ನಿಧನವಾದರೂ 2024ರ ಉಪ ಚುನಾವಣೆಯಲ್ಲಿ ಅವರ ಪುತ್ರರಾದ ರಾಜಾ ವೇಣುಗೋಪಾಲ್ ನಾಯಕ ಸ್ಪರ್ಧೆ ಮಾಡಿ ಅತಿ ಹೆಚ್ಚು ಅಂತರದಿಂದ ಶಾಸಕರಾದರು ಆದ್ದರಿಂದ ಹಿಂದುಳಿದ ಭಾಗದ ಅಭಿರುದ್ಧಿ ವಿಚಾರವಾಗಿ ಸುರಪುರ ಮತಕ್ಷೇತ್ರದ ಜನಪ್ರಿಯ ಶಾಸಕರಾದ ರಾಜಾ ವೇಣುಗೋಪಾಲ್ ನಾಯಕರಿಗೆ ನಿಗಮ ಮಂಡಳಿ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಬೇಕು ಎಂದು ಎ.ಐ.ಸಿ.ಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆಯವರಿಗೆ ಹಾಗೂ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಹಾಗೂ ಕೆಪಿಸಿಸಿ ಅಧ್ಯಕ್ಷರು ಹಾಗೂ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರಿಗೆ ಕೆಪಿಸಿಸಿ ಹಿಂದುಳಿದ ವರ್ಗದ ರಾಜ್ಯ ಕಾರ್ಯದರ್ಶಿಗಳಾದ ರಂಗನಗೌಡ ಪಾಟೀಲ್ ದೇವಿಕೇರಿ ಮನವಿ ಮಾಡಿಕೊಂಡಿದ್ದಾರೆ.

ಸಡಗರದಿಂದ ಜರುಗಿದ ವನಮಹೋತ್ಸವ ಸಮಾರೋಪ

## ಹಸಿರು ಮರ ಗಿಡಗಳ ಸಂರಕ್ಷಣೆ ಮಾಡಿದರೆ ನಮಗೆ ಉಳಿಗಾಲ : ಕಾವಡಿ



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಮನುಷ್ಯ ಜೀವಿಸಲು ಬೇಕಾದ ಮೂಲ ವಸ್ತುಗಳು ಗಾಳಿ ನೀರು ಕಾಡುಗಳಾಗಿವೆ ಎಂದು ಪರಿಸರವಾಹಿನಿ ಅಧ್ಯಕ್ಷ ಶೈಲೇಂದ್ರ ಕಾವಡಿ ಬೀದರ್ ತಾಲೂಕಿನ ಚಿಮ್ಮಕೋಡ ಗ್ರಾಮದ ಯಲ್ಲಾಲಿಂಗ ಪ್ರೌಢಶಾಲೆಯಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ಹಮ್ಮಿಕೊಂಡಿದ್ದ ಪರಿಸರ ಸಂರಕ್ಷಣೆ ಜಲ ಜಾಗೃತಿ ಕಾರ್ಯಕ್ರಮ ಹಾಗೂ ವನಮಹೋತ್ಸವ ಸಮಾರೊಪ ಸಮಾರಂಭ ಉದ್ಘಾಟಿಸಿ ಮಾತನಾಡುತ್ತ ತಿಳಿಸಿದರು. ಹಸಿರಿಲ್ಲದೆ ಉಸಿರಿಲ್ಲ ಎಂಬ ವಾಕ್ಯ ಸರ್ವಕಾಲಿಕ ಸತ್ಯ ಉಸಿರಾಟಕ್ಕೆ ಬೇಕಾದ ಆಮ್ಲಜನಕ ಬಿಡುಗಡೆಯಾಗುವುದೇ ಹಸಿರು ಮರ ಗಿಡಗಳಿಂದ ಮನುಷ್ಯ ಜೀವಿಸಲು ಹಸಿರು ಮರ ಗಿಡಗಳು ಸಂರಕ್ಷಣೆ ಮಾಡಿದರೆ ನಮಗೆ ಉಳಿಗಾಲವಿದೆ ಎಂದರು.ಮರಗಿಡಗಳ ಬೇರುಗಳು ಮಣ್ಣಿನ ಸವಕಳಿಯನ್ನು ತಡೆದು ಫಲವತ್ತಾದ ಮಣ್ಣು ಮಳೆ ನೀರಿಗೆ ಕೊಚ್ಚಿಕೊಂಡು ಹೋಗುವುದನ್ನು ತಡೆಯುತ್ತದೆ. ಈ ಕಾರಣಕ್ಕಾಗಿ ಕಾಡನ್ನು ಹಸಿರು ಹೊನ್ನು ಎನ್ನುತ್ತಾರೆ ಎಂದರು. ಮನುಷ್ಯ ಹುಟ್ಟಿನಿಂದ ಸಾಯುವವರಿಗೆ ಅರಣ್ಯಗಳ ಮೇಲೆ ಅವಲಂಬಿತನಾಗಿದ್ದಾನೆ. ಪ್ರತಿಯೊಬ್ಬರು ಅರಣ್ಯಗಳ ಸೌಂರಕ್ಷಣೆಗೆ ವಿಶೇಷ ಕಾಳಜಿ ವಹಿಸಲು ತಿಳಿಸಿದರು. ಪರಿಸರ ಅಸಮತೋಲನದಿಂದ ಮರಗಿಡಗಳ ನಾಶದಿಂದ ವಾಯುಗುಣದಲ್ಲಿ ಬದಲಾವಣೆಯಾಗಿ ಭೂತಾಪಮಾನ ಹೆಚ್ಚಳವಾಗುತ್ತಿದೆ ಎಂದು ತಿಳಿಸಿದರು. ಭೂತಾಪಮಾನ ಹೆಚ್ಚಳದಿಂದ ಹಲವಾರು ಪ್ರಕೃತಿ ವಿಕೋಪಗಳು ಸಂಭವಿಸಲಾರಂಭಿಸಿವೆ ಭೂತಾಪಮಾನ ಕಡಿಮೆ ಮಾಡಿದರೆ ನಮಗೆ ಉಳಿಗಾಲವಿದೆ ಎಂದು ಎಚ್ಚರಿಕೆ ನೀಡಿದರು. ಬೀದರ್ ಜಿಲ್ಲೆಯಲ್ಲಿ ಶೇ.7 ರಷ್ಟು ಅರಣ್ಯ ಹೊಂದಿದೆ.

ಪ್ರತಿಯೊಂದು ತಾಲೂಕಿನಲ್ಲಿ ಹೆಚ್ಚಳಕ್ಕೆ ಪ್ರತಿಯೊಬ್ಬರು ಕಡ್ಡಾಯವಾಗಿ ಮರ ಗಿಡಗಳು ಬೆಳೆಸಿ ಸಂರಕ್ಷಿಸಲು ವಿಶೇಷ ಕಾಳಜಿ ವಹಿಸಬೇಕೆಂದು ತಿಳಿಸಿದರು. ಪರಿಸರ ಸಮತೋಲನ ಕಾಪಾಡುವಲ್ಲಿ ಪ್ರಾಣಿ ಪಕ್ಷಿಗಳು ಪಾತ್ರ ತುಂಬಾ ಮಹತ್ವವಿದೆ ಪ್ರಾಣಿಪಕ್ಷಿಗಳು ನಮ್ಮ ದೇಶದ ಸಂಪತ್ತು ಸಂರಕ್ಷಿಸಿ ಉಳಿಸಬೇಕು ಎಂದರು ಪ್ರಾಣಿ ಪಕ್ಷಿಗಳನ್ನು ಬೇಟೆಯಾಡಿದರೆ ಮಹಾಅಪರಾಧ 1972ನೇ ವನ್ಯಜೀವಿ ಕಾಯ್ದೆಯಡಿ ಪ್ರಾಣಿಗಳನ್ನು ಬೇಟೆ ಆಡಿದರೆ ಪ್ರಕರಣ ದಾಖಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಶಾಲಾ ಮುಖ್ಯ ಗುರುಗಳಾದ ಇಂದುಮತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು ವನಮೋತ್ಸವ ಅಂಗವಾಗಿ ಹಮ್ಮಿಕೊಂಡಿದ್ದ ನಿಬಂಧ ಸ್ಪರ್ಧೆ, ಭಾಷಣ ಸ್ಪರ್ಧೆ, ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಬೀದರ ಜಿಲ್ಲಾ ಹೈನುಗಾರಿಕೆ ಅಭಿವೃದ್ಧಿ ಸಮನ್ವಯಾಧಿಕಾರಿ ಅರುಣ ಪ್ರಾಸ್ತಾವಿಕ ಮಾತನಾಡಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ ಬೀದರ್ ಜಿಲ್ಲೆಯಲ್ಲಿ ಹೈನುಗಾರಿಕೆ ಅಭಿವೃದ್ಧಿಗೆ ಹೆಚ್ಚಿನ ಉತ್ತೇಜನ ನೀಡಿದೆ ಧರ್ಮಸ್ಥಳ ಸಂಸ್ಥೆ ವತಿಯಿಂದ ಮಹಿಳಾ ಸ್ವ-ಸಹಾಯ ಸಂಘಗಳಿಗೆ ಹಲವಾರು ಯೋಜನೆಗಳು ಜಾರಿಗೆ ಮಾಡಿದೆ ಎಂದರು. ಕೃಷಿ ಮೇಲ್ವಿಚಾರಕ ಬಾಹುಬಲಿ ಸ್ವಾಗತಿಸಿದರು, ದೈಹಿಕ ಶಿಕ್ಷಕ ಪರಮೇಶ್ವರ್ ಕಾರ್ಯಕ್ರಮ ನಿರೂಪಿಸಿದರು. ಸಹಾಯಕ ಪ್ರಭಂದಕ ಗಣೇಶ ವಂದಿಸಿದರು.

## ಮಾಜಿ ಶಾಸಕ ತೆಲ್ಕೂರ್ ಆರೋಪದಲ್ಲಿ ಹುರುಳಿಲ್ಲ ಶಾಸಕ ಚನ್ನಾರಡ್ಡಿ ಪಾಟೀಲ್ ಸ್ಪಷ್ಟನೆ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ನಗರದ ಡಿವೈಎಸ್ ಪಿ ಅಧಿಕಾರ ಸ್ವೀಕಾರ ವಿಚಾರಕ್ಕೆ ಸಂಬಂಧಪಟ್ಟಂತೆಯೇ ಬಿಜೆಪಿ ಮಾಜಿ ಶಾಸಕ ರಾಜಕುಮಾರ ಪಾಟೀಲ್ ತೆಲ್ಕೂರ್ ಮಾಡಿರುವ ಆರೋಪದಲ್ಲಿ ಯಾವುದೇ ಸತ್ಯಾಂಶವಿಲ್ಲ ಎಂದು ಕಾಂಗ್ರೆಸ್ ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಸ್ಪಷ್ಟಪಡಿಸಿದ್ದಾರೆ.

ಇಲ್ಲಿನ ತಮ್ಮ ಕಚೇರಿಯಲ್ಲಿ ಶನಿವಾರ ವಡಗೇರಾ ತಾಲೂಕಿನ 12 ಗ್ರಾಮಾಧಿಕಾರಿಗಳಿಗೆ ಲ್ಯಾಪ್ ಟಾಪ್ ವಿತರಿಸಿದ ನಂತರ ಮಾಧ್ಯಮವರೊಂದಿಗೆ ಮಾತನಾಡಿದ ಅವರು, ಖಾಲಿ ಇರುವ ಹುದ್ದೆಗೆ ರಾಜ್ಯ ಸರ್ಕಾರ, ಗೃಹ ಇಲಾಖೆ ಅಧಿಕಾರಿಗಳನ್ನು ವರ್ಗ ಮಾಡುವುದು ಸಹಜ ಕ್ರೀಯೆ. ಇಲ್ಲಿಗೆ ಪೋಸ್ಟಿಂಗ್ ಪಡೆದವರು ಯಾಕೆ ಇನ್ನೂ ಅಧಿಕಾರ ಸ್ವೀಕರಿಸಿಲ್ಲ ಎಂಬ ಬಗ್ಗೆ ಇಲಾಖೆ ಮೇಲಾಧಿಕಾರಿಗಳು ಇಲ್ಲವೇ ಡಿವೈಎಸ್ ಪಿಯಾಗಿ ಬರಲಿರುವವರು ಹೇಳಬೇಕೆಂದರು. ಆದರೇ ಇದರಲ್ಲಿ ತಮ್ಮದು ಯಾವುದೇ ಪಾತ್ರವಿಲ್ಲ ಎಂದ ಶಾಸಕರು, ಈ ಹಿಂದೇ

ತೆಲ್ಕೂರ್ ಅವರು ಶಾಸಕರಾಗಿ ಕೆಲಸ ಮಾಡಿದ್ದಾರೆ. ಶಾಸಕಾಂಗ, ಕಾರ್ಯಾಂಗ ವ್ಯವಸ್ಥೆ ಅವರಿಗೂ ಗೊತ್ತಿದೆ ಅಂತ ಭಾವಿಸುತ್ತೇನೆ. ಒಬ್ಬ ಶಾಸಕ ತನ್ನ ಮತಕ್ಷೇತ್ರದಲ್ಲಿ ಬೇಕು - ಬೇಡಗಳ ಬಗ್ಗೆ ನಿರ್ಧಾರ ತೆಗೆದುಕೊಳ್ಳಲು ಒಂದು ದಿನ ಇಂತಹ ಯಾವುದೇ ವಿಷಯವನ್ನು ತಡೆಯಬಹುದು. ಅವರೇ ಹೇಳುವ ಹಾಗೇ 10-12 ದಿನಗಳಾದವು ಎಂದರೇ, ಇಷ್ಟು ಒತ್ತಡ ಸರ್ಕಾರದ ಮೇಲೆ ಹಾಕಿ ತಡೆಯುವ ಯಾವುದೇ ಬಯಕೆ ಮತ್ತು ಇಚ್ಚೆ ನನಗಿಲ್ಲ. ನಾವು ಆಡಳಿತದಲ್ಲಿವೆ, ಆರೋಪಿಸುವವರು ಪ್ರತಿಪಕ್ಷದಲ್ಲಿ ಇದ್ದಾರೆ. ಸಹಜವಾಗಿ ಇಂತಹ ಸುಳ್ಳು ಆರೋಪ ಮಾಡುತ್ತಾರೆ. ಇದೆಲ್ಲ ಸರ್ಕಾರದ ಮಟ್ಟದಲ್ಲಿ ನಡೆಯುವ ಕೆಲಸವೆಂದು ಶಾಸಕರು ಹೇಳಿದರು. ಜಿಲ್ಲಾ ಕಾಂಗ್ರೆಸ್ ಪರಿಶಿಷ್ಠ ಜಾತಿ ವಿಭಾಗದ ಅಧ್ಯಕ್ಷ ನೀಲಕಂಠ ಬಡಿಗೇರ್ ಇದ್ದರು.


### 12 ಗ್ರಾಮಾಧಿಕಾರಿಗಳಿಗೆ ಲ್ಯಾಪ್ ಟಾಪ್ ವಿತರಣೆ : ಶಾಸಕ ತುನ್ನೂರು

ಯಾದಗಿರಿ: ಇಂದು ವಡಗೇರಾ ತಾಲೂಕಿನ ಸುಮಾರು 12 ಗ್ರಾಮ ಅಧಿಕಾರಿಗಳಿಗೆ ಲ್ಯಾಪ್ ಟಾಪ್ ವಿತರಿಸಲಾಗಿದೆ. ಈ ಮೂಲಕ ಸಾರ್ವಜನಿಕರ ಕೆಲಸಗಳಿಗೆ ವೇಗ ಸಿಗಲಿದೆ ಎಂದು ಶಾಸಕ ಚನ್ನಾರಡ್ಡಿ ಪಾಟೀಲ್ ಹೇಳಿದರು. ತಮ್ಮ ಮತಕ್ಷೇತ್ರದಲ್ಲಿ ಈ ಮುಂಚೆ 17 ಲ್ಯಾಪ್ ಟಾಪ್ ವಿತರಿಸಲಾಗಿದೆ.

ಇ - ಖಾತೆ ಕೆಲಸ ಸೇರಿದಂತೆಯೇ ವಿವಿಧ ಸಾರ್ವಜನಿಕರ ಕೆಲಸಗಳಿಗೆ ಅಧಿಕಾರಿಗಳು ಸ್ಪಂಧಿಸಬೇಕೆಂದರು.

ವಡಗೇರಾ ತಹಸಿಲ್ದಾರ್.. , ಸೇರಿದಂತೆಯೇ ಇತರರಿದ್ದರು.

## ಬಸವರಾಜ್ ಹೆಸರೂರ, ಹಾಲಯ್ಯ ಹುಡೇಜಾಲಿ, ನಾಗರಾಜ್ ಇಂಗಳಗಿಯವರಿಗೆ ಸಿಜಿಕೆ ರಂಗ ಪುರಸ್ಕಾರ





ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲೆಯ ಮೂವರು ರಂಗಕರ್ಮಿಗಳಿಗೆ ಸಿಜಿಕೆ ರಂಗಪುರಸ್ಕಾರ ಘೋಷಣೆ ಮಾಡಲಾಗಿದೆ. ಜಿಲ್ಲೆಯ ಹಿರಿಯ ರಂಗಕರ್ಮಿ ಗಳಾದ ಬಸವರಾಜ್ ಹೆಸರೂರು, ಹಾಲಯ್ಯ ಹುಡೇಜಾಲಿ ಹಾಗೂ ನಾಗರಾಜ್ ಇಂಗಳಗಿ ಇವರಿಗೆ ಸಿಜಿಕೆ ರಂಗ ಪುರಸ್ಕಾರಗಳನ್ನು ಘೋಷಣೆ ಮಾಡಲಾಗಿದೆ.

ಕೊಪ್ಪಳ ವಿಶ್ವವಿದ್ಯಾಲಯ, ಕರ್ನಾಟಕ ಬೀದಿ ನಾಟಕ ಅಕಾಡೆಮಿ ಬೆಂಗಳೂರು, ಕವಿ ಸಮೂಹ, ಸೇವಾ & ಡೇವ್ಸ್. ಬಹುತ್ವಬಳಗ ಕೊಪ್ಪಳ ಸಂಯುಕ್ತ ಆಶ್ರಯದಲ್ಲಿ ನಡೆಯಲಿರುವ ಸಿಜಿಕೆ ರಂಗದಿನಾಚರಣೆಯಂದು ಸಿಜಿಕೆ ರಂಗಪುರಸ್ಕಾರ ಪ್ರಶಸ್ತಿಗಳನ್ನು ವಿತರಿಸಲಾಗುವುದು.

ಇದೇ ಜುಲೈ 14, 2025 ಸೋಮವಾರ ಬೆಳಗ್ಗೆ 11 ಗಂ-ಟೆಗೆ ಕೊಪ್ಪಳ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಕಾರ್ಯಕ್ರಮ ನಡೆಯಲಿದ್ದು ಕರ್ನಾಟಕ ನಾಟಕ ಅಕಾಡೆಮಿ, ಬೆಂಗಳೂರು ಅಧ್ಯಕ್ಷರಾದ ಕೆ.ವಿ.ನಾಗರಾಜಮೂರ್ತಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ಕೊಪ್ಪಳ ವಿಶ್ವವಿದ್ಯಾಲಯದ ಮಾನ್ಯ ಕುಲಪತಿಗಳಾದ ಪ್ರೊ. ಬಿ.ಕೆ.ರವಿ ವಹಿಸಿಕೊಳ್ಳಲಿದ್ದಾರೆ.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಚಾಂದ್ ಪಾಷಾ ಕಿಲ್ಲೆದಾರ್ ಸದಸ್ಯರು, ಕರ್ನಾಟಕ ನಾಟಕ ಅಕಾಡೆಮಿ ಬೆಂಗಳೂರು, ನಾರಾಯಣರಾವ್ ಕುಲಕರ್ಣಿ ಹಿರಿಯ ಪತ್ರಕರ್ತರು, ಕುಷ್ಟಗಿ. ಪ್ರೊ. ಕೆ.ವಿ.ಪ್ರಸಾದ ಕುಲಸಚಿವರು (ಪ್ರಭಾರ) ಕೊಪ್ಪಳ ವಿಶ್ವವಿದ್ಯಾಲಯ, ಸುರೇಶ್ ಡಿ. ಸಿಪಿಐ, ಕೊಪ್ಪಳ ಗ್ರಾಮೀಣ ಠಾಣೆ, ಕೊಪ್ಪಳ, ಡಾ. ಸುರೇಶ್ ಜಿ. ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕೊಪ್ಪಳ , ತಿಮ್ಮಾರಡ್ಡಿ ಮೇಟಿ ಆಡಳಿತಾಧಿಕಾರಿಗಳು, ಕೊಪ್ಪಳ ವಿಶ್ವವಿದ್ಯಾಲಯ ಆಗಮಿಸಲಿದ್ದಾರೆ. ಆಸಕ್ತ ರಂಗ ಅಭಿಮಾನಿಗಳು ಕಾರ್ಯಕ್ರಮಕ್ಕೆ ಆಗಮಿಸಬೇಕೆಂದು ಸಂಘಟಕರಾದ ಸಿರಾಜ್ ಬಿಸರಳ್ಳಿ, ರಾಜಬಕ್ಷಿ ಹೆಚ್.ವಿ. ಪ್ರಕಟಣೆಯಲ್ಲಿ ಕೋರಿದ್ದಾರೆ.

## ಡಿವೈಎಸ್ಪಿ ವಿಜಯಕ್ರಾಂತಿ ಕರ್ತವ್ಯದ ವರದಿ ಮಾಡಿಕೊಳ್ಳದಿದ್ದರೆ ಧರಣಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು 12: ಹಣ ನೀಡುವಂತೆ ಬೇಡಿಕೆ ಇಟ್ಟಿರುವ ಪರಿಣಾಮ ಪಿಎಸ್ಐ ಪರಶುರಾಮ ಆತ್ಮಹತ್ಯೆ ಪ್ರಕರಣ ಮಾಸುವ ಮುನ್ನವೇ ಯಾದಗಿರಿ ಡಿವೈಎಸ್ಪಿ ಹುದ್ದೆಗೆ ವರದಿ ಮಾಡಿಕೊಳ್ಳದಂತೆ ಅಡ್ಡಿಪಡಿಸಿರುವವರ ವಿರುದ್ಧ ಮಾಜಿ ಶಾಸಕ, ಬಿಜೆಪಿ ವಿಭಾಗೀಯ ಪ್ರಭಾರಿ ರಾಜಕುಮಾರ ಪಾಟೀಲ್ ತೇಲ್ಕೂರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಡಿವೈಎಸ್ಪಿ ಹುದ್ದೆಯ ತರಬೇತಿ ಪೂರ್ಣಗೊಳಿಸಿ ಯಾದಗಿರಿಯಲ್ಲಿ ಡಿವೈಎಸ್ಪಿ ಹುದ್ದೆಯ ಕಾರ್ಯಭಾರದ ಕರ್ತವ್ಯದ ವರದಿ ಮಾಡಿಕೊಳ್ಳದಿರುವಂತೆ ಒತ್ತಡ ಹಾಕಿರುವುದನ್ನು ಗಂಭೀರವಾಗಿ ಪರಿಗಣನೆಗೆ ತೆಗೆದುಕೊಂಡು ಮತ್ತೊಂದು ದುರಂತಕ್ಕೆ ಅವಕಾಶ ಮಾಡಿಕೊಡದೇ ತಕ್ಷಣವೇ ಕರ್ತವ್ಯ ಹಾಜರಾಗುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುವಂತೆ ಮಾಜಿ ಶಾಸಕರು ಆಗ್ರಹಿಸಿದ್ದಾರೆ.

ಈ ಕುರಿತು ಮುಖ್ಯಮಂತ್ರಿ ಸಿದ್ಧರಾಮಯ್ಯ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ ಹಾಗೂ ರಾಜ್ಯ ಪೊಲೀಸ್ ಮಹಾನಿರ್ದೇಶಕ ಅಲೋಕ ಮೋಹನ್ ಅವರಿಗೆ ಪತ್ರ ಬರೆದಿರುವ ತೇಲ್ಕೂರ, ಜೇವರ್ಗಿ ತಾಲೂಕಿನ ವಿಜಯಕ್ರಾಂತಿ ಪ್ರತಿಭಾನ್ವಿತೆ. ಸ್ಪರ್ಧಾತ್ಮಕಾ ಪರೀಕ್ಷೆಯಲ್ಲಿ ಮೊದಲ ಪ್ರಯತ್ನದಲ್ಲೇ ನೇರವಾಗಿ ಡಿವೈಎಸ್ಪಿಯಾಗಿದ್ದಾರೆ. ತರಬೇತಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದರಿಂದ ತೆರವು ಇದ್ದ ಯಾದಗಿರಿ ಡಿವೈಎಸ್ಪಿ ಹುದ್ದೆಯ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವಂತೆ ಮಹಾನಿರ್ದೇಶಕರು ಕಳೆದ ಜೂನ್ 30ರಂದು ಆದೇಶ ಹೊರಡಿಸಿದ್ದಾರೆ. ಆದರೆ 10 ದಿನ ಕಳೆದರೂ ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳಲಿಕ್ಕಾಗುತ್ತಿಲ್ಲ. ಯಾದಗಿರಿ ಶಾಸಕರು ಹಾಗೂ ಅವರ ಪುತ್ರ ಬೇಡಿಕೆಯನ್ನಿಟ್ಟು ಕರ್ತವ್ಯಕ್ಕೆ ಹಾಜರಾಗದಂತೆ ಅಡ್ಡಿಪಡಿಸಿದ್ದೇ ಇದಕ್ಕೆ ಕಾರಣ ಎನ್ನಲಾಗುತ್ತಿದೆ.

ತಮ್ಮ ಪ್ರತಿಭೆ ಮೂಲಕ ಹಗಲಿರಳು ಓದಿ ಹುದ್ದೆಯನ್ನು ಪಡೆದಿರುವಂತಹ ಪ್ರತಿಭಾನ್ವಿತರಿಗೆ ಇಲಾಖಾ ಸೇವೆಗೆ ಹಾಜರಾಗುವ ಪ್ರಾರಂಭದಲ್ಲೇ ಹಣದಂತಹ ಬೇಡಿಕೆ ಇಟ್ಟರೆ ಮನಸ್ಸಿನ ಎಂತಹ ಪರಿಣಾಮ ಬೀರುತ್ತದೆ ಎಂದು ಊಹಿಸಲಿಕ್ಕಾಗದು. ರಾಜ್ಯ ಸರ್ಕಾರದ ಆಡಳಿತ ವೈಖರಿಗೆ ಇದು ಹಿಡಿದ ಕನ್ನಡಿ ಎನ್ನಬಹುದು. ಆದ್ದರಿಂದ ಈಗಲಾದರೂ ತಾವು ಎಚ್ಚೆತ್ತು ವಿಜಯಕ್ರಾಂತಿ ಅವರು ತಕ್ಷಣವೇ ಯಾದಗಿರಿ ಡಿವೈಎಸ್ಪಿ ಹುದ್ದೆಗೆ ವರದಿ ಮಾಡಿಕೊಳ್ಳದಿದ್ದರೆ, ಅದರಲ್ಲೂ ಸೋಮವಾರದೊಳಗೆ ಕರ್ತವ್ಯಕ್ಕೆ ಹಾಜರಾಗದಿದ್ದರೆ ಪೊಲೀಸ್ ಮಹಾನಿರ್ದೇಶಕರ ಕಚೇರಿ ಎದುರು ಧರಣಿ ಮಾಡುವುದಾಗಿ ಎಚ್ಚರಿಕೆ ನೀಡಿದ್ದಾರೆ. ಅಧಿಕಾರಿಗಳ ಪ್ರಾಣ ಹಿಂಡುವ ಮಟ್ಟಿಗೆ ಭ್ರಷ್ಟಾಚಾರ ವ್ಯಾಪಕಗೊಂಡಿರುವುದು ನಿಜಕ್ಕೂ ಆತಂಕಕಾರಿ ಸಂಗತಿ ಎಂದಿದ್ದಾರೆ.

# ರಾಷ್ಟ್ರೀಯ ಲೋಕ್ ಅದಾಲತ್ ಮೂಲಕ ವಿವಿಧ ಪ್ರಕರಣಗಳ ಸಂಧಾನ : ನ್ಯಾಯಾಧೀಶೆ ಕೆ.ಜಿ ಶಾಂತಿ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.12–ಜಿಲ್ಲೆಯಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ಹಮ್ಮಿಕೊಂಡಿದ್ದು, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆ ಒಳಗೊಂಡು ಒಟ್ಟು 31 ನ್ಯಾಯಾಲಯಗಳಲ್ಲಿ ಶನಿವಾರ ರಾಷ್ಟ್ರೀಯ ಲೋಕ್ ಅದಾಲತ್ ನಡೆದು ಸಾರ್ವಜನಿಕರು, ಪಕ್ಷಕಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಅವಕಾಶವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಕೆ.ಜಿ.ಶಾಂತಿ ಅವರು ಹೇಳಿದರು.

ನಗರದ ತಾಳೂರು ರಸ್ತೆಯ ಹೊಸ ಜಿಲ್ಲಾ ನ್ಯಾಯಾಲಯ ಸಂಕೀರ್ಣದ ವಿಡಿಯೋ ಕಾನ್ಫರೆನ್ಸ್ ಹಾಲ್‌ನಲ್ಲಿ ಶನಿವಾರ ಏರ್ಪಡಿಸಿದ್ಧ ಸುದ್ದಿಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ರಾಜೀಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು ಈ ಲೋಕ್ ಅದಾಲತ್ ಸಹಾಯವಾಗಲಿದೆ. ರಾಜಿ ಸಂಧಾನದಲ್ಲಿ ಪ್ರಕರಣ ಇತ್ಯರ್ಥವಾದರೆ ನ್ಯಾಯಾಲಯಕ್ಕೆ ತುಂಬಿದ ಶುಲ್ಕವನ್ನು ಸಂಪೂರ್ಣ ಮರುಪಾವತಿ ಮಾಡಲಾಗುವುದು ಎಂದು ತಿಳಿಸಿದರು.

ಬಳ್ಳಾರಿ ಜಿಲ್ಲೆಯಲ್ಲಿ ಒಟ್ಟು 69,354 ವಿವಿಧ ಚಾಲ್ತಿ ಪ್ರಕರಣಗಳಿದ್ದು, ಅದರಲ್ಲಿ ಈಗಾಗಲೇ ರಾಜೀ ಆಗಬಹುದಾದ 19784 ಪ್ರಕರಣಗಳನ್ನು ಗುರುತಿಸಿದ್ದು, ಈಗಾಗಲೇ 11931 ಪ್ರಕರಣಗಳು ರಾಜೀಯಾಗಿವೆ ಇದರಲ್ಲಿ ಸಿವಿಲ್ ದಾವೆಗಳು ಅಂದರೆ ಜಮೀನುಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು, ಮನೆ ಹಾಗೂ ನಿವೇಶನಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಮರಳು ಕಳ್ಳ ಸಾಗಾಣಿಕೆ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟರ್ ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ರಾಜೀಗಾಗಿ ಗುರುತಿಸಲಾಗಿದೆ ಎಂದರು.


ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದಾಗುವ ಪ್ರಯೋಜನಗಳ ಬಗ್ಗೆ ತಿಳಿಸಲಾಗುತ್ತದೆ. ಅವರ ಮನ ಒಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು 67 ಜನ ಮಧ್ಯಸ್ಥಿಕೆದಾರರು ಇದ್ದಾರೆ ಎಂದು ತಿಳಿಸಿದರು.

ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಜುಲೈ 13 ರಿಂದ ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ ಅಭಿಯಾನ ಜರುಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನ ಮೂಲಕ ಪರಿಹರಿಸಿಕೊಳ್ಳಬೇಕು. ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲ್ಲೂಕು ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಗೆ ಭೇಟಿ ನೀಡಬಹುದು ಎಂದು ಅವರು ತಿಳಿಸಿದರು.

ಸರ್ವೋಚ್ಚ ನ್ಯಾಯಾಲಯವು ವಿಶೇಷ ಲೋಕ್ ಅದಾಲತ್ ಅನ್ನು ಜುಲೈ 11 ರಿಂದ ಅಕ್ಟೋಬರ್ 07 ರ ವರೆಗೆ ನಡೆಸಲು ಉದ್ದೇಶಿಸಲಾಗಿದ್ದು, ಪಕ್ಷಕಾರರು ಮಧ್ಯಸ್ಥಿಕೆ ಮೂಲಕ ಎದುರುದಾರರ ಲೋಕ್ ಅದಾಲತ್ ಅನ್ನು ನಡೆಸಲು ವಿಡಿಯೋ ಕಾನ್ಸರೆನ್ಸ್ ವ್ಯವಸ್ಥೆ ಮಾಡಲಾಗಿದೆ. ಜಿಲ್ಲೆಗೆ ಸಂಬಂಧಿಸಿದ ವಿವಿಧ ಪ್ರಕರಣಗಳು ಸರ್ವೋಚ್ಚ ನ್ಯಾಯಾಲಯದಲ್ಲಿಯೂ ಇವೆ. ಇವುಗಳನ್ನು ಸಹ ಲೋಕ್ ಅದಾಲತ್‌ನಲ್ಲಿ ರಾಜಿಗೆ ಪರಿಗಣಿಸಲಾಗಿದೆ ಎಂದರು.

ಈ ವೇಳೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಉಪಸ್ಥಿತರಿದ್ದರು.

# ಕಡಿಮೆ ಅವಧಿಯಲ್ಲಿ ಹೆಚ್ಚಿನ ರೈಲುಗಳ ಮಂಜೂರು: ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.12–ದೇಶದಲ್ಲಿ ಮೋದಿ ಸರಕಾರ ಆಡಳಿತಕ್ಕೆ ಬಂದಾಗಿನಿಂದ ರೈಲ್ವೇ ಇಲಾಖೆಯಲ್ಲಿ ಕ್ರಾಂತಿಕಾರ ಅಭಿವೃದ್ಧಿ ನಡೆದಿವೆ. ನಾನು ಅಧಿಕಾರ ವಹಿಸಿಕೊಂಡ ಕಡಿಮೆ ಅವಧಿಯಲ್ಲಿ ರಾಜ್ಯ ಸೇರಿ ಹಲವು ಕಡೆಗಳಲ್ಲಿ ಹೆಚ್ಚಿನ ರೈಲುಗಳನ್ನು ಮಂಜೂರು ಮಾಡಲಾಗಿದೆ ಎಂದು ಕೇಂದ್ರ ರಾಜ್ಯ ರೈಲ್ವೇ ಖಾತೆ ಮಂತ್ರಿ ವಿ.ಸೋಮಣ್ಣ ಅವರು ಹೇಳಿದರು.

ಶುಕ್ರವಾರ, ಬಳ್ಳಾರಿಯ ರೈಲ್ವೇ ಸ್ಟೇಷನ್‌ನ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪಟಿಶೀಲನೆ ನಡೆಸಿ ಬಳಿಕ ಸುದ್ದಿಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ನರೇಂದ್ರ ಮೋದಿ ಅವರ ಕನಸಿನಂತೆ ರೈಲ್ವೆ ಇಲಾಖೆಯಿಂದ ಕ್ರಾಂತಿಕಾರ ಕೆಲಸಗಳು ಆಗುತ್ತಿವೆ. 10 ವಂದೇಭಾರತ ರೈಲು ಓಡಿಸಲಾಗುತ್ತಿದೆ. ಇನ್ನು ಹೆಚ್ಚು ಮಾಡಲಾಗುತ್ತಿದ್ದು, ಸ್ಲೀಪರ್ ವಂದೇಭಾರತ ರೈಲು ಶೀಘ್ರ ಆರಂಭಿಸಲಾಗುತ್ತದೆ. ಯುಪಿಎ ಸರಕಾರದಲ್ಲಿ ನೆನೆಗುದಿಗೆ ಬಿದ್ದ ಎಲ್ಲ ಯೋಜನೆಗಳನ್ನು ಪೂರ್ಣಗೊಳಿಸಲಾಗುತ್ತಿದೆ. ಯುಪಿಎ ಸರಕಾರದಲ್ಲೇ ಕೇವಲ 3300 ಕೆಳ, ಮೇಲ್ಸೆತುವೆಗಳನ್ನು ನಿರ್ಮಾಣ ಮಾಡಿದ್ದರು.

ನಾವು ಅಧಿಕಾರಕ್ಕೆ ಬಂದ ಬಳಿಕ 6600 ಕ್ಕೂ ಹೆಚ್ಚು ಬ್ರಿಜ್ ಕಟ್ಟಿದ್ದೇವೆ. ಇದರಿಂದ ಬಹುತೇಕ ರೈಲ್ವೆ ಸಮಸ್ಯೆಗಳು ಮುಗಿಯುತ್ತಿವೆ. ಇಂದು ಚಿಕ್ಕಮಗಳೂರು ತಿರುಪತಿ ಹೊಸ ರೈಲು ಉದ್ಘಾಟನೆ ಮಾಡಲಾಗಿದೆ. ನಾಲ್ಕೈದು ಹೊಸ ರೈಲುಗಳನ್ನ ರಾಜ್ಯದಲ್ಲಿ ಈಗ ಓಡಿಸಲಾಗುತ್ತಿದೆ ಎಂದು ತಿಳಿಸಿದರು. ಮೋದಿಯವರು ಮೂರನೇ ಬಾರಿಗೆ ಪ್ರಧಾನಿಯಾದ ಬಳಿಕ ಕರ್ನಾಟಕವೂ ಅಭಿವೃದ್ಧಿಯಾಗಬೇಕಿದೆ. ಇದೇ ಕಾರಣಕ್ಕೆ ಹೆಚ್ಚಿನ ಆದ್ಯತೆ ಕೊಡಲಾಗುತ್ತಿದೆ. ಲೆವೆಲ್ ಕ್ರಾಸಿಂಗ್ ಬಗ್ಗೆ ರೈಲ್ವೆ ಇಲಾಖೆಗೆ ದೊಡ್ಡ ತಲೆನೋವಾಗಿತ್ತು.

ಈಗ ಹಂತ–ಹಂತವಾಗಿ ಪರಿಹಾರ ಮಾಡಲಾಗಿದೆ ಎಂದರು.

ಚಿಕ್ಕಜಾಜೂರು–ಬಳ್ಳಾರಿ ರೈಲ್ವೆ ಡಬಲಿಂಗ್ ಕಾಮಗಾರಿ ಹಲವು ದಿನಗಳಿಂದ ನೆನೆಗುದಿಗೆ ಬಿದ್ದಿತ್ತು. ಇದಕ್ಕಾಗಿ ಕೇಂದ್ರ ಸರಕಾರ 3300 ಕೋಟಿ ರೂ. ನೀಡಲಾಗಿದೆ. ಕೆಲಸವೂ ಆರಂಭವಾಗಲಿದೆ. ಅಮೃತ ಸ್ಟೇಷನ್ ಯೋಜನೆಯಡಿ ಹಲವು ಕಡೆಗಳಲ್ಲಿ ರೈಲ್ವೇ ಸ್ಟೇಷನ್‌ಗಳ ಆಧುನೀಕರಣ ಕೈಗೆತ್ತಿಕೊಳ್ಳಲಾಗಿದೆ ಎಂದು ಹೇಳಿದರು. ಎಲ್ಲದಕ್ಕೂ ಕಾಯಕಲ್ಪ: ಬಳ್ಳಾರಿ ಜಿಲ್ಲೆಯ ಸುತ್ತ 40 ಕಿ.ಮೀ. ಎಲ್ಲೂ ಕೂಡ ರೈಲ್ವೆ ಹಳಿ ಕ್ರಾಸ್‌ಗಳು ಇರದಂತೆ ಎಲ್ಲ ಕಡೆಗೂ ಎಲ್‌ಒಬಿ, ಆರ್‌ಒಬಿಗಳನ್ನು ನಿರ್ಮಾಣ ಮಾಡಲು ಯೋಜನೆ ರೂಪಿಸಲಾಗುತ್ತದೆ.

ಶೀಘ್ರವೇ ನಾನು ಈ ಬಗ್ಗೆ ಆದೇಶ ಹೊರಡಿಸಿ ಸರ್ವೆ ಮಾಡಲು ಸೂಚನೆ ನೀಡುತ್ತೇನೆ. ಬಳ್ಳಾರಿಯ ಎಲ್ಲ ಕೆಲಸಗಳಿಗೂ ಆದ್ಯತೆ ನೀಡಲಾಗಿದೆ. ರೈಲ್ವೇ ಆಧುನೀಕರಣ ಕಾಮಗಾರಿ ಭರದಿಂದ ನಡೆದಿದೆ ಎಂದು ಹೇಳಿದರು.

# ದೊಡ್ಮನಿ ನಿಧನ



ಮಲ್ಲಮ್ಮ ನುಡಿ ವಾರ್ತೆ

ಕುಕನೂರು : ತಾಲೂಕಿನ ಬನ್ನಿಕೊಪ್ಪ ಗ್ರಾಮದ ನಿರ್ಮಲ ಧನಂಜಯ ದೊಡ್ಮನಿ ದಿನಾಂಕ 12.07.2025ರ ಶನಿವಾರ ಸಾಯಂಕಾಲ 4:00ಗಂಟೆಗೆ ಸಮಯಕ್ಕೆ ನಿಧನರಾಗಿರುತ್ತಾರೆ.

ಮೃತರ ಅಂತ್ಯಕ್ರಿಯೆಯನ್ನು ಅವರ ಸ್ವಗ್ರಾಮವಾದ ಬನ್ನಿಕೊಪ್ಪ ಗ್ರಾಮದ ರುದ್ರ ಭೂಮಿಯಲ್ಲಿ ದಿನಾಂಕ 13.07.2025 ರ ಭಾನುವಾರ ಬೆಳಿಗ್ಗೆ 11:00 ಗಂಟೆಗೆ ನೆರವೇರಿಸಲಾಗುವುದು ಎಂದು ಕುಟುಂಬಸ್ಥರು ತಿಳಿಸಿರುತ್ತಾರೆ.

# ಮರ ಗಿಡ ಬೆಳೆಸಿ ಪರಿಸರ ಸಂರಕ್ಷಿಸಿ : ಎಸ್.ಎಸ್. ಹಿರೇಮಠ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಪರಿಸರ ಸಮತೋಲನ ಕಾಪಾಡಲು ಪ್ರತಿಯೊಬ್ಬರು ಮರ ಗಿಡ ಬೆಳೆಸಿ ಸಂರಕ್ಷಿಸಬೇಕೆಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಿಣಾಭಿವೃದ್ಧಿ ಸಂಸ್ಥೆಯ ಹೈನುಗಾರಿಕೆ ಜಿಲ್ಲಾ ನಿರ್ದೇಶಕರಾದ ಎಸ್.ಎಸ್. ಹಿರೇಮಠ ತಾಲೂಕಿನ ಹುಣಸಗೇರಾ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಪರಿಸರ ಸಂರಕ್ಷಣೆ ಜನಜಾಗೃತಿ ಹಾಗೂ ಸಸಿ ನೇಡುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ ವಿದ್ಯಾರ್ಥಿಗಳು ಮರಗಿಡ ಬೇಳೆಸುವ ಹವ್ಯಾಸ ಬೆಳೆಸಿಕೊಳ್ಳಲು ತಿಳಿಸಿದರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಿಣಾಭಿವೃದ್ದಿ ಸಂಸ್ಥೆಯ ಬೀದರ್ ಜಿಲ್ಲೆಯಲ್ಲಿ ಹೈನುಗಾರಿಕೆ ಅಭಿವೃದ್ಧಿಗೆ ಹೆಚ್ಚಿನ ಉತ್ತೇಜನ ನೀಡಿದೆ. ಸಂಸ್ಥೆ ಕೃಷಿ ಅಭಿವೃದ್ದೀಗೆ ಹಾಗೂ ಪರಿಸರ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದರು. ಶಾಲಾಮುಖ್ಯಗುರುಗಳಾದ ಉಮಾಶ್ರೀ ಅಧ್ಯಕ್ಷತೆ ವಹಿಸಿದರು, ಶಾಲಾ ಮಕ್ಕಳಿಗೆ ಪೆನ್ನು ನೋಟಬುಕ್ ವಿತರಿಸಲಾಯಿತು. ಶಾಲಾ ಆವರಣದಲ್ಲಿ ಗೀಡ ನೆಡೆಸಲಾಯಿತು. ಕೃಷಿ ಮೇಲ್ವಚಾರಕ ಶಿವಾನಂದ ಪ್ರಾಸ್ಥಾವಿಕ ಮಾತನಾಡಿದರು, ಸಹಾಯಕ ಪ್ರಭಂದಕರಾದ ಶಿವಕಾಂತ ಸ್ವಾಗತಿಸಿ ವಂದಿಸಿದರು.

# ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಇಂಟರ್ನಶಿಪ್‌ಗೆ ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ11–ಕರ್ನಾಟಕ ಮಾಧ್ಯಮ ಅಕಾಡೆಮಿಯು ಮಹಿಳಾ ಆಯವ್ಯಯ ಹಾಗೂ ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಪರಿಶಿಷ್ಟ ಪಂಗಡ ಉಪ ಯೋಜನೆಗಳಡಿ ಪತ್ರಿಕೋದ್ಯಮದಲ್ಲಿ ಆಸಕ್ತಿ ಇರುವ ಸ್ನಾತಕೋತ್ತರ ಪದವೀಧರರಿಗೆ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಇಂಟರ್ನಶಿಪ್‌ಗೆ ಅವಕಾಶ ಕಲ್ಪಿಸಿದೆ. ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದವರಿಗೆ ಆದ್ಯತೆ ನೀಡಲಾಗುವುದು.

ಬರವಣಿಗೆಯಲ್ಲಿ ಪರಿಣತಿ ಹೊಂದಿರುವ, ಪತ್ರಿಕೋದ್ಯಮದಲ್ಲಿ ಆಸಕ್ತಿ ಇರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. 2022–23 ಹಾಗೂ 2023–24ನೇ ಶೈಕ್ಷಣಿಕ ವರ್ಷದಲ್ಲಿ ಯಾವುದೇ ವಿಷಯದಲ್ಲಿ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಸ್ನಾತಕೋತ್ತರ ಪದವಿ ಪಡೆದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಪ್ರವೇಶ ಪರೀಕ್ಷೆಯ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು ಎಂದು ಅಕಾಡೆಮಿ ಅಧ್ಯಕ್ಷೆ ಶ್ರೀಮತಿ ಆಯೇಶಾ ಖಾನಂ ತಿಳಿಸಿದ್ದಾರೆ.

ಮಹಿಳಾ ಆಯವ್ಯಯದಡಿ 10 ಮಹಿಳೆಯರು, ಪರಿಶಿಷ್ಟ ಜಾತಿ ಉಪಯೋಜನೆಯಡಿ 10 ಪರಿಶಿಷ್ಟ ಜಾತಿಯ ಅಭ್ಯರ್ಥಿಗಳು ಹಾಗೂ ಪರಿಶಿಷ್ಟ ಪಂಗಡ ಉಪ ಯೋಜನೆಯಡಿ 4 ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಸೇರಿ ಒಟ್ಟು 24 ಅಭ್ಯರ್ಥಿಗಳಿಗೆ ಇಂಟರ್ನಶಿಪ್‌ಗೆ ಅವಕಾಶ ಒದಗಿಸಲಾಗುತ್ತದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಎರಡು ತಂಡಗಳಲ್ಲಿ ಎರಡು ತಿಂಗಳ ಇಂಟರ್ನಶಿಪ್‌ಗೆ ಅವಕಾಶ ಕಲ್ಪಿಸಲಾಗುವುದು. ಇಂಟರ್ನಶಿಪ್‌ಗೆ ಸಂಸ್ಥೆ ಹಾಗೂ ಸ್ಥಳವನ್ನು ಅಕಾಡೆಮಿಯೇ ನಿಗದಿಪಡಿಸುತ್ತದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಅಕಾಡೆಮಿಯಿಂದ ಮಾಸಿಕ 20,000 ರೂ. ಸ್ಟೈಪೆಂಡ್ ನೀಡಲಾಗುವುದು. ಅಭ್ಯರ್ಥಿಗಳು ತಮ್ಮ ಸ್ವವಿವರ (Curriculum Vitae) ದೊಂದಿಗೆ ನಿಗದಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಪೂರಕ ದಾಖಲೆಗಳೊಂದಿಗೆ ಗೂಗಲ್ ಫಾರ್ಮ್ https://forms.gle/UgNqDcFs-1v6akyAD9 ರಲ್ಲಿ ಅರ್ಜಿ ಸಲ್ಲಿಸುವುದು. ಅಭ್ಯರ್ಥಿಗಳ ಆಯ್ಕೆಯ ಅಂತಿಮ ತೀರ್ಮಾನ ಅಕಾಡೆಮಿಯ ಸಮಿತಿಯದ್ದೇ ಅಗಿರುತ್ತದೆ. ಅರ್ಜಿ ಸಲ್ಲಿಸಲು 2025ರ ಜುಲೈ 25 ಕೊನೆಯ ದಿನವಾಗಿದೆ. ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸುವುದಿಲ್ಲ ಎಂದು ಮಾಧ್ಯಮ ಅಕಾಡೆಮಿಯ ಕಾರ್ಯದರ್ಶಿ ಸಹನಾ ಎಂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾಡಳಿತದಿಂದ ಶಿವಶರಣ ಹಡಪದ ಅಪ್ಪಣ್ಣ ಜಯಂತಿ ಜುಲೈ 15ಕ್ಕೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 11–ಇಲ್ಲಿಯ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜುಲೈ 15ರ ಬೆಳಿಗ್ಗೆ 11 ಗಂಟೆಗೆ ಶಿವಶರಣ ಹಡಪದ ಅಪ್ಪಣ್ಣ ಅವರ ಜಯಂತಿ ಹಮ್ಮಿಕೊಳ್ಳಲಾಗಿದೆ. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪಪಾಟೀಲ್ ಅವರು ಉದ್ಘಾಟಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್. ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ. ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶ್ ಕುಮಾರ ಸಿಂಗ್, ಕಲಬುರಗಿ ವಿಭಾಗದ ಆಯುಕ್ತರಾದ ಕೃಷ್ಣ ಭಾಜಪೇಯಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ಹಡಪದ ಅಪ್ಪಣ್ಣ ಸಮಾಜದ ಜಿಲ್ಲಾಧ್ಯಕ್ಷರಾದ ಗದ್ದೆಪ್ಪ ಎಮ್ ಜಕ್ಕರಮಡು ಅವರು ಶಿವಶರಣ ಹಡಪದ ಅಪ್ಪಣ್ಣ ಜಯಂತಿ ಕುರಿತು ಉಪನ್ಯಾಸ ನೀಡುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ

# ಸಹಿ ವಿತರಣೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 12–ರಾಜ್ಯ ಸರ್ಕಾರದ ಜನಪರ ಮತ್ತು ಮಹತ್ವಾಕಾಂಕ್ಷೆಯ ಪಂಚ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಲಾಗಿದ್ದು, ಈ ಯೋಜನೆಗಳ ಪೈಕಿ ಶಕ್ತಿ ಯೋಜನೆಯಡಿ ಫಲಾನುಭವಿಗಳ ಸಂಖ್ಯೆ 500 ಕೋಟಿ ಟ್ರಿಪ್‌ಗಳ ಗಡಿ ದಾಟ್ಟುವ ಮೂಲಕ ಹೆಣ್ಣು ಮಕ್ಕಳಿಗೆ ಉಚಿತವಾಗಿ ಪ್ರಯಾಣಿಸುವ ಸೌಲಭ್ಯವನ್ನು ಕಲ್ಪಿಸಲಾಗಿದೆ.

ಯೋಜನೆಯನ್ನು ಪ್ರಥಮ ಬಾರಿಗೆ 2023ರ ಜೂನ್ 11ರಂದು ಜಾರಿಗೊಳಿಸಲಾಗಿದೆ. ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳಲ್ಲಿ ಉಚಿತವಾಗಿ ರಾಜ್ಯದ ಎಲ್ಲಾ ಮಹಿಳೆಯರು, ವಿದ್ಯಾರ್ಥಿನಿಯರು ಮತ್ತು ಅಂಗತ್ವಾಲ್ಪಸಂಖ್ಯಾತರು ಸೇರಿದಂತೆ ಉಚಿತವಾಗಿ ಪ್ರಯಾಣಿಸುವ ಸೌಲಭ್ಯವನ್ನು ಒದಗಿಸಿಸಲಾಗಿದೆ.

ಹೆಣ್ಣು ಮಕ್ಕಳು ಸರ್ಕಾರಿ ಸೌಮ್ಯದ ಬಸ್ಗಳಲ್ಲಿ ಉಚಿತವಾಗಿ ಪ್ರಯಾಣಿಸುವ ಹೆಗ್ಗಳಿಕೆಯನ್ನು ಸಾಂಕೇತಿಕವಾಗಿ ಜುಲೈ 14ರ ಸೋಮವಾರ ರಂದು ಸನ್ಮಾನ್ಯ ಮುಖ್ಯ ಮಂತ್ರಿಗಳು ಬಸ್‌ನಲ್ಲಿ ಪ್ರಯಾಣಿಸುವ ಮೂಲಕ ಸಮಿತಿಯ ಸದಸ್ಯರುಗಳು ಈ ಸುಸಂದರ್ಭದವನ್ನು ಕಲಬುರಗಿ ವಲಯದ ಎಲ್ಲಾ ಜಿಲ್ಲೆಗಳಲ್ಲಿ ಪೂಜೆಯನ್ನು ಸಲ್ಲಿಸಿ, ಪ್ರಯಾಣಿಕರಿಗೆ ಸಹಿ ವಿತರಿಸುವ ಮೂಲಕ ಆರ್ಥಪೂರ್ಣವಾಗಿ ಆಚರಿಸಲಾಗುತ್ತಿದ್ದು, ರಾಯಚೂರು ವಿಭಾಗದ ವ್ಯಾಪ್ತಿಯಲ್ಲಿ ಬರುವ ರಾಯಚೂರು, ಲಿಂಗಸುಗೂರು, ಸಿಂಧನೂರು, ಮಾನವಿ, ದೇವದುರ್ಗ, ಮಸ್ಕಿ, ಅರಕೇರಾ, ಸಿರವಾರ ಬಸ್ ನಿಲ್ದಾಣಗಳಲ್ಲಿ ಅಂದು ಬೆಳಿಗ್ಗೆ 11:30 ಗಂಟೆಗೆ ಈ ಸಮಾರಂಭದ ಪೂಜೆಯನ್ನು ಆಯೋಜಿಸಲಾಗಿದೆ.

ಈ ಸಮಾರಂಭದಲ್ಲಿ ಕೇಂದ್ರ ಬಸ್ ನಿಲ್ದಾಣ ರಾಯಚೂರುನಲ್ಲಿ ಗ್ಯಾರಂಟಿ ಯೋಜನೆಗಳ ಮಾನ್ಯ ಜಿಲ್ಲಾಧ್ಯಕ್ಷರು, ಜಿಲ್ಲಾ ಉಪಾಧ್ಯಕ್ಷರು. ಸದಸ್ಯರು ಮತ್ತು ತಾಲೂಕು ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಭಾಗವಹಿಸಲಿದ್ದು, ಹಾಗೂ ತಾಲೂಕುವಾರು ಬಸ್ ನಿಲ್ದಾಣದಲ್ಲಿ ಗ್ಯಾರಂಟಿ ಯೋಜನೆಗಳ ತಾಲೂಕ ಅಧ್ಯಕ್ಷರು, ಉಪಾಧ್ಯಕ್ಷರು. ಸದಸ್ಯರುಗಳು ಭಾಗವಹಿಸಲಿದ್ದಾರೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ರಾಯಚೂರು ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ಚಂದ್ರಶೇಖರ ಎಲ್.ಎಮ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆಇಬಿ ರುದ್ರಪ್ಪಗೆ "ಕಾಯಕ ರತ್ನ" ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ.ಜು.12:ನಗರದ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಇಂದು ಕೆಇಬಿ ಪಿಂಚಣಿದಾರರ ಸಂಘದಿಂದ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ನವೃತ್ತ ಅಧಿಕಾರಿ ಮತ್ತು ಕಾರ್ಮಿಕ ಮುಖಂಡ ಜಿ. ರುದ್ರಪ್ಪ ಅವರಿಗೆ "ಕಾಯಕ ರತ್ನ" ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಕರ್ನಾಟಕ ಇತಿಹಾಸ ಅಕಾಡೆಮಿಯ ಜಿಲ್ಲಾಧ್ಯಕ್ಷ ಟಿ. ಹೆಚ್. ಎಂ. ಬಸವರಾಜ್ ಅವರು ಪ್ರಶಸ್ತಿ ನೀಡಿ ಗೌರವಿಸಿ, 80ನೇ ವರ್ಷದಲ್ಲಿಯೂ 40 ವರ್ಷದ ಹುಡುಗರಂತೆ ಸಮಾಜ, ಕಾರ್ಮಿಕರ ಸೇವೆ, ಪ್ರತಿಯೊಂದು ಸಭೆಯಲ್ಲಿ ದೇವರ ನಾಮಗಳನ್ನು ಹಾಡುತ್ತಾ ತುಂಬಾ ಲವಲವಿಕೆಯಿಂದ ಯಾವ ವಾಹನವೂ ಇಲ್ಲದೆ ಬಸ್‌ಗಳಲ್ಲಿಯೇ ಪ್ರಯಾಣಿಸುತ್ತ ಯುಕರಂತೆ ಇದ್ದಾರೆ. ಎಲ್ಲರ ಪ್ರೀತಿಯನ್ನು ಗಳಿಸಿದ ರುದ್ರಪ್ಪನವರು ನೇರ

ಜಾಹೀರಾತಿಗಾಗಿ ಇಂದೇ
ಸಂಪರ್ಕಿಸಿ: 9449732000

# ಕುಟುಂಬದ ಸಂತೋಷಕ್ಕಾಗಿ ದುಶ್ಚಟಗಳಿಂದ ದೂರವಿರಿ–ಪ್ರಿಯದರ್ಶಿನಿ ಮುಂಡರಮಠ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳದ ಭಾಗ್ಯನಗರದ ಅರುಣೋದಯ ಸಂಸ್ಥೆಯ ನಶಾಮುಕ್ತ ಕೇಂದ್ರದಲ್ಲಿ ಮಹಿಳಾ ಧ್ವನಿ ಸಂಸ್ಥೆಯ ಸಂಸ್ಥಾಪಕರಾದ ಪ್ರಿಯದರ್ಶಿನಿ ಮುಂಡರಗಿಮಠ ಅವರ ಹುಟ್ಟು ಹಬ್ಬದ ಪ್ರಯುಕ್ತವಾಗಿ ಮನಪರಿವರ್ತನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು ಸಸಿಗೆ ನೀರಾಜುವ ಮೂಲಕ ಉದ್ಘಾಟಿಸಲಾಯಿತು.

ಮುಖ್ಯ ಅತಿಥಿಗಳಾದ ದ್ಯಾಮಣ್ಣ ಕರಿಗಾರ ಮಾತನಾಡಿ ಮಹಿಳಾ ಧ್ವನಿ ಸಂಸ್ಥೆಯು ಜಿಲ್ಲೆಯಾದ್ಯಂತ ಮಹಿಳಾ ಸಬಲೀಕರಣ ಮತ್ತು ಸಾಮಾಜಿಕ ಕಳಕಳಿಯ ಕಾರ್ಯಕ್ರಮದ ಮೂಲಕ ಗಮನ ಸೆಳೆದಿದ್ದು, ಸಂಸ್ಥಾಪಕರ ಹುಟ್ಟು ಹಬ್ಬದ ನಿಮಿತ್ತವಾಗಿ ಮನಪರಿವರ್ತನಾ ಕಾರ್ಯಕ್ರಮ ಹಮ್ಮಿಕೊಂಡಿದ್ದು ಶ್ಲಾಘನೀಯ. ಹುಟ್ಟು ಹಬ್ಬದ ನೆಪದಲ್ಲಿ ದುಂದುವೆಚ್ಚ ಮಾಡುವವರಿಗೆ ಇದು ಮಾದರಿ ಕಾರ್ಯ. ತಮ್ಮ ಜೀವನದಲ್ಲಿ ನೆಮ್ಮದಿ ನೆಲೆಸಬೇಕೆಂದರು ಚಟಗಳಿಂದ ವಿಮುಕ್ತಿ ಪಡೆದು ಮಕ್ಕಳ ಶೈಕ್ಷಣಿಕ ಬೆಳವಣಿಗೆ ಶ್ರಮಿಸಿ ತಪ್ಪು ಮಾಡುವುದು ಸಹಜ ತಿದ್ದಿಕೊಂಡು ಬದುಕುವುದು ಮನುಷ್ಯ ಧರ್ಮದ ಗುಣ ಹಾಗಾಗಿ ಸಮಾಜದಲ್ಲಿ ನೀವೆಲ್ಲಾ ಬದಲಾಗಿ ಬದುಕಿ ಹೊಸ ಜೀವನ ರೂಪಿಸಿಕೊಳ್ಳಿ ಎಂದರು.

ಪ್ರಿಯದರ್ಶಿನಿ ಮುಂಡರಗಿಮಠ ಮಾತನಾಡಿ, ಕುಟುಂಬದಲ್ಲಿ ಸುಖ ಶಾಂತಿ ನೆಲೆಸಬೇಕಾದರೆ ನೀವು ಸಂಪ್ರದಾಯ ಬದ್ದ ಬದುಕನ್ನು ರೂಪಿಸಿಕೊಳ್ಳಬೇಕು. ನೀವು ಮಾಡುವ ಸಣ್ಣ ತಪ್ಪಿನಿಂದ ಕುಟುಂಬವದಲ್ಲಿ ಅಶಾಂತಿ, ಮನಸ್ತಾಪ ಉಂಟಾಗಿ ಕುಟುಂಬದಲ್ಲಿ ಬಿರುಕುಗಳು ಮೂಡುತ್ತವೆ ಹಾಗಾಗಿ ಆಕಸ್ಮಿಕ ನಡೆದ ತಪ್ಪು ತಿದ್ದಿಕೊಂಡು ಹೊಸ ಬದುಕು ರೂಪಿಸಿಕೊಳ್ಳಿ ಕುಟುಂಬದ ಸಂತೋಷಕ್ಕಾಗಿ ದುಶ್ಚಟಗಳಿಂದ ದೂರವಿರಿ ಎಂದರು.

ಇದೇ ವೇಳೆ ನಶಾಮುಕ್ತಿ ಕೇಂದ್ರದ ಶಿಬಿರಾರ್ಥಿಗಳಿ ರುದ್ರಾಕ್ಷಿ ಧಾರಣೆ ಮಾಡುವ ಮೂಲಕ ಕಾಯಕ ತತ್ವ ಮತ್ತು ಸುಸಂಸ್ಕೃತ ಬದುಕಿನ ಅರಿವು ಮೂಡಿಸಲಾಯಿತು. ಹುಟ್ಟುಹಬ್ಬದ ನೆನಪಿಗಾಗಿ ಸಸಿ ಹಚ್ಚಲಾಯಿತು. ಬಿ.ಎನ್.ಹೊರಪೇಟೆ, ಪ್ರತಿಮಾ ಯಲಿಗಾರ, ಪಕ್ಕಿರೇಶ ಹಮ್ಮಿಗಿ, ಫಾತಿಮಾ, ರಾಜಕುಮಾರ ಹಾಗೂ ಶಿಬಿರಾರ್ಥಿಗಳು ಉಪಸ್ಥಿತಿ ಇದ್ದರು.

# ಕನ್ನಡ ಕಾವ್ಯ ಆನಂದದ ಅನುಭೂತಿ: ಡಾ.ಗೊಳಸಂಗಿ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.12–ಕನ್ನಡ ಕಾವ್ಯಕ್ಕೆ ಎರಡು ಸಾವಿರ ವರ್ಷಗಳ ಇತಿಹಾಸವಿದೆ.ನವೋದಯಕವಿಗಳಗೆ ರಮ್ಯಾವಾದ,ಮಾರ್ಕ್ಸ್‌ವಾದದಂತಹ ರೋಮ್ಯಾಂಟಿಕ್ ಕವಿಗಳ ಕಾವ್ಯ ಸ್ಫೂರ್ತಿಯಾಗಿದೆ. ಕನ್ನಡ ಕಾವ್ಯ ಆನಂದದ ಅನುಭೂತಿ ಎಂದು ಹುನ್ನೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಚಾರ್ಯ ಡಾ.ಕೆ.ಡಿ.ಗೊಳಸಂಗಿ ಹೇಳಿದರು.

ಜಮಖಂಡಿಯ ಬಾಗಲಕೋಟೆ ವಿಶ್ವವಿದ್ಯಾಲಯದ ಅಡಿಯಲ್ಲಿರುವ ಬಿಎಲ್‌ಡಿಇ ಶಿಕ್ಷಣ ಸಂಸ್ಥೆಯಲ್ಲಿ ಕನ್ನಡ ಮೌಲ್ಯಮಾಪನ ಕೇಂದ್ರದಲ್ಲಿ ಕನ್ನಡ ಅಧ್ಯಾಪಕರ ಬಳಗದ ವತಿಯಿಂದ ಶುಕ್ರವಾರ ನಡೆದ ಕವಿಗೋಷ್ಠಿ ಮತ್ತು ಕನ್ನಡ ಕಾವ್ಯದ ಸಮಕಾಲೀನ ಸಂದರ್ಭ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ಅಧುನಿಕ ಕನ್ನಡ ಕಾವ್ಯ ಇತ್ತೀಚಿನ ಸಂದರ್ಭದಲ್ಲಿ ಸಾಮಾಜಿಕ ತಲ್ಲಣಗಳಿಗೆ ಕನ್ನಡಿಯಾಗಿದೆ. ಸ್ತ್ರೀವಾದ ವಿಶೇಷ ಸಾಧನೆ ಮಾಡುತ್ತಿರುವುದು ಸ್ತುತ್ಯಾರ್ಹ. ಇವತ್ತಿನ ಕವಿಗಳು ಬೌದ್ಧಿಕ ಚಿಂತನೆಗಳ ಛಾಯೆಯಾಗಿ ಕಾವ್ಯ ರಚಿಸಿದ್ದಾರೆ. ಈ ಕಾವ್ಯ ರಸದ ಭಾವವಾಗಿ ಆನಂದದ ಅನುಭೂತಿಯಾಗಿದೆ ಎಂದು ಡಾ.ಗೊಳಸಂಗಿ ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ರಾಜ್ಯ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸಶಕ್ತ ಭಾಷಾ ನೀತಿ ತಜ್ಞರ ಸಮೀತಿ ಸದಸ್ಯ ಡಾ.ಸಣ್ಣವೀರಣ್ಣ ದೊಡ್ಡಮನಿ ಮಾತನಾಡಿ, ಸಾಹಿತ್ಯ ಅಧ್ಯಯನವು ಮಾನವೀಯ ಮೌಲ್ಯವನ್ನು ಹೆಚ್ಚಿಸುತ್ತದೆ. ಕನ್ನಡ ಅಧ್ಯಾಪಕರಿಗೆ ಕರ್ತವ್ಯ ಪ್ರಜ್ಞೆ ಮತ್ತು ವಾಸ್ತವ ಪ್ರಜ್ಞೆ ಅಗತ್ಯವಾದುದು. ಇವತ್ತು ಕಾವ್ಯ ವಾಚನ ಮಾಡಿದ ಕವಿಗಳು ತಂದೆ ತಾಯಿ ವಾತ್ಸಲ್ಯದೊಂದಿಗೆ ಪ್ರೀತಿ ಮತ್ತು ಸಖ್ಯದ ನಿಲುವುಗಳನ್ನು ಚೆನ್ನಾಗಿ ಪ್ರತಿಪಾದಿಸಿದ್ದಾರೆ ಎಂದರು.

ಡಾ.ತಿಪ್ಪೇಸ್ವಾಮಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರೊ.ಎಸ್.ಎಸ್. ಹಡಪದ ಪರಿಚಯಿಸಿದರು. ಪ್ರೊ ಮಲ್ಲಿಕಾರ್ಜುನ ಪ್ರಾರ್ಥಿಸಿದರು. ಡಾ.ಸದಾಶಿವ ದೊಡಮನಿ ನಿರೂಪಿಸಿದರು. ಡಾ.ಧರ್ಮಣ್ಣ ಕಾಂಬಳೆ ವಂದಿಸಿದರು.

ಕವಿಗೋಷ್ಠಿಯಲ್ಲಿ ಡಾ.ಲಿಂಗಪ್ಪ ಗಗ್ಗರಿ, ಡಾ.ಸದಾಶಿವ ದೊಡಮನಿ, ಡಾ.ಮಹದೇವ ಪೋತರಾಜ, ಪ್ರೊ.ಅನುಪಮ ಕುಮಟಗಿ, ಡಾ.ಸಣ್ಣವೀರಣ್ಣ ದೊಡ್ಡಮನಿ, ಡಾ.ಸತ್ಯನಾಯಕ ಕಾವ್ಯ ವಾಚನ ಮಾಡಿದರು. ಜಾನಪದ ಕಲಾವಿದ ಪ್ರೊ.ಶ್ರೀಕಾಂತ ಕೆಂಧೂಳಿ ಜಾನಪದ ಗೀತೆಗಳನ್ನು ಪ್ರಸ್ತುತಪಡಿಸಿದರು.

# ಜನಸಂಖ್ಯೆ ಹೆಚ್ಚಳ–ಹಲವು ಸಮಸ್ಯೆಗಳಿಗೆ ಸವಾಲು




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.12–ಜನಸಂಖ್ಯೆ ಹೆಚ್ಚಳ ಹಲವು ಸಮಸ್ಯೆಗಳಿಗೆ ಸವಾಲು ಆಗುತ್ತಿದ್ದು, ಜನಸಂಖ್ಯೆ ನಿಯಂತ್ರಣ ವಿಷಯದಲ್ಲಿ ಸಮಾಜಕ್ಕೆ ಅರಿವು ಮೂಡಿಸುವ ಜವಾಬ್ದಾರಿ ಯುವಕರ ಮೇಲಿದೆ ಎಂದು ಜಿಲ್ಲಾ ಸಂಖ್ಯಾ ಸಂಗ್ರಹಣಾ ಇಲಾಖೆಯ ಉಪನಿರ್ದೇಶಕಿ ಗೌರಮ್ಮ ಸುಂಕದ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಐಕ್ಯೂಎಸಿ ಮತ್ತು ಅರ್ಥಶಾಸ್ತ್ರ ವಿಭಾಗ ಶುಕ್ರವಾರ ಆಯೋಜಿಸಿದ್ದ ವಿಶ್ವ ಜನಸಂಖ್ಯಾ ದಿನದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜನಸಂಖ್ಯೆ ಹೆಚ್ಚಳವು ಹಲವು ಸಮಸ್ಯೆ ಮತ್ತು ಸವಾಲುಗಳಿಗೆ ದಾರಿ ಮಾಡಿಕೊಡುತ್ತದೆ. ಅವುಗಳ ಬಗ್ಗೆ ಜಾಗೃತಿ ವಹಿಸಿ ಸಮಾಜದಲ್ಲಿ ಅರಿವು ಮೂಡಿಸುವ ಕಾರ್ಯವನ್ನು ಯುವಕರು ಮಾಡಬೇಕು. ಪರಿಸರ, ವಸತಿ, ಆರೋಗ್ಯ, ಶಿಕ್ಷಣ, ಉದ್ಯೋಗ ಮುಂತಾದವುಗಳ ಮೇಲೆ ಇದು ಪರಿಣಾಮ ಬೀರುವದರಿಂದ ಇದರ ನಿಯಂತ್ರಣ ಎಲ್ಲರ ಜವಾಬ್ದಾರಿಯಾಗಿದೆ ಎಂದರು.

ಜನಸಂಖ್ಯೆ ಹೆಚ್ಚಳದಿಂದಾಗುವ ಸವಾಲಗಳನ್ನು ಎದುರಿಸಿ ಸುಸ್ಥಿರ ಅಭಿವೃದ್ಧಿಯನ್ನು ಉತ್ತೇಜಿಸಬೇಕಾಗಿದೆ ಎಂದು ಹೇಳಿದ ಗೌರಮ್ಮ ಸುಂಕದ, ಸರಕಾರದ ವಿವಿಧ ಇಲಾಖೆಗಳು ಕೈಕೊಳ್ಳುವ ಯೋಜನೆ ಮತ್ತು ಅವುಗಳ ಅನುಷ್ಠಾನದಲ್ಲಿ ಜನತೆ ಕೈಜೋಡಿಸಿ ಆರ್ಥಿಕ ಬೆಳವಣಿಗೆಗೆ ಸಹಕರಿಸಬೇಕು ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಶ್ರೀನಿವಾಸ ನರಗುಂದ, ಎಲ್ಲ ಸಮಸ್ಯೆಗಳ ಮೂಲ ಈ ಜನಸಂಖ್ಯೆಯಾಗಿದ್ದು, ಜನರ ಆರೋಗ್ಯ, ಶಿಕ್ಷಣ, ಆರ್ಥಿಕ ಬೆಳವಣಿಗೆಗಳನ್ನು ಗಮನದಲ್ಲಿಟ್ಟುಕೊಂಡು ಇದನ್ನು ನಿಯಂತ್ರಿಸುವುದು ಎಲ್ಲರ ಕರ್ತವ್ಯವಾಗಿದೆ ಎಂದು ಹೇಳಿದರು.

ಉಪನ್ಯಾಸಕಿ ಕೀರ್ತಿ ದಾಸರ ಪ್ರಾರ್ಥಿಸಿದರು. ಎಸ್.ಪಿ.ದೇಶಪಾಂಡೆ ಸ್ವಾಗತಿಸಿದರು. ಎ.ಎ.ಗಂಗಲ್ ನಿರೂಪಿಸಿದರು. ಎನ್.ಎಚ್. ಹವಾಲ್ದಾರ ವಂದಿಸಿದರು. ಸಂಯೋಜಕ ಡಾ.ಎಸ್.ಎಸ್. ಹಂಗರಗಿ ಇದ್ದರು.

ಸರಕಾರದ ಮುಖ್ಯ ಕಾರ್ಯದರ್ಶಿ ಜೊತೆ ಚರ್ಚೆ

# ನಿವೇಶನ ಹಂಚಿಕೆ ನಿಯಮಾವಳಿ ತಿದ್ದುಪಡಿಗೆ ಶಾಸಕ ಮೇಟಿ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.12–ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆ ನಿಯಮಾವಳಿಗೆ ತಿದ್ದುಪಡಿ ಮಾಡಿ ಸಂತ್ರಸ್ಥರಿಗೆ ಅನುಕೂಲ ಕಲ್ಪಿಸುವಂತೆ ಬಿಟಿಡಿಎ ಅಧ್ಯಕ್ಷರೂ ಅಗಿರುವ ಶಾಸಕ ಎಚ್.ವಾಯ್.ಮೇಟಿ ರಾಜ್ಯ ಸರಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ ಅವರಿಗೆ ಮನವಿ ಮಾಡಿದ್ದಾರೆ.

ಶುಕ್ರವಾರ ಬೆಂಗಳೂರಿನಲ್ಲಿ ಶಾಲಿನಿ ರಜನೀಶ್ ಅವರನ್ನು ಭೇಟಿ ಮಾಡಿ ಈ ಸಂಬಂಧ ಚರ್ಚೆ ನಡೆಸಿದ ಶಾಸಕ ಮೇಟಿ, ಬಿಟಿಡಿಎ ನಿವೇಶನ ಹಂಚಿಕೆಯ ಈಗಿರುವ ಗುತ್ತಿಗೆ ಮತ್ತು ಕ್ರಯಪತ್ರ ಬದಲಾಗಿ ಷರತ್ತುಬದ್ಧ ಕ್ರಯಪತ್ರ ಎಂದು ತಿದ್ದುಪಡಿ ಮಾಡುವಂತೆ ಮನವಿ ಸಲ್ಲಿಸಿದರು.

ಈಗ ಗುತ್ತಿಗೆ ಹಾಗೂ ಕ್ರಯಪತ್ರ ಆಧಾರದಲ್ಲಿ ನಿವೇಶನ ಹಂಚಿಕೆ ಮಾಡಲಾಗುತ್ತಿದ್ದು ಇದರಿಂದ ರಾಜ್ಯ ಸರಕಾರದ ಕಾವೇರಿ 2.0 ತಂತ್ರಾಂಶದಲ್ಲಿ ನೋಂದಣಿ ಮಾಡಿದಲ್ಲಿ ಉತಾರೆಯಲ್ಲಿ ನಿವೇಶನ ಮಾಲಿಕರು ಮುಖ್ಯ ಇಂಜನೀಯರ ಬಿಟಿಡಿಎ ಎಂದು ದಾಖಲಾಗುತ್ತದೆ. ಅನುಭೋಗದಾರ ಕಾಲಂನಲ್ಲಿ ಸಂತ್ರಸ್ಥರ ಹೆಸರು ನಮೂದಾಗುತ್ತದೆ ಎಂದು ಮೇಟಿ ವಿವರಿಸಿದರು.

ಈ ವಿಷಯದ ಸಂಬಂಧ ಹಿರಿಯ ಉಪ ನೋಂದಣಿ ಅಧಿಕಾರಿಗಳ ಜೊತೆ ಚರ್ಚಿಸಲಾಗಿ ಕೆಐಡಿಬಿ ಮಾದರಿಯಲ್ಲಿ ಷರತ್ತುಬದ್ಧ ಕ್ರಯಪತ್ರ ಎಂದು ಮಾರ್ಪಾಡು ಮಾಡಿದಲ್ಲಿ ಮಾಲಿಕರ ಹೆಸರಿನ ಕಾಲಂನಲ್ಲಿ ಸಂತ್ರಸ್ಥರ ಹೆಸರು ದಾಖಲಾಗುತ್ತದೆ. ಋಣಗಳ ಕಾಲಂನಲ್ಲಿ ಬಿಟಿಡಿಎ ಷರತ್ತುಗಳನ್ನು ನಮೂದಿಸಬಹುದಾಗಿದೆ. ಹೀಗಾಗಿ ನಿಮಯಾವಳಿ ಬದಲಿಸಿದರೆ ಸಂತ್ರಸ್ಥರಿಗೆ ಅನುಕೂಲವಾಗುತ್ತದೆ ಎಂದು ಶಾಸಕರು ಮುಖ್ಯ ಕಾರ್ಯದರ್ಶಿಗಳಿಗೆ ತಿಳಿಸಿದ್ದಾರೆ.

ಈ ಖಾತಾ ಉತಾರ ನೀಡಲು ಸಹ ನಿಯಮಾವಳಿಯಿಂದ ತೆ–ೂಂದರೆಯಾಗುತ್ತಿದ್ದು, ಹೊಸ ಅವಕಾಶ ನೀಡಿದರೆ ಬಿಟಿಡಿಎ ಆಸ್ತಿಗಳಿಗೆ ಇ–ಆಸ್ತಿ ಸೃಜಿಸಲು ಅನುಕೂಲವಾಗುತ್ತದೆ. ಕಾರಣ ಕೂಡಲೇ ಈ ಸಮಸ್ಯೆಯನ್ನು ವಿಶೇಷ ಪ್ರಕರಣ ಎಂದು ಪರಿಗಣಿಸಿ ತಿದ್ದುಪಡಿ ಮಾಡಿ ಅವಕಾಶ ಮಾಡಿಕೊಡುವಂತೆ ಎಚ್.ವಾಯ್.ಮೇಟಿ ಶಾಲಿನಿ ರಜನೀಶ್ ಅವರಿಗೆ ಮನವಿ ಮಾಡಿಕೊಂಡಿದ್ದಾರೆ. ಕಾಂಗ್ರೆಸ್ ಮುಖಂಡ ಹೊಳಬಸು ಶೆಟ್ಟರ ಶಾಸಕರ ಜೊತೆಗಿದ್ದರು.

# ಮರ್ಚಂಟ್ಸ್ ಸಂಘಟನೆಯ ಉದ್ಘಾಟನೆ ಇಂದು




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.12–ಬಾಗಲಕೋಟೆ ಯೂನಿಯನ್ ಆಫ್ ಮರ್ಚಂಟ್ಸ್ ಆಂಡ್ ಎಂಟರ್‌ಪ್ರೈನರ್ಸ್ ಅಸೋಸಿಯೇಶನ್‌ದ ಉದ್ಘಾಟನಾ ಸಮಾರಂಭ ಜು.13 ರವಿವಾರ ಬೆಳ್ಳಿಗ್ಗೆ 10 ಗಂಟೆಗೆ ನಗರದ ಚರಂತಿಮಠ ಶಿವಾನುಭವ ಮಂಟಪದಲ್ಲಿ ನಡೆಯಲಿದೆ ಎಂದು ಅಧ್ಯಕ್ಷರಾದ ರವಿ ಕುಮಟಗಿ ಹೇಳಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಚರಂತಿಮಠದ ಮನಿಪ್ರಪ್ರಭು ಸ್ವಾಮಿಗಳು ಹಾಗೂ ಪ್ರಭಾಕರ ದಾದಾ ಭೋದಲೆ ಮಹಾರಾಜರು ವಹಿಸಲಿದ್ದಾರೆ. ವಿಆರ್‌ಎಲ್ ಅಧ್ಯಕ್ಷ ವಿಜಯ್ ಸಂಕೇಶ್ವರ್ ಉದ್ಘಾಟಿಸಲಿದ್ದಾರೆ ಎಂದರು.

ವಿಶೇಷ ಅತಿಥಿಗಳಾಗಿ ವಿಜಯ್ ನಿರಾಣಿ, ಶಾಸಕ ಎಚ್.ವಾಯ್. ಮೇಟಿ, ಮುಖ್ಯ ಅತಿಥಿಗಳಾಗಿ ಸಂಸದ ಪಿ.ಸಿ. ಗದ್ದಿಗೌಡರ, ನಾರಾಯಣಸಾ ಭಾಂಡಗೆ, ವಿ.ಪ.ಸದಸ್ಯ ಪಿ.ಎಚ್.ಪೂಜಾರ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಬಸವೇಶ್ವರ ಸಹಕಾರಿ ಬ್ಯಾಂಕ್‌ನ ಅಧ್ಯಕ್ಷರಾದ ಪ್ರಕಾಶ ತಪಶೆಟ್ಟಿ, ಹೊಳೆ ಹುಚ್ಚೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಹೊಳೆಬಸು ಶೆಟ್ಟರ, ಜಿಲ್ಲಾಧಿಕಾರಿ ಸಂಗಪ್ಪ ಎಂ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ್ ರೆಡ್ಡಿ, ಬಿಟಿಡಿಎ ಮುಖ್ಯ ಅಭಿಯಂತರ ಬಸವರಾಜ್ ಡಿ., ನಗರಸಭಾ ಆಯುಕ್ತ ವಾಸನ್ ಆರ್., ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಎಸ್.ಬಿ.ಸೌಂಶಿಮಠ ಆಗಮಿಸಲಿದ್ದಾರೆ ಎಂದು ಹೇಳಿದರು.

ಸಂಘದ ಪ್ರಧಾನ ಕಾರ್ಯದರ್ಶಿ ವಿರೂಪಾಕ್ಷ ಅಮೃತಕರ ಮಾತನಾಡಿ, ನಗರದಲ್ಲಿ ವ್ಯಾಪಾರದ ಗತವೈಭವವನ್ನು ತರಲು ಪ್ರಯತ್ನಿಸಲಾಗುವುದು. ಕೈಗಾರಿಕೆ, ವ್ಯಾಪಾರ, ಪ್ರವಾಸೋದ್ಯಮ ಬೆಳವಣಿಗೆ ಆಗಲಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ರಾಮಕಿಶನ ಮುಂದಡಾ, ಶ್ರೀನಿವಾಸ ಬಳ್ಳಾರಿ, ಬಾಳಪ್ಪ ಉಳ್ಳಾಗಡ್ಡಿ, ನಾಗರಾಜ ಕುಪ್ಪಸ್ತ, ಮಕರಾಜ ಬೇತಾಳ, ಶಂಕರ ತಪಶೆಟ್ಟಿ ಇದ್ದರು.

# ಬಾಗಲಕೋಟೆ: ಇಂದು ಇ–ಖಾತಾ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.12–ಜಿಲ್ಲೆಯಾದ್ಯಂತ ನಗರ, ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಜುಲೈ 13 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆವರೆಗೆ ಇ–ಖಾತಾ (ಕಂಪ್ಯೂಟರ ಉತಾರ) ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ.

ಈ ಅಭಿಯಾನದಲ್ಲಿ ಎ–ಖಾತಾ ಅಧಿಕೃತ ಸ್ವತ್ತುಗಳಾದ ನೋಂದಣಿ ಪ್ರಮಾಣ ಪತ್ರ, ತಕ್ಷಣ ಪ್ರಾಧಿಕಾರದಿಂದ ಅನುಮೋದನೆಯಾದ ದೃಡೀಕೃತ ಪ್ರತಿ ಮತ್ತು ನಿವೇಶನ ಬಿಡುಗಡೆ ಪತ್ರ, ಬಾಕಿ ಸಾಲಿನಿಂದ ಚಾಲ್ತಿ ಸಾಲಿನವರೆಗೆ ತೆರಿಗೆ ಭರಣಾ ಮಾಡಿದ್ದರ ಪಾವತಿ ಮತ್ತು ನೀರಿನ ಶುಲ್ಕ ಪಾವತಿ, ಮಾಲೀಕರ ಪೋಟೋ ಮತ್ತು ಸ್ವತ್ತಿನ ಭಾವಚಿತ್ರ, ಗುರುತಿನ ಚೀಟಿ ನೀಡಲಾಗುತ್ತಿದೆ.

ಬಿ–ಖಾತಾ ಅನಧಿಕೃತ ಸ್ವತ್ತುಗಳಾದ ನೋಂದಣಿ ಪ್ರಮಾಣ ಪತ್ರ, ಬಾಕಿ ಸಾಲಿನಿಂದ ಚಾಲ್ತಿ ಸಾಲಿನವರೆಗೆ ತೆರಿಗೆ ಭರಣ ಮಾಡಿದರೆ ಪಾವತಿ ಮತ್ತು ನೀರಿನ ಶುಲ್ಕ ಪಾವತಿ, ಮಾಲೀಕರಣ ಪೋಟೋ ಮತ್ತು ಸ್ವತ್ತಿನ ಭಾವಚಿತ್ರ ಹಾಗೂ ಗುರುಚಿನ ಚೀಟಿ ನೀಡಲಾಗುತ್ತದೆ.

ಬಾಗಲಕೋಟೆ ನಗರಸಭೆಯಿಂದ ವಿದ್ಯಾಗಿರಿ ಕಾಲೇಜ ಸರ್ಕಲ್ ಹತ್ತಿರ, ರಬಕವಿ–ಬನಹಟ್ಟಿ ನಗರಸಭೆಯಿಂದ ಬನಹಟ್ಟಿ ಈಶ್ವರಲಿಂಗ ಮೈದಾನ, ರಾಮಪೂರ ನೀಲಕಂಠೇಶ್ವರ ಮಠ, ಜಮಖಂಡಿ ನಗರಸಭೆಯಿಂದ ಕುಂಚನೂರು ರೋಡ, ಅಂಬೇಡ್ಕರ ಭವನ, ಮುಧೋಳ ನಗರಸಭೆಯಿಂದ ಉಪ್ಪಾರ ಸಮುದಾಯ ಭವನ ಜನತಾ ಪ್ಲಾಟ್, ಇಳಕಲ್ಲ ನಗರಸಭೆಯಿಂದ ಕೆಇಬಿ ರಸ್ತೆ ಮಾರ್ಖಂಡೇಶ್ವರ ಭವನ, ಟೀಚರ್ಸ ಕಾಲೋನಿ, ಗುಬ್ಬಿಪೇಟೆ ಕಂಠಿ ಸರ್ಕಲ್ ಹತ್ತಿರ, ಬಾದಾಮಿ ಪುರಸಭೆಯಿಂದ ಗ್ರಾಮಚಾವಡಿ ಹತ್ತಿರ, ಗುಳೇದಗುಡ್ಡ ಪುರಸಭೆಯಿಂದ ಬಾಲಾಜಿ ಹತ್ತಿರ, ಹುನಗುಂದ ಪುರಸಭೆಯಿಂದ ಸಂಗಮೇಶ್ವರ ಗುಡಿ ಹತ್ತಿರ ಅಭಿಯಾನ ನಡೆಯಲಿದೆ.

ಮಹಾಲಿಂಗಪುರ ಪುರಸಭೆಯಿಂದ ಬಸವನಗರದಲ್ಲಿರುವ ಬಸವೇಶ್ವರ ನಗರ, ತೇರದಾಳ ಪುರಸಭೆಯಿಂದ ಸಿದ್ದೇಶ್ವರ ಶಾಲೆ, ಕೆರೂರ ಪಟ್ಟಣ ಪಂಚಾಯತಿಯಿಂದ ಗಡೇದ ದುರ್ಗಮ್ಮನ ಗುಡಿ ಹತ್ತಿರ, ಗೈಬುಸಾಬ ದರ್ಗಾ ಹತ್ತಿರ, ಬೀಳಗಿ ಪಟ್ಟಣ ಪಂಚಾಯತಿಯಿಂದ ಗ್ರಾಮಚಾವಡಿ ಬಸವೇಶ್ವರ ಸರ್ಕಲ್ ಹತ್ತಿರ, ಸರ್ಕಾರಿ ಉರ್ದುಶಾಲೆ ಬಸವೇಶ್ವರ ನಗರ, ಅಮೀನಗಡ ಪಟ್ಟಣ ಪಂಚಾಯತಿಯಿಂದ ಮಂಗಳಮ್ಮನ ಗುಡಿಯ ಹತ್ತಿರ, ಕಮತಗಿಯಲ್ಲಿ ಗಾಂಧಿ ಚೌಕ ಹತ್ತಿರ, ಬೆಳಗಲಿಯಲ್ಲಿ ವಿವೇಕಾನಂದ ನಗರ, ಶಿರೂರಿನಲ್ಲಿ ಗ್ರಾಮಚಾವಡಿ ಹತ್ತಿರ ಹಾಗೂ ಲೋಕಾಪೂರದಲ್ಲಿ ದುರ್ಗಾದೇವಿ ಗುಡಿ ಹತ್ತಿರ ಜನತಾ ಪ್ಲಾಟ್‌ನಲ್ಲಿ ಅಭಿಯಾನ ನಡೆಯಲಿದ್ದು ಸಾರ್ವಜನಿಕರು ಅಗತ್ಯ ದಾಖಲಾತಿಗಳೊಂದಿಗೆ ಅಭಿಯಾನದಲ್ಲಿ ಪಾಲ್ಗೊಂಡು ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# ಮಾನಸಿಕ ಸದೃಢತೆಗೆ ಕ್ರೀಡೆ ಅವಶ್ಯ : ಡಿಸಿ ಸಂಗಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.12–ಒತ್ತಡದ ಬದುಕಿನಿಂದ ಹೊರಬಂದು ಮಾನಸಿಕವಾಗಿ ಸದೃಢರಾಗಲು ಕ್ರೀಡಾ ಚಟುವಟಿಕೆಗಳು ಅವಶ್ಯಕವಾಗಿವೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು. ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಶನಿವಾರ ಕಂದಾಯ ಇಲಾಖೆ ನೌಕರರ ಸಂಘ, ಜಿಲ್ಲಾ ಕಂದಾಯ ಇಲಾಖೆ ವಿವಿಧ ವೃಂದ ಸಂಘಗಳ ಸಹಯೋಗದಲ್ಲಿ ಕಂದಾಯ ದಿನಾಚರಣೆ–2025ರ ಅಂಗವಾಗಿ ಹಮ್ಮಿಕೊಂಡ ಎರಡು ದಿನಗಳ ಕ್ರೀಡೋತ್ಸವಕ್ಕೆ ಆಕಾಶದಲ್ಲಿ ಬಲೂನ ಹಾರಿ ಬಿಡುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ಮನುಷ್ಯನಿಗೆ ಮಾನಸಿಕ ಮತ್ತು ಆರೋಗ್ಯ ಮುಖ್ಯವಾಗಿದ್ದು, ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸುವುದು ಮುಖ್ಯವಾಗಿದೆ. ಕ್ರೀಡೆಗಳಿಂದ ಮಾನಸಿಕ, ದೈಹಿಕವಾಗಿ ಸದೃಡರಾಗಲು ಸಾದ್ಯವಾಗುತ್ತದೆ ಎಂದರು.

ಸರಕಾರಿ ನೌಕರರಿಗೆ ಒತ್ತಡ ಜಾಸ್ತಿ. ಕ್ರೀಡೆಗಳಲ್ಲಿ ಭಾಗವಹಿಸುವವರ ಆರೋಗ್ಯತಪಾಸಣೆ ಮಾಡಿದ ವರದಿಯಲ್ಲಿ ನೌಕರರ ರಕ್ತದ ಒತ್ತಡ ಹೆಚ್ಚಿಗಿರುವುದು ಕಂಡುಬಂದಿದೆ. ಆದ್ದ–ರಿಂದ ಒತ್ತಡದ ಬದುಕಿನಿಂದ ಹೊರಬಂದು ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಬೇಕು. ಕ್ರೀಡೆಗಳಲ್ಲಿ ಸ್ಪರ್ಧಾ ಮನೋಭಾವನೆ ಮುಖ್ಯವಾಗಿದೆ ಎಂದು ಸಂಗಪ್ಪ ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ, ಆರೋಗ್ಯವಂತರಾದಾಗ ಮಾತ್ರ ಉತ್ತಮವಾಗಿ ಕೆಲಸ ಮಾಡಲು ಸಾಧ್ಯವಾಗುತ್ತದೆ. ಕೇವಲ ಉತ್ತಮ ಆಹಾರ ಸೇವಿಸಿದರೆ ಸಾಲದು, ಕ್ರೀಡೆ, ವ್ಯಾಯಾಮ ಅಗತ್ಯವಾಗಿವೆ ಎಂದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥರೆಡ್ಡಿ ಮಾತನಾಡಿ, ನೌಕರರು ವರ್ಷಪೂರ್ತಿ ಕೆಲಸ ಮಾಡಬೇಕಾದ ಅನಿವಾರ್ಯತೆಯ ನಡುವೆಯೂ ಕ್ರೀಡೆಗಳಲ್ಲಿ ಪಾಲ್ಗೊಳ್ಳುವುದರಿಂದ ರಕ್ತದೊತ್ತಡ, ಸಕ್ಕರೆ ಕಾಯಿಲೆ ಬರುವದಿಲ್ಲ. ಆರೋಗ್ಯ ಸಹ ಚೆನ್ನಾಗಿ ಇರುತ್ತದೆ ಎಂದು ಹೇಳಿದರು. ಉಪಅರಣ್ಯ ಸಂರಕ್ಷಣಾಧಿಕಾರಿ ರುಥ್ರೇನ್ ಕ್ರೀಡಾಕೂಟ ಆಯೋಜನೆ ಕುರಿತು ಮಾತನಾಡಿದರು. ಪ್ರಾಸ್ತಾವಿಕವಾಗಿ ಮಾತನಾಡಿದ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, 25 ವರ್ಷಗಳ ನಂತರ ಜಿಲ್ಲೆಯಲ್ಲಿ ಕಂದಾಯ ಇಲಾಖೆ ನೌಕರರಿಗೆ ಕ್ರೀಡೋತ್ಸವ ಹಮ್ಮಿಕೊಳ್ಳಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಬಾಗಲಕೋಟೆ ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ಜಮಖಂಡಿ ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ, ಕಂದಾಯ ಇಲಾಖೆ ನೌಕರರ ಜಿಲ್ಲಾ ಘಟಕದ ಅಧ್ಯಕ್ಷ ಚಿದಾನಂದ ವಡವಡಗಿ, ಗೌರವಾಧ್ಯಕ್ಷ ಮಲ್ಲಿಕಾರ್ಜುನ ಗುಡೂರ, ಪ್ರಧಾನ ಕಾರ್ಯದರ್ಶಿ ಶ್ರೀಕಾಂತ ಪಾಟೀಲ, ತಹಶೀಲ್ದಾರಗಳಾದ ವಾಸುದೇವ ಸ್ವಾಮಿ, ಕಾವ್ಯಾಶ್ರೀ ಎಚ್, ಎಫ್.ಬಿ.ಮೊಮ್ಮನ್ನವರ, ನಿಂಗಪ್ಪ ಬಿರಾದಾರ, ವಿನೋದ ಹತ್ತಳ್ಳಿ, ಅಮರೇಶ ಪಮ್ಮಾರ, ಗಿರೀಶ ಸ್ವಾದಿ, ಸದಾಶಿವ ಮಕ್ಕೊಜಿ, ಮಹಾದೇವ ಸನಮೂರೆ, ವಿಜಯಕುಮಾರ ಕಡಕೋಳ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬೂದಿ ಮುಚ್ಚಿದ ಕೆಂಡದಂತಿದೆ ಮುಖ್ಯಮಂತ್ರಿ ಕುರ್ಚಿ ಕದನ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಜು.12–ಕಾಂಗ್ರೆಸ್ ಹೈಕಮಾಂಡ್ ಸಿದ್ದರಾಮಯ್ಯನವರಿಗೆ ಹೆಚ್ಚು ಮಣೆ ಹಾಕುತ್ತಿರುವು ದ–ರಿಂದ ನಿರಾಶರಾಗಿರುವ ಡಿಸಿಎಂ ಡಿ.ಕೆ.ಶಿವಕುಮಾರ್ ಯಾವುದೇ ಸದ್ದು ಮಾಡದೇ ದೆಹಲಿಯಿಂದ ಬೆಂಗಳೂರಿಗೆ ಹಿಂತಿರುಗಿದ್ದಾರೆ.

ಮೂರು ದಿನಗಳ ದೆಹಲಿ ಪ್ರವಾಸದ ವೇಳೆ ನಾನಾ ರೀತಿಯ ಬೆಳವಣಿಗೆಗಳಾದವು. ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂದಿನ 5 ವರ್ಷ ತಾವೇ ಅಧಿಕಾರದಲ್ಲಿ ಮುಂದುವರೆಯುವುದಾಗಿ ಹೇಳುವುದಕ್ಕಷ್ಟೆ ಸೀಮಿತವಾಗದೆ, ಡಿ.ಕೆ.ಶಿವಕುಮಾರ್ ಅವರಿಗೆ ಹೆಚ್ಚಿನ ಶಾಸಕರ ಬೆಂಬಲ ಇಲ್ಲ ಎಂದು ಹೇಳಿದ್ದು ತೀವ್ರ ಚರ್ಚೆಗೆ ಗ್ರಾಸವಾಗಿದೆ. ಸಿದ್ದರಾಮಯ್ಯ ಅವರ ಬೆಂಬಲಿಗರಾದ ರಾಜಣ್ಣ ಅವರು ಸೆಪ್ಟೆಂಬರ್ ಕ್ರಾಂತಿಯ ಬಗ್ಗೆ ಬಹಿರಂಗ ಹೇಳಿಕೆ ನೀಡುವ ಮೂಲಕ ಪಕ್ಷದಲ್ಲಿ ಗೊಂದಲದ ವಾತಾವರಣ ಸೃಷ್ಟಿಸಿದರು. ಆನಂತರದ ಬೆಳವಣಿಗೆಯಲ್ಲಿ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ, ನಾಯಕತ್ವದ ಬದಲಾವಣೆಯಂತಹ ಚರ್ಚೆಗಳು ಆರಂಭಗೊಂಡವು. ಸಹಜವಾಗಿಯೇ ಡಿಕೆಶಿ ಅವರ ಕೆಲ ಬೆಂಬಲಿಗ ಶಾಸಕರು ಮುಖ್ಯಮಂತ್ರಿ ಹುದ್ದೆಯ ಬದಲಾವಣೆ ಸಾಧ್ಯತೆ ಬಗ್ಗೆ ಚರ್ಚೆಯಲ್ಲಿ ಭಾಗವಹಿಸಿದ್ದರು.

ಇದು ವಿಪರೀತಕ್ಕೆ ಹೋದಾಗ ಹೈಕಮಾಂಡ್ ಮಧ್ಯಪ್ರವೇಶಿಸಿತ್ತು. ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಬೆಂಗಳೂರಿಗೆ ಆಗಮಿಸಿ ಶಾಸಕರ ಅಭಿಪ್ರಾಯ ಸಂಗ್ರಹಿಸಿದ್ದರು. ಅದರ ವರದಿಯೊಂದಿಗೆ ದೆಹಲಿಗೆ ತೆರಳಿದ ಅವರು ಅಲ್ಲಿ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳ ಜೊತೆ ಚರ್ಚೆ ನಡೆಸಿದರು. ಇತ್ತ ಬೆಂಗಳೂರಿನಲ್ಲಿ ಹಲವು ಸಚಿವರು ಮಲ್ಲಿಕಾರ್ಜುನ ಖರ್ಗೆಯವರ ಮನೆಗೆ ಭೇಟಿ ನೀಡಿ ಮಾತುಕತೆ ನಡೆಸಿರುವ ದಿಢೀರ್ ಬೆಳವಣಿಗೆ ಅನುಮಾನ ಹುಟ್ಟಿಸಿತ್ತು. ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿ ಮುಂದುವರೆಯುತ್ತಾರೆ ಎಂಬುದಕ್ಕೆ ಯಾವುದೇ ತಕರಾರುಗಳಿರಲಿಲ್ಲ. ಖುದ್ದು ಡಿಕೆಶಿಯವರೇ ನನಗೆ ಬೇರೆ ಆಯ್ಕೆಗಳೇನಿವೆ ಎಂದು ಹೇಳುವ ಮೂಲಕ ರಾಜಕೀಯ ರಣರಂಗದಲ್ಲಿ ಶಸ್ತ್ರತ್ಯಾಗ ಮಾಡಿದ್ದರು. ಆದರೂ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಬಲಾಬಲದ ಬಗ್ಗೆ ಪ್ರಶ್ನೆ ಮಾಡುವ ಮೂಲಕ ರಾಜಕೀಯವಾಗಿ ಸವಾಲೆಸೆದಂತಾಗಿದೆ.

ಮುಖ್ಯಮಂತ್ರಿಯವರ ಹೇಳಿಕೆಗೆ ಡಿಕೆಶಿಯವರ ಪರಮಾಪ್ತ ಶಾಸಕರಾದ ಬಸವರಾಜ ಶಿವಗಂಗ ಸೂಕ್ಷ್ಮ ಸ್ವರೂಪದ ತಿರುಗೇಟು ನೀಡಿದ್ದಾರೆ. ಶಾಸಕರ್ಯಾರೂ ಕೈ ಎತ್ತಿ, ಮತ ಹಾಕಿ ಬೆಂಬಲ ಸೂಚಿಸಿಲ್ಲ. ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ ಮುಂದುವರೆಯುವುದರ ಬಗ್ಗೆ ನಮಗೆ ಅಭ್ಯಂತರವಿಲ್ಲ. ಆದರೆ ಡಿಕೆಶಿ ಅವರಿಗೆ ಸಂಖ್ಯಾಬಲ ಇಲ್ಲ ಎಂದು ಹೇಳಿರುವುದು ಸರಿಯಲ್ಲ ಎಂದಿದ್ದಾರೆ. ಈ ರೀತಿಯ ಹೇಳಿಕೆಗಳು ಡಿ.ಕೆ.ಶಿವಕುಮಾರ್ ಬೆಂಬಲಿಗರನ್ನು ರೊಚ್ಚಿಗೇಳುವಂತೆ ಮಾಡಿವೆ. ಸಿದ್ದರಾಮಯ್ಯ ಮತ್ತು ಅವರ ಬೆಂಬಲಿಗರು ಯಾವುದೇ ರೀತಿಯ ಹೇಳಿಕೆ ನೀಡಿದರೂ ಹೈಕಮಾಂಡ್ ಅದಕ್ಕೆ ಪ್ರತಿಕ್ರಿಯೆ ನೀಡದೇ ಬೆಂಬಲಿಸುತ್ತಿದೆ. ಡಿ.ಕೆ.ಶಿವಕುಮಾರ್ ಬೆಂಬಲಿಗರು ಮಾತನಾಡಿದರೆ ಪಕ್ಷಕ್ಕೆ ಹಾನಿಯಾಗುತ್ತದೆ ಎಂದು ಆಕ್ಷೇಪಿಸಲಾಗುತ್ತಿದೆ. ಈ ಕಾರಣಕ್ಕೆ ಡಿ.ಕೆ.ಶಿವಕುಮಾರ್ ಒಳಗೊಳಗೇ ಅಸಮಾಧಾನದಿಂದ ಕುದಿಯುತ್ತಿದ್ದು, ದೆಹಲಿಯಲ್ಲಿದ್ದರೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿರೋಧಪಕ್ಷದ ನಾಯಕ ರಾಹುಲ್‌ಗಾಂಧಿಯವರನ್ನು ಭೇಟಿ ಮಾಡದೇ ಬೆಂಗಳೂರಿಗೆ ಮರಳಿದ್ದಾರೆ. ಸಿದ್ದರಾಮಯ್ಯ ನಿನ್ನೆ ಮಲ್ಲಿಕಾರ್ಜುನ ಖರ್ಗೆಯವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ. ಆದರೆ ಡಿ.ಕೆ.ಶಿವಕುಮಾರ್ ಪ್ರಿಯಾಂಕ ಗಾಂಧಿಯವರನ್ನು ಹೊರತುಪಡಿಸಿದರೆ ವರಿಷ್ಠಮಂಡಳಿಯ ನಾಯಕರನ್ನು ಮಾತನಾಡಿಸದೆ ತಮ ಪಾಡಿಗೆ ತಾವು ವಾಪಸ್ ಆಗಿರುವುದು ಕಾಂಗ್ರೆಸ್‌ನಲ್ಲಿ ಯಾವುದೂ ಸರಿ ಇಲ್ಲ ಎಂಬ ಚರ್ಚೆಗಳಿಗೆ ಇಂಬು ನೀಡಿದೆ.

# ಕಾಂಗ್ರೆಸ್ ಯುವ ಮುಖಂಡ ಶಶಿಕಾಂತಗೆ ಜನ್ಮದಿನ ಸಂಭ್ರಮ, ಎಂಎಲ್ಸಿ ಭೀಮರಾವ ಪಾಟೀಲರಿಂದ ಅದ್ದೂರಿ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ ಪಟ್ಟಣದ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರ ಗೃಹ ಕಚೇರಿಯಲ್ಲಿ ಹಂದಿಕೇರಾ ಕಾಂಗ್ರೆಸ್ ಯುವ ಮುಖಂಡ ಶಿಶಿಕಾಂತ ಮೇತ್ರ ಜನ್ಮದಿನ ಕಾರ್ಯಕ್ರಮ ಆಚರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಎಂಎಲ್ಸಿ ಭೀಮರಾವ ಪಾಟೀಲ್ ಸನ್ಮಾನಿ ಶುಭಕೋರಿದರು. ಬಳಿಕ ಹಂದಿಕೇರಾ ಗ್ರಾಮದ ಕಾಂಗ್ರೆಸ್ ಯುವ ಕಾರ್ಯಕರ್ತರು ಶುಭ ಕೋರಿ ಪರಸ್ಪರ ಸಿಹಿ ವಿನಿಮಯ ಮಾಡಿಕೊಂಡಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಹಂದಿಕೇರಾ ಕಾಂಗ್ರೆಸ್ ಯುವ ಕಾರ್ಯಕರ್ತರು ಉಪಸ್ಥಿತರಿದ್ದರು.




ಕಮಲನಗರ : ಪಟ್ಟಣದ ವಿನಯ್ ಕುಮಾರ್ ಹಿರೇಮಠ ಇವರು ಸೈಕಲ್‌ನಲ್ಲಿ 51 ಶಕ್ತಿ ಪೀಠಗಳಿಗೆ ಹೋಗುತ್ತಿದ್ದು, ಅವರಿಗೆ ಗ್ರಾಮಸ್ಥರು ಶುಭ ಕೋರಿದರು.ಈ ಸಂದರ್ಭದಲ್ಲಿಕರವೇ ತಾಲೂಕ ಅಧ್ಯಕ್ಷರು ಮಂಜುನಾಥ್ ಸ್ವಾಮಿ, ಪ್ರಶಾಂತ್ ಖಾನಾಪೂರ, ಸಂಗಮೇಶ್ ಜೀರೋಬಿ,ನೀಲಕಂಠ ಸ್ವಾಮಿ, ಬಸವರಾಜ ಆಕಾಶ ಸ್ವಾಮಿ,ಅಜಯ ಪಾಟೀಲ ಮಲ್ಲು ನವಡ್ ಸಂಜು ಕುಮಾರ್ ಸೋಲಾಪುರೆ ಸಂತೋಷ ಸೋಲಾಪುರ ಆನಂದ ನವಾಡಿ ಸೇರಿ ದಂತೆ ಇನ್ನಿತರ ಇದ್ದರು.

# ಇಂಜಿನಿಯರಿಂಗ್‌ನಲ್ಲಿ ಶೈಸ್ತಾ ಫಾತಿಮಾ ಜುನೈದಿ ಸಾಧನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.12: ಖಾಜಾ ಬಂದೇ ನವಾಜ್ ಇಂಜನಿಯರಿಂಗ್ ಕಾಲೇಜಿನ ಸೈನ್ಸ್ ಮತ್ತು ಎಂಜಿನಿಯರಿಂಗ್ ಬಿಇ ಅಂತಿಮ ಸೆಮೆಸ್ಟರ್‌ನಲ್ಲಿ ಶೈಸ್ತಾ ಫಾತಿಮಾ ಜುನೈದಿ ಅವರು 9.65 ಸಿಜಿಪಿಎ ಗಳಿಸುವ ಮೂಲಕ ಸಂಸ್ಥೆಗೆ ಕೀರ್ತಿ ತಂದಿದ್ದಾರೆ. ಶೈಸ್ತಾ ಫಾತಿಮಾ ಅವರು ಸಂಜೆ ಕನ್ನಡ ದಿನಪತ್ರಿಕೆಯ ಛಾಯಾಗ್ರಾಹಕ ಎಂ.ಡಿ. ಮುಕ್ತಾರುದ್ದೀನ್ ಅವರ ಪುತ್ರಿ.



ಪುತ್ರಿಯ ಸಾಧನೆಯ ಕುರಿತು ಎಂ.ಡಿ. ಮುಕ್ತಾರುದ್ದೀನ್ ಅವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಶೈಸ್ತಾ ಶೈಕ್ಷಣಿಕ ಸಾಧನೆಯು ಆಕೆಯ ಸಮರ್ಪಣಾ ಭಾವ ಮತ್ತು ಕಠಿಣ ಪರಿಶ್ರಮ ಮತ್ತು ತಂತ್ರಜ್ಞಾನದ ಜ್ಞಾನದ ಮೇಲಿನ ಉತ್ಸಾಹವನ್ನು ಪ್ರತಿಬಿಂಬಿಸುತ್ತಿದೆ. ಆಕೆಯ ಸಾಧನೆ ಕೇವಲ ನಮ್ಮ ಕುಟುಂಬಕ್ಕೆ ಅಷ್ಟೇ ಅಲ್ಲ, ಇಡೀ ಸಂಸ್ಥೆಗೆ ಮತ್ತು ಇಂಜಿನಿಯರಿಂಗ್ ಕ್ಷೇತ್ರದಲ್ಲಿ ಒಂದು ಮೈಲುಗಲ್ಲು. ಇಂಜಿನಿಯರಿಂಗ್ ಕ್ಷೇತ್ರದಲ್ಲಿ ಯುವತಿಯರಿಗೆ ಶೈಸ್ತಾ ಫಾತಿಮಾ ಜುನೈದಿ ಸ್ಫೂರ್ತಿ ಹಾಗೂ ಪ್ರೇರಣೆ ಆಗಿದ್ದಾರೆ ಎಂದು ಅವರು ಬಣ್ಣಿಸಿದ್ದಾರೆ. ಶೈಸ್ತಾ ಅವರು ಈಗ ಉನ್ನತ ವ್ಯಾಸಂಗವನ್ನು ಮುಂದುವರಿಸಲು ಅಥವಾ ತಂತ್ರಜ್ಞಾನ ಉದ್ಯಮದಲ್ಲಿ ಭರವಸೆಯ ವೃತ್ತಿಜೀವನವನ್ನು ಪ್ರಾರಂಭಿಸುವ ಗುರಿಯನ್ನು ಹೊಂದಿದ್ದಾರೆ. ಅವರ ಯಶಸ್ಸಿನ ಕಥೆ ಅನೇಕರಿಗೆ ಸ್ಫೂರ್ತಿಯಾಗಿ ನಿಂತಿದೆ ಮತ್ತು ಕಲಬುರ್ಗಿಯ ಕೆಬಿಎನ್ ಎಂಜಿನಿಯರಿಂಗ್ ಕಾಲೇಜಿನ ಶೈಕ್ಷಣಿಕ ಶಕ್ತಿ ಮತ್ತು ವಿದ್ಯಾರ್ಥಿ-ಕೇಂದ್ರಿತ ವಾತಾವರಣವನ್ನು ಎತ್ತಿತೋರಿಸುತ್ತದೆ ಎಂದು ಅವರು ಕೊಂಡಾಡಿದ್ದಾರೆ.

# ಬಸವರಾಜ್ ಹೆಸರೂರ, ಹಾಲಯ್ಯ ಹುಡೆಜಾಲಿ, ನಾಗರಾಜ್ ಇಂಗಳಗಿಯವರಿಗೆ ಸಿಜಿಕೆ ರಂಗ ಪುರಸ್ಕಾರ







ಮಲ್ಲಮ್ಮ ನುಡಿ ವಾರ್ತೆ


ಕೊಪ್ಪಳ:ಜು.12: ಕೊಪ್ಪಳ ಜಿಲ್ಲೆಯ ಮೂವರು ರಂಗಕರ್ಮಿಗಳಿಗೆ ಸಿಜಿಕೆ ರಂಗಪುರಸ್ಕಾರ ಘೋಷಣೆ ಮಾಡಲಾಗಿದೆ. ಜಿಲ್ಲೆಯ ಹಿರಿಯ ರಂಗಕರ್ಮಿಗಳಾದ ಬಸವರಾಜ್ ಹೆಸರೂರು, ಹಾಲಯ್ಯ ಹುಡೇಜಾಲಿ ಹಾಗೂ ನಾಗರಾಜ್ ಇಂಗಳಗಿ ಇವರಿಗೆ ಸಿಜಿಕೆ ರಂಗ ಪುರಸ್ಕಾರಗಳನ್ನು ಘೋಷಣೆ ಮಾಡಲಾಗಿದೆ.

ಕೊಪ್ಪಳ ವಿಶ್ವವಿದ್ಯಾಲಯ, ಕರ್ನಾಟಕ ಬೀದಿನಾಟಕ ಅಕಾಡೆಮಿ ಬೆಂಗಳೂರು, ಕವಿ ಸಮೂಹ, ಸೇವಾ & ಡೇವ್ಸ್. ಬಹುತ್ವ ಬಳಗ ಕೊಪ್ಪಳ ಸಂಯುಕ್ತ ಆಶ್ರಯದಲ್ಲಿ ನಡೆಯಲಿರುವ ಸಿಜಿಕೆ ರಂಗದಿನಾಚರಣೆಯಂದು ಸಿಜಿಕೆ ರಂಗಪುರಸ್ಕಾರ ಪ್ರಶಸ್ತಿಗಳನ್ನು ವಿತರಿಸಲಾಗುವುದು.

ಇದೇ ಜುಲೈ 14, 2025 ಸೋಮವಾರ ಬೆಳಗ್ಗೆ 11 ಗಂಟೆಗೆ ಕೊಪ್ಪಳ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಕಾರ್ಯಕ್ರಮ ನಡೆಯಲಿದ್ದು ಕರ್ನಾಟಕ ನಾಟಕ ಅಕಾಡೆಮಿ, ಬೆಂಗಳೂರು ಅಧ್ಯಕ್ಷರಾದ ಕೆ.ವಿ.ನಾಗರಾಜಮೂರ್ತಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ಕೊಪ್ಪಳ ವಿಶ್ವವಿದ್ಯಾಲಯದ ಮಾನ್ಯ ಕುಲಪತಿಗಳಾದ ಪ್ರೊ. ಬಿ.ಕೆ.ರವಿ ವಹಿಸಿಕೊಳ್ಳಲಿದ್ದಾರೆ. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಚಾಂದ್ ಪಾಷಾ ಕಿಲ್ಲೆದಾರ್ ಸದಸ್ಯರು, ಕರ್ನಾಟಕ ನಾಟಕ ಅಕಾಡೆಮಿ ಬೆಂಗಳೂರು, ನಾರಾಯಣರಾವ್ ಕುಲಕರ್ಣಿ ಹಿರಿಯ ಪತ್ರಕರ್ತರು, ಕುಷ್ಟಗಿ. ಪ್ರೊ. ಕೆ.ವಿ.ಪ್ರಸಾದ ಕುಲಸಚಿವರು (ಪ್ರಭಾರ) ಕೊಪ್ಪಳ ವಿಶ್ವವಿದ್ಯಾಲಯ, ಸುರೇಶ್ ಡಿ. ಸಿಪಿಐ, ಕೊಪ್ಪಳ ಗ್ರಾಮೀಣ ಠಾಣೆ, ಕೊಪ್ಪಳ, ಡಾ. ಸುರೇಶ್ ಜಿ. ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕೊಪ್ಪಳ , ತಿಮ್ಮಾರಡ್ಡಿ ಮೇಟಿ ಆಡಳಿತಾಧಿಕಾರಿಗಳು, ಕೊಪ್ಪಳ ವಿಶ್ವವಿದ್ಯಾಲಯ ಆಗಮಿಸಲಿದ್ದಾರೆ. ಆಸಕ್ತ ರಂಗ ಅಭಿಮಾನಿಗಳು ಕಾರ್ಯಕ್ರಮಕ್ಕೆ ಆಗಮಿಸಬೇಕೆಂದು ಸಂಘಟಕರಾದ ಸಿರಾಜ್ ಬಿಸರಳ್ಳಿ, ರಾಜಬಕ್ಷಿ ಹೆಚ್. ವಿ. ಪ್ರಕಟಣೆಯಲ್ಲಿ ಕೋರಿದ್ದಾರೆ.

# ಫೋಟೋ ನೆಪದಲ್ಲಿ ಪತಿಯನ್ನು ನದಿಗೆ ತಳ್ಳಿದ ಪತ್ನಿ

ರಾಯಚೂರು:ಜು.12: ಫೋಟೋ ತೆಗೆಯುವ ನೆಪದಲ್ಲಿ ಪತ್ನಿ ತನ್ನ ಪತಿಯನ್ನೇ ನದಿಗೆ ತಳ್ಳಿದ ಘಟನೆ ರಾಯಚೂರಿನಲ್ಲಿ ನಡೆದಿದೆ. ರಾಯಚೂರಿನ ಗುರ್ಜಾಪುರ ಬ್ರಿಡ್ಜ್ ಕಂ ಬ್ಯಾರೇಜ್ ಬಳಿ ನಡೆದಿದ್ದು, ಫೋಟೂ ಶೂಟ್ ನೆಪದಲ್ಲಿ ಪತ್ನಿಯೇ ತನ್ನ ಪತಿಯನ್ನು ನದಿಗೆ ತಳ್ಳಿದ್ದಾರೆ. ಇದನ್ನು ಕಂಡ ಸ್ಥಳೀಯರು ಕೂಡಲೇ ಹಗ್ಗಗಳ ಸಹಾಯದಿಂದ ಪತಿಯನ್ನು ರಕ್ಷಣೆ ಮಾಡಿದ್ದಾರೆ. ಈ ಕುರಿತ ವಿಡಿಯೋ ಇದೀಗ ವ್ಯಾಪಕ ವೈರಲ್ ಆಗುತ್ತಿದೆ. ರಾಯಚೂರಿನ ಶಕ್ತಿನಗರ ನಿವಾಸಿ ತಾತಪ್ಪ ನೀರಿಗೆ ಬಿದ್ದ ಪತಿಯಾಗಿದ್ದು, ಅವರ ಪತ್ನಿ ಗದ್ದೆಮ್ಮ ಅವರೇ ನೀರಿಗೆ ತಳ್ಳಿದ್ದಾರೆ. ನೀರಿಗೆ ಬಿದ್ದ ಕೂಡಲೇ ನದಿಯಲ್ಲಿ ಈಜಿ ಕಲ್ಲು ಬಂಡೆಯ ಮೇಲೆ ನಿಂತು



ಕಾಪಾಡಿ ಅಂತ ಕೂಗಿಕೊಂಡಿದ್ದಾರೆ. ಈ ವೇಳೆ ಬ್ರಿಡ್ಜ್ ಕಂ ಬ್ಯಾರೇಜ್ ಮಾರ್ಗವಾಗಿ ಹೊರಟಿದ್ದ ಬುಲೆರೋ ವಾಹನದಲ್ಲಿದ್ದವರು ಹಾಗೂ ಕೆಬಿಜೆಎನ್‌ಎಲ್ ಸಿಬ್ಬಂದಿ, ಸ್ಥಳೀಯರು ನದಿಗೆ ಹಗ್ಗ ಎಸೆದು ತಾತಪ್ಪ ಅವರನ್ನು ರಕ್ಷಿಸಿದ್ದಾರೆ. ನದಿಯಿಂದ ಹೊರಗೆ ಬಂದ ಪತಿ ತನ್ನ ಪತ್ನಿಯ ವಿರುದ್ಧ ಗರಂ ಆಗಿದ್ದು, ಫೋನ್‌ನಲ್ಲಿ ಸಂಬಂಧಿಕರಿಗೆ ಮಾಹಿತಿ ನೀಡಿದ್ದಾರೆ. ಕಳೆದ ಎರಡು ದಿನಗಳ ಹಿಂದೆ ನಡೆದ ಘಟನೆಯ ವಿಡಿಯೋ ಈಗ ವೈರಲ್ ಆಗಿದೆ. ಯಾದಗಿರಿಯ ವಡಗೆರಾ ತಾಲೂಕಿನ ಗದ್ದೆಮ್ಮ ಹಾಗೂ ತಾತಪ್ಪ ಕಳೆದ ಏ.10ರಂದು ಮದುವೆಯಾಗಿದ್ದರು. ಮದುವೆಯಾಗಿ ಮೂರು ತಿಂಗಳಲ್ಲೇ ಸಂಸಾರದಲ್ಲಿ ಬಿರುಕು ಮೂಡಿ, ಜಗಳವಾಡುತ್ತಿದ್ದರು. ಆ ಜಗಳವೇ ಈ ಘಟನೆಗೆ ಕಾರಣ ಎಂದು ತಾತಪ್ಪ ಆರೋಪಿಸಿದ್ದಾರೆ. ಇನ್ನು ಘಟನೆ ಕುರಿತು ಮಾತನಾಡಿರುವ ಪತಿ ತಾತಪ್ಪ, 'ಪತ್ನಿಯನ್ನು ನಂಬಿ ಫೋಟೋ ತೆಗೆಸಿಕೊಳ್ಳಲು ನಿಂತಿದ್ದೆ. ಆದರೆ ಆಕೆ ನನ್ನನ್ನು ನದಿಗೆ ತಳ್ಳಿದ್ದಾಳೆ ಎಂದು ತಾತಪ್ಪ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಆದರೆ ಪತ್ನಿ ಮಾತ್ರ ಈ ಆರೋಪ ಅಲ್ಲಗಳೆದಿದ್ದು, ನಾನು ಅವರನ್ನು ನದಿಗೆ ತಳ್ಳಿಲ್ಲ. ಅವರೇ ಕಾಲು ಜಾರಿ ನದಿಗೆ ಬಿದ್ದರು ಎಂದು ಹೇಳಿದ್ದಾರೆ. ಘಟನೆ ಬಳಿಕ ಒಟ್ಟಾಗಿಯೇ ಬೈಕ್‌ನಲ್ಲಿ ಪತಿ-ಪತ್ನಿ ಹೊರಟು ಹೋಗಿದ್ದಾರೆ. ರಾಯಚೂರು ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಗಡಿ ಭಾಗದ ಅಭಿವೃದ್ಧಿಗಾಗಿ ಸರ್ಕಾರ ಸದಾ ಬದ್ಧ : ಈಶ್ವರ ಖಂಡ್ರೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.12: ಗಡಿ ಭಾಗದ ಅಭಿವೃದ್ಧಿಗಾಗಿ ಸರ್ಕಾರ ಸದಾ ಬದ್ಧವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅಭಿಪ್ರಾಯಪಟ್ಟರು.

ತಾಲೂಕಿನ ಬಾಜೋಳಗಾ ಕ್ರಾಸ್ ಹತ್ತಿರದ ರಾಹುಲ ಶಿಕ್ಷಣ ಸಂಸ್ಥೆಯ ಬುದ್ಧಪ್ರಿಯಾ ಪ್ರೌಢಶಾಲೆ ಮದಕಟ್ಟಿಯಲ್ಲಿ ಆಯೋಜಿಸಿದ್ದ ನೂತನ ವರ್ಗಕೋಣೆಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು. ಗಡಿ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಸಾಕಷ್ಟು ಅನುದಾನ ನೀಡಿ, ಗಡಿ ಭಾಗದ ಶಾಲಾ, ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳನ್ನು ವದಗಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ಮದಕಟ್ಟಿಯ ಬುದ್ಧಪ್ರಿಯಾ ಪ್ರೌಢಶಾಲೆಯ ನೂತನ ವರ್ಗಕೋಣೆಗಳ ಕಟ್ಟಡಕ್ಕೆ ಅನುದಾನ ನೀಡಿ, ಇಲ್ಲಿಯ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡಲಾಗಿದೆ. ಗಡಿ ಭಾಗದ ಅಭಿವೃದ್ಧಿಗಾಗಿ ನಮ್ಮ ಸರ್ಕಾರ ಸದಾ ಬದ್ಧವಾಗಿದೆ ಎಂದು ಹೇಳಿದರು. ವೈಶಾಲಿ ನಗರ ಅಣದೂರಿನ ಭಂತೆ ಧಮ್ಮಾನಂದ ಸಾನಿಧ್ಯವಹಿಸಿ ಮಾತನಾಡಿದರು. ರಾಹುಲ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ತಿಪ್ಪಣ್ಣ ಶಿವಪೂರೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧೀಕಾರದ ಅಧ್ಯಕ್ಷ ಸೋಮಣ್ಣಾ ಬೇವಿನಮರದ ಮಾತನಾಡಿ, ಗಡಿ ಅಭಿವೃದ್ಧಿ ಪ್ರಾಧಿಕಾರದಿಂದ ಸಿಗುವ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು.



ವಿಶೇಷ ಸನ್ಮಾನ: ಇದೇವೇಳೆ ಗಣನೀಯ ಸೇವೆ ಸಲ್ಲಿಸಿದ ವ್ಯಕ್ತಿಗಳಾದ ದಶರಥ ದೊಡ್ಡಿ, ನೀಲಕಂಠ ಸಿಂಧೆ, ಎಲ್.ಜಿ.ಗುಪ್ತಾ, ಶಂಕರರಾವ ದೊಡ್ಡಿ, ಶ್ರಾವಣಕುಮಾರ ಗಾಯಕವಾಡ, ಡಾ। ಕಾಶಿನಾಥ ಚಲವಾ, ಜೈರಾಜ ದಾಬಶೆಟ್ಟಿ, ಮಲ್ಲಿಕಾರ್ಜುನ ಹಲಮಂಡಗೆ, ಶಿವಕುಮಾರ ಫುಲಾರಿ, ರಾಜೆಪ್ಪ ಪಾಟೀಲ, ನಾಗಭೂಷಣ ಮಾಮಡಿ, ಸುಭಾಷ ಹುಲಸೂರೆ, ದತ್ತು ಕಾಟಕರ, ರಾಮರಾವ ತೋರಣೆ, ಬಾಲಾಜಿ ಕಾಂಬಳೆ, ಮಲ್ಲಿಕಾರ್ಜುನ ಮೆಟಾರೆ, ದಶರಥ ಗುರು, ಭೀಮಣ್ಣಾ ಕೊಂಕಣೆ, ಸೂರ್ಯಕಾಂತ ಸುಂಟೆ, ನಿರಂಜಪ್ಪ ಪಾತ್ರೆ, ಅಶೋಕ ಬರ್ಮಾ ರವರಿಗೆ ರಾಹುಲ ಶಿಕ್ಷಣ ಸಂಸ್ಥೆಯ ವತಿಯಿಂದ ವಿಶೇಷ ಸನ್ಮಾನ ಮಾಡಲಾಯಿತು.

ಎಸ್.ಸಿ.ಎಸ್.ಟಿ ಸಮನ್ವಯ ಸಮಿತಿಯ ಅಧ್ಯಕ್ಷ ಪ್ರಾಂಶುಪಾಲ ಮಲ್ಲಿಕಾರ್ಜುನ ಕಾಂಬಳೆ ಶೈಕ್ಷಣಿಕ ಬೆಳವಣಿಗೆಯ ಬಗ್ಗೆ ಮಾತನಾಡಿದರು. ಕಸಾಪ ತಾಲೂಕು ಅಧ್ಯಕ್ಷ ನಾಗಭೂಷಣ ಮಾಮಡಿ, ಗಡಿ ಭಾಗದಲ್ಲಿ ಕನ್ನಡದ ಬೆಳವಣಿಗೆಯ ಬಗ್ಗೆ ಮಾತನಾಡಿದರು. ಮುಖ್ಯ ಶಿಕ್ಷಕ ಸಂಜೀವಕುಮಾರ ಬಿರಾದಾರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಗ್ರಾ.ಪಂ. ಅಧ್ಯಕ್ಷೆ ಪಾರ್ವತಿ ಲಿಂಗರಾಜ ಖಂಡಾಳೆ, ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರೆ, ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ, ಕಾರ್ಯದರ್ಶಿ ರಾಜೆಪ್ಪ ಪಾಟೀಲ, ಕ್ಷೇತ್ರ ಸಮನ್ವಯಾಧಿಕಾರಿ ಮನೋಹರ ಹೊಳಕರ, ಅಕ್ಷರದಾಸೋಹ ಯೋಜನೆಯ ಮಲ್ಲಿನಾಥ ಸಜ್ಜನ್, ಗ್ಯಾರೆಂಟಿ ಯೋಜನೆ ಅನುಷ್ಠಾನದ ಅಧ್ಯಕ್ಷ ಹಣಮಂತರಾವ ಚವ್ಹಾಣ ಉಪಸ್ಥಿತರಿದ್ದರು. ಅನಿಶಾ, ಸಂಗೀತಾ, ಮಂಜುಳಾ ರವರಿಂದ ದೇಶಭಕ್ತಿಗೀತೆ ನೃತ್ಯ ಮಾಡಲಾಯಿತು. ಪ್ರಭು ಕಾಂಬಳೆ ಸ್ವಾಗತಗೀತೆ ಹಾಡಿದರು. ನಿವೃತ್ತ ಮುಖ್ಯ ಶಿಕ್ಷಕ ಶ್ರೀಕಾಂತ ಮೂಲಗೆ ಸ್ವಾಗತಿಸಿದರು. ದೀಪಕ ಥಮಕೆ ನಿರೂಪಿಸಿದರು. ಜೈದೀಪ ಶೇರಿಕಾರ ವಂದಿಸಿದರು.

# ಆಟೋಕ್ಕೆ ಡಿಕ್ಕಿ ಹೊಡೆದು ಉರುಳಿಬಿದ್ದ ಶಾಲಾ ಬಸ್: ವಿದ್ಯಾರ್ಥಿಗಳು ಅಪಾಯದಿಂದ ಪಾರು

ಮಲ್ಲಮ್ಮ ನುಡಿ ವಾರ್ತೆ

ಅಫಜಲಪುರ,ಜು.12: ಶಾಲೆಯಿಂದ ಮಕ್ಕಳನ್ನು ಮನೆಗೆ ಕರೆದುಕೊಂಡು ಹೋಗುತ್ತಿರುವಾಗ ರಸ್ತೆ ಪಕ್ಕದಲ್ಲಿ ನಿಂತಿದ್ದ ಆಟೋವೊಂದಕ್ಕೆ ಡಿಕ್ಕಿ ಹೊಡೆದ ಪರಿಣಾಮ ಶಾಲಾ ಬಸ್ ಉರುಳಿಬಿದ್ದ ದುರಂತ ತಾಲ್ಲೂಕಿನ ಬಂಕಲಗಾ ಗ್ರಾಮದಲ್ಲಿ ಶುಕ್ರವಾರ ಸಂಜೆ ಸಂಭವಿಸಿದೆ. ಅದೃಷ್ಟವಶಾತ್ ಶಾಲಾ ಬಸ್‌ನಲ್ಲಿದ್ದ ಎಲ್ಲ ವಿದ್ಯಾರ್ಥಿಗಳು ಸುರಕ್ಷಿತವಾಗಿದ್ದು, ಅಪಾಯದಿಂದ ಪಾರಾದರು. ಶಾಲಾ ಬಸ್‌ನಲ್ಲಿ ಐವತ್ತಕ್ಕೂ ಹೆಚ್ಚು ವಿದ್ಯಾರ್ಥಿಗಳು ಇದ್ದು ಎಲ್ಲರೂ ಅಪಾಯದಿಂದ ಪಾರಾಗಿದ್ದಾರೆ. ತಾಲ್ಲೂಕಿನ ಶಿರವಾಳ್ ಗ್ರಾಮದ ಶ್ರೀ ವೀರ ಸಂಗಮೇಶ್ವರ ಶಿಕ್ಷಣ ಸಂಸ್ಥೆಯ ಶಾಲಾ ವಾಹನ, ಶಾಲೆ ಮುಗಿದ ಬಳಿಕ ಮಕ್ಕಳನ್ನು ಕರೆದುಕೊಂಡು ಉಡಚಾಣ ಮತ್ತು ಉಡಚಾಣ ಹಟ್ಟಿ ಗ್ರಾಮಕ್ಕೆ ಹೋಗುತ್ತಿರುವಾಗ ಚಾಲಕನ ನಿರ್ಲಕ್ಷ್ಯದಿಂದಾಗಿ ಬಂಕಲಗಾ ಬಸ್ ನಿಲ್ದಾಣದ ಎದುರಲ್ಲೇ ಬಸ್



ಉರುಳಿಬಿದ್ದಿದೆ. ತಕ್ಷಣವೇ ಬಸ್ ನಿಲ್ದಾಣದಲ್ಲಿ ನಿಂತಿದ್ದ ಸಾರ್ವಜನಿಕರು ದೌಡಾಯಿಸಿ ಶಾಲಾ ವಾಹನದ ಹಿಂದೆ ಮತ್ತು ಮುಂದಿನ ಎರಡೂ ಕಡೆಯ ಗ್ಲಾಸ್ ಒಡೆದು ಮಕ್ಕಳನ್ನು ಸುರಕ್ಷಿತವಾಗಿ ಹೊರಗಡೆ ತೆಗೆದರು. ಮಕ್ಕಳಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ತಕ್ಷಣವೇ ಖಾಸಗಿ ಆಸ್ಪತ್ರೆಗೆ ಸೇರಿಸಲಾಗಿದೆ. ಈ ಕುರಿತು ಅಫಜಲಪುರ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ತನಿಖೆ ಮುಂದುವರೆದಿದೆ. ಈ ಕುರಿತು ಕ್ಷೇತ್ರ ಶಿಕ್ಷಣಾಧಿಕಾರಿ ಯುವರಾಜ್ ಗಾಡಿ ಅವರು ಪ್ರತಿಕ್ರಿಯಿಸಿ, ಶ್ರೀ ವೀರಸಂಗಮೇಶ್ವರ ಸಂಸ್ಥೆಯ ಶಾಲಾ ವಾಹನ ಉರುಳಿಬಿದ್ದು ಆರು ಮಕ್ಕಳಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಇನ್ನೂಳಿದ ಮಕ್ಕಳಿಗೆ ಯಾವುದೇ ತೊಂದರೆಯಾಗಿಲ್ಲ. ತಾಲೂಕಿನಲ್ಲಿರುವ ಖಾಸಗಿ ಶಾಲೆಗಳ ಮುಖ್ಯಸ್ಥರಿಗೆ ಈಗಾಗಲೇ ನೋಟಿಸ್ ನೀಡಿ ಮಾಹಿತಿ ಪಡೆಯಲಾಗಿದೆ. ಶಿಕ್ಷಣ ಇಲಾಖೆಯ ನಿಯಮಗಳು ಪಾಲಿಸದಿದ್ದರೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

# ದಿ.ಶೇಷಪ್ಪ ಬಡಿಗೇರಗೆ ನುಡಿನಮನ 'ಜಾನಪದ ಗೊಂಚಲು' ಪುಸ್ತಕ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.12-ಆಚರಣೆಗಳು ಸೂತಕದ ಮೂಲಕ ಕೊನೆಗೊಳ್ಳದೆ ಸಂಸ್ಕೃತಿಯ ಮೂಲಕ ಆರಂಭಗೊಳ್ಳಬೇಕು ಎಂದು ಮುರನಾಳ ಮಳೆರಾಜೇಂದ್ರಸ್ವಾಮಿ ಮಠದ ಪೂಜ್ಯರಾದ ಜಗನ್ನಾಥ ಮಹಾಸ್ವಾಮಿಗಳು ಹೇಳಿದರು.

ತಾಲೂಕಿನ ಬೆಣ್ಣೂರ ಗ್ರಾಮದಲ್ಲಿ ನಡೆದ ವಿಶ್ವಕರ್ಮ ಸಮುದಾಯದ ಹಿರಿಯರಾದ ದಿ.ಶೇಷಪ್ಪ ಬಡಿಗೇರ ಅವರಿಗೆ ನುಡಿನಮನ ಹಾಗೂ 'ಜಾನಪದ ಗೊಂಚಲು' ಪುಸ್ತಕ ಬಿಡುಗಡೆ ಕಾರ್ಯಕ್ರಮದ ಸಾನಿಧ್ಯವಹಿಸಿ ಮಾತನಾಡಿದ ಅವರು, ಬೆಣ್ಣೂರ ಗ್ರಾಮದಲ್ಲಿ ಅಷ್ಟೇ ಅಲ್ಲದೆ ಸುತ್ತಮುತ್ತಲಿನ 7 ಗ್ರಾಮಗಳಲ್ಲಿ ಬಡಿಗತನ ಮಾಡುವ ಮೂಲಕ ಹೆಸರುವಾಸಿಯಾಗಿದ್ದ ದಿ.ಶೇಷಪ್ಪ ಬಡಿಗೇರ ಶ್ರದ್ಧಾಂಜಲಿ ದಿನದಂದು ಅವರಿಗೆ ನುಡಿ ನಮನ ಹಾಗೂ ಜಾನಪದ ಗೊಂಚಲು ಪುಸ್ತಕ ಬಿಡುಗಡೆ ಮಾಡಿದ್ದು ಶ್ಲಾಘನೀಯವಾಗಿದೆ. ಸಮಾರಾಧನೆ ಕಾರ್ಯಕ್ರಮಗಳು ಸೂತಕದ ಮೂಲಕ ಕೊನೆಗೊಳ್ಳದೆ ಸಂಸ್ಕೃತಿ ಮೂಲಕ ಆಚರಣೆಗಳಾಗಿ ಹೊರಬರಲಿ, ನಮ್ಮ ಪೂರ್ವಜರ ಜ್ಞಾನವನ್ನು ಮುಂದಿನ ಪೀಳಿಗೆಗೆ ಪ್ರಸರಿಸುವ ಕಾರ್ಯವಾಗಬೇಕಿದೆ ಎಂದರು.

ಜಾನಪದ ಗೊಂಚಲು ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಹನಮಂತ ನಿರಾಣಿ, ಸಾಹಿತ್ಯ ಕ್ಷೇತ್ರಕ್ಕೆ ಡಾ.ವೀರೇಶ ಬಡಿಗೇರ ಅವರ ಕೊಡುಗೆ ಅಪಾರವಾಗಿದೆ. ಅವರ ತಂದೆಯವರು ಹಾಕಿ ಕೊಟ್ಟ ಸಂಸ್ಕೃತಿ ಪರಂಪರೆಯನ್ನು ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡು ಸಾಹಿತ್ಯದ ಮೂಲಕ ನಾಡಿನ ಉದ್ದಗಲಕ್ಕೂ ಮನೆ ಮಾತಾಗಿದ್ದಾರೆ, ಜನಪದ ಗೊಂಚಲು ಪುಸ್ತಕದಲ್ಲಿ ಜನಪದ ಕಲೆ, ಸಂಸ್ಕೃತಿ, ಸಂಪ್ರದಾಯಗಳನ್ನು ಮನಮುಟ್ಟುವ ರೀತಿಯಲ್ಲಿ ಕಟ್ಟಿಕೊಟ್ಟಿದ್ದಾರೆ ಎಂದರು.

ಹಂಪಿ ಕನ್ನಡ ವಿಶ್ವವಿದ್ಯಾಲಯದ ಹಿರಿಯ ಪ್ರಾಧ್ಯಾಪಕ ಡಾ.ವೀರೇಶ ಬಡಿಗೇರ ಮಾತನಾಡಿ, ತಂದೆಯವರು ನೀಡಿದ ವೈಚಾರಿಕ ಸಂಸ್ಕಾರವನ್ನು ಮೈಗೂಡಿಸಿಕೊಂಡಿದ್ದೇನೆ. ಸೋಲನ್ನು ಮತ್ತು ಸುಳ್ಳನ್ನು ಯಾವತ್ತು ಪ್ರೀತಿಸಬೇಡಿ, ವೈಚಾರಿಕ ಅನುಭಾವಿಗಳಿಂದ ಸಾವಲಂಬಿಯಾಗಿ ಬದುಕುಬೇಕು ಎಂಬ ಅವರ ಚಿಂತನೆ ನಮ್ಮಲ್ಲಿ ಶಾಶ್ವತವಾಗಿ ನಮ್ಮಲ್ಲಿ ಉಳಿದಿದೆ ಎಂದರು.

ಅಧ್ಯಕ್ಷತೆ ವಹಿಸಿದ ಸಾಹಿತಿ ಎಸ್.ಜಿ.ಕೋಟಿ ಮಾತನಾಡಿ, ಬೆಣ್ಣೂರ ಗ್ರಾಮ ಸಾಹಿತ್ಯ, ಸಂಸ್ಕೃತಿ, ಸಂಶೋಧನೆಗೆ ತನ್ನದೇಯಾದ ಕೊಡುಗೆಯನ್ನು ನೀಡಿದೆ. ದಿ.ಶೇಷಪ್ಪಜ್ಜನವರು ಕರಡಿಮಜಲಿನ ಕಲಾವಿದರಾಗಿ ಗ್ರಾಮವನ್ನು ಬೆಳಗಿಸಿದ್ದಾರೆ ಎಂದರು.

ಸಾಹಿತಿಗಳಾದ ಹೆಚ್.ಎನ್. ಯಾದವಾಡ, ಸಿದ್ದಪ್ಪ ಹುಂಡೇಕಾರ, ವೀರೇಂದ್ರ ಶೀಲವಂತ, ಸಿದ್ದರಾಮ ಶಿರೋಳ, ರಾಜಶೇಖರ ಕಂಬಾರ, ಮುತ್ತಣ್ಣ ಬೆಣ್ಣೂರ, ಕೆ.ಎನ್.ಬಡಿಗೇರ. ಸಿ.ಪಿ.ಮಾಯಾಚಾರ ನುಡಿನಮನ ಸಲ್ಲಿಸಿದರು. ಶಿವು ರಾಂಪೂರ ಸ್ವಾಗತಿಸಿದರು. ಡಾ.ಚಂದ್ರಶೇಖರ ಕಾಳನ್ನವರ ನಿರೂಪಿಸಿದರು. ಶೇಖರ ಗೊಳಸಂಗಿ ವಂದಿಸಿದರು.

ನಂತರ ಹಂಪಿ ಕನ್ನಡ ವಿಶ್ವವಿದ್ಯಾಲಯದ ಸಂಗೀತ ವಿಭಾಗದ ವಿದ್ಯಾರ್ಥಿಗಳು ಸ್ವರ ಶ್ರದ್ಧಾಂಜಲಿ ಸಲ್ಲಿಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.